ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 122 ಸಂಚಿಕೆ- 122 | PAGE-8 ಪುಟ-8 | ಶನಿವಾರ 21.06.2025 | RS.2/- ಬೆಲೆ 2/-

# 'ಭ್ರಷ್ಟ' ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ತೀವ್ರಗೊಳಿಸಿ: ಅಮಿತ್ ಶಾ ಸೂಚನೆ



ಬೆಂಗಳೂರು:ಜೂ.20: 'ಭ್ರಷ್ಟ' ಕಾಂಗ್ರೆಸ್ ಸರ್ಕಾರದ ವಿರುದ್ಧದ ಹೋರಾಟವನ್ನು ತೀವ್ರಗೊಳಿಸುವಂತೆ ಕೇಂದ್ರ ಗೃಹ ಸಚಿವ ಮತ್ತು ಪಕ್ಷದ ಹಿರಿಯ ನಾಯಕ ಅಮಿತ್ ಶಾ ಅವರು ರಾಜ್ಯ ಬಿಜೆಪಿ ಘಟಕಕ್ಕೆ ಸಲಹೆ ಮತ್ತು ಸೂಚನೆ ನೀಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಶುಕ್ರವಾರ ಹೇಳಿದ್ದಾರೆ.

ಆದಿಚುಂಚನಗಿರಿ ವಿಶ್ವವಿದ್ಯಾಲಯ(ಎಸಿಯು) ಬೆಂಗಳೂರು ಕ್ಯಾಂಪಸ್, ಬಿಜಿಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಉದ್ಘಾಟಿಸಲು ಅಮಿತ್ ಶಾ ಇಂದು ಬೆಂಗಳೂರಿಗೆ ಆಗಮಿಸಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, "ಇಂದು ಬೆಳಗ್ಗೆ, ನಾನು, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹಾಗೂ ಶಾಸಕ ಅರವಿಂದ್ ಬೆಲ್ಲದ್ ಅವರೊಂದಿಗೆ ಅಮಿತ್ ಶಾ ಜಿ ಅವರನ್ನು ಭೇಟಿ ಮಾಡಿದೆವು. ಕರ್ನಾಟಕದ ರಾಜಕೀಯ ಸನ್ನಿವೇಶ ಮತ್ತು ಪ್ರಸ್ತುತ ಬೆಳವಣಿಗೆಗಳ ಬಗ್ಗೆ ಚರ್ಚಿಸಿದ್ದೇವೆ" ಎಂದು ಹೇಳಿದರು.

ರಾಜ್ಯ ಸರ್ಕಾರವು ಅಲ್ಪಸಂಖ್ಯಾತರನ್ನು ಓಲೈಸಲು ಮಾತ್ರ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ. ಆದರೆ ಪ್ರಧಾನಿ ನರೇಂದ್ರ ಮೋದಿ 'ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್, ಸಬ್ಕಾ ಪ್ರಾಯಸ್' ಎಂಬ ದೃಷ್ಟಿಕೋನದೊಂದಿಗೆ ಎಲ್ಲಾ ಸಮುದಾಯಗಳಿಗೆ, ಹಿಂದೂಗಳು ಮತ್ತು ಅಲ್ಪಸಂಖ್ಯಾತರಿಗೆ ನ್ಯಾಯವನ್ನು ಖಚಿತಪಡಿಸುತ್ತಿದ್ದಾರೆ ಎಂದು ಹೇಳಿದರು.

"ನಿನ್ನೆ, ವಸತಿ ಇಲಾಖೆಯಡಿಯಲ್ಲಿ, ವಸತಿ ಯೋಜನೆಗಳಲ್ಲಿ ಅಲ್ಪಸಂಖ್ಯಾತರ ಮೀಸಲಾತಿಯನ್ನು ಶೇಕಡಾ 10 ರಿಂದ 15 ಕ್ಕೆ ಹೆಚ್ಚಿಸಲಾಗಿದೆ. ಸಿಎಂ ಸಿದ್ದರಾಮಯ್ಯ ವಿಭಜಕ ರಾಜಕೀಯ ಮಾಡುತ್ತಿದ್ದಾರೆ. ಬಿಜೆಪಿ ಇದರ ವಿರುದ್ಧ ಹೋರಾಡಲಿದೆ. ಮುಖ್ಯಮಂತ್ರಿಗಳ ನಡವಳಿಕೆ ಅವರ ಸ್ಥಾನದ ಘನತೆಗೆ ಕುಂದು ತರುತ್ತಿದೆ" ಎಂದು ವಿಜಯೇಂದ್ರ ಟೀಕಿಸಿದರು.

ಮುಖ್ಯಮಂತ್ರಿಗಳು ರಾಜ್ಯದ ಚುನಾಯಿತ ಸರ್ಕಾರದ ಮುಖ್ಯಸ್ಥ ಎಂಬುದನ್ನು ಮರೆತು "ತುಘಲಕ್ ದರ್ಬಾರ್" ನಡೆಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಜನ ಸರ್ಕಾರಕ್ಕೆ ಪಾಠ ಕಲಿಸುತ್ತಾರೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷರು ಹೇಳಿದರು.

ವಿಧಾನಸಭೆ ಅಧಿವೇಶನಕ್ಕೂ ಮುನ್ನ, ಎರಡೂ ಪಕ್ಷಗಳ ನಡುವೆ ಸರಿಯಾದ ಸಮನ್ವಯಕ್ಕಾಗಿ ಸಮಿತಿ ರಚಿಸುವ ಕುರಿತು ಜೆಡಿಎಸ್ ನಾಯಕ ಎಚ್ ಡಿ ಕುಮಾರಸ್ವಾಮಿ ಮತ್ತು ಶಾಸಕರೊಂದಿಗೆ ಬಿಜೆಪಿ ಚರ್ಚೆ ನಡೆಸಲಿದೆ ಎಂದು ವಿಜಯೇಂದ್ರ ತಿಳಿಸಿದರು.

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿ, ರಾಜ್ಯ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಡಬೇಕಾದ ಸಮಯ ಬಂದಿದೆ. ಬಿಜೆಪಿ ಆಂತರಿಕ

ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕು ಮತ್ತು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಈ ದಿಕ್ಕಿನಲ್ಲಿ ಪ್ರಯತ್ನಗಳು ನಡೆಯುತ್ತಿವೆ ಎಂದು ಅವರು ಹೇಳಿದರು.

## ಸಾವಿರ ಭಾರತೀಯರ ಸ್ಥಳಾಂತರಕ್ಕೆ ವಾಯುಪ್ರದೇಶ ನಿರ್ಬಂಧ ಸಡಿಲಿಸಿದ ಇರಾನ್

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.20: ಇಸ್ರೇಲ್ ಜೊತೆಗಿನ ಯುದ್ಧ ಶುಕ್ರವಾರ ಎಂಟನೇ ದಿನಕ್ಕೆ ಕಾಲಿಟ್ಟಿದ್ದು, ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸಲು ಅನುಕೂಲವಾಗುವಂತೆ ಇರಾನ್ ತನ್ನ ವಾಯುಪ್ರದೇಶದ ಮೇಲಿನ ನಿರ್ಬಂಧಗಳನ್ನು ಸಡಿಲಗೊಳಿಸಿದೆ.

ಇರಾನ್ ಅಧಿಕಾರಿಗಳ ವಿಶೇಷ ಸೂಚನೆ ಎಂದು ವಿವರಿಸಲಾದ ಈ ನಿರ್ಧಾರವು, ಭಾರತವು ತನ್ನ ನಾಗರಿಕರನ್ನು ಸುರಕ್ಷಿತವಾಗಿ ಮನೆಗೆ ಕರೆತರಲು ತುರ್ತು ಸ್ಥಳಾಂತರಕ್ಕೆ ವಿಮಾನಗಳನ್ನು ನಿರ್ವಹಿಸಲು ಅನುವು ಮಾಡಿಕೊಡುತ್ತದೆ.

ಇರಾನ್‌ನ ಮಹನ್ ಏರ್ ನಿರ್ವಹಿಸುವ ಮೂರು ವಿಶೇಷ ವಿಮಾನಗಳು ಈಶಾನ್ಯ ಇರಾನಿನ ನಗರವಾದ ಮಶಾದ್‌ನಿಂದ ನವದೆಹಲಿಗೆ ಸುಮಾರು 1,000 ಭಾರತೀಯ ಪ್ರಜೆಗಳನ್ನು ಕರೆತರಲಿವೆ. ಇದರಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಇದ್ದಾರೆ ಎಂದು ರಾಜತಾಂತ್ರಿಕ ಮೂಲಗಳು ತಿಳಿಸಿವೆ.

ಮೊದಲ ವಿಮಾನ ಶುಕ್ರವಾರ ರಾತ್ರಿ 11:30 ಕ್ಕೆ ಭಾರತಕ್ಕೆ ಆಗಮಿಸಿದರೆ. ಉಳಿದ ಎರಡು ವಿಮಾನಗಳು ಶನಿವಾರ ಲ್ಯಾಂಡ್ ಆಗಲಿವೆ. ಒಂದು ನಾಳೆ ಬೆಳಗ್ಗೆ 10:00 ಗಂಟೆಗೆ ಮತ್ತು ಇನ್ನೊಂದು ನಾಳೆ ಸಂಜೆ 4:30ಕ್ಕೆ ದೆಹಲಿಗೆ ಬರಲಿದೆ.

ತಮ್ಮ ದೇಶದಲ್ಲಿರುವ

(2ನೇ ಪುಟ ನೋಡಿ)

## ಅಕ್ರಮ ಸಂಬಂಧಕ್ಕೆ ಅಡ್ಡಿ: ಗಂಡನನ್ನೇ ಕೊಂದ ಪತ್ನಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜೂ.20:ಚಿತ್ತಾಪುರ ತಾಲೂಕಿನ ಭಾಗೋಡಿ ಗ್ರಾಮದಲ್ಲಿ ಗಂಡನನ್ನೇ ಪತ್ನಿ ಹಾಗೂ ಆಕೆಯ ಪ್ರಿಯಕರ ಸೇರಿ ಕೊಲೆಗೈದಿರುವ ಘಟನೆ ಜರುಗಿದೆ.ತಿಪ್ಪಣ್ಣ (30) ಕೊಲೆಯಾದ ವ್ಯಕ್ತಿ. ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಬಾರದೆಂದು ಪತ್ನಿ ಶಾಂತಮ್ಮ ಮತ್ತು ಆಕೆ-ಯ ಪ್ರಿಯಕರ ಅವರು ಸೇರಿ ತಿಪ್ಪಣ್ಣನನ್ನು ತಲೆ ದಿಂಬಿನಿಂದ ಮುಖವನ್ನು ಮುಚ್ಚಿ ಉಸಿರು ಗಟ್ಟಿಸಿ ಕೊಲೆಗೈದಿದ್ದಾರೆ ಎಂದು ತಿಳಿದು ಬಂದಿದೆ.ಶಾಂತಮ್ಮನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ.

ಪ್ರಿಯಕರ ಪರಾರಿಯಾಗಿದ್ದು, ಆತನನ್ನು ಕೂಡಲೇ ಬಂಧಿಸಲಾಗುವುದು ಎಂದು ಪಿಎಸ್‌ಐ ಶ್ರೀಶೈಲ್ ಅಂಬಾಟಿ ಅವರು ಮಾಹಿತಿ ನೀಡಿದರು. ತಲೆದಿಂಬಿನಿಂದ ಮುಖವನ್ನು ಮುಚ್ಚಿ ಉಸಿರು ಗಟ್ಟಿಸುತ್ತಿರುವಾಗ ತಿಪ್ಪಣ್ಣ ಜೋರಾಗಿ ಕಿರುಚಿದ್ದಾರೆ. ಅಕ್ಕ ಪಕ್ಕದವರು ಏನಾಗಿದೆ ಎಂದು ಮನೆಯ ಬಾಗಿಲು ಬಡೆದಿದ್ದಾರೆ. ಬಾಗಿಲು ತೆಗೆಯದಿದ್ದಾಗ ಅನುಮಾನಗೊಂಡು ಕೂಡಲೇ 112 ಗೆ ಕರೆ ಮಾಡಿ ಪೊಲೀಸರನ್ನು ಕರೆಸಿದಾಗ ಕೊಲೆ ಮಾಡಿರುವ

ಘಟನೆ ಬೆಳಕಿಗೆ ಬಂದಿದೆ. ಪ್ರಿಯಕರ ಮನೆಯ ಅಟ್ಟದ ಮೇಲಿನ ಕಿಟಕಿಯಿಂದ ಪರಾರಿಯಾಗಿದ್ದಾನೆ ಎಂದು ತಿಳಿದು ಬಂದಿದೆ.ಕೊಲೆಯಾದ ವ್ಯಕ್ತಿಯ ಶವವನ್ನು ಚಿತ್ತಾಪುರ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

ಸುದ್ದಿ ತಿಳಿಯುತ್ತಿದ್ದಂತೆ ಡಿವೈಎಸ್ಪಿ ಶಂಕರಗೌಡ ಪಾಟೀಲ್, ಸಿಪಿಐಗಳಾದ ನಟರಾಜ

ಲಾಡೆ, ಚಂದ್ರಶೇಖರ ತಿಗಡಿ, ಎಎಸ್‌ಐ ಲಾಲಹ್ಮದ್, ಸಿಬ್ಬಂದಿಗಳಾದ ದತ್ತು ಜಾನೆ, ರವಿಕುಮಾರ, ಸವಿಕುಮಾರ, ಅನೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸೋಮವಾರ ದೆಹಲಿಗೆ ಸಿಎಂ ರಾಷ್ಟ್ರಪತಿಗಳ ಭೇಟಿ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು: ಜೂ.20:ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಸಂಜೆ ದೆಹಲಿಗೆ ತೆರಳಲಿದ್ದಾರೆ. ರಾಷ್ಟ್ರಪತಿಗಳ ಭೇಟಿಗೆ ನಿರ್ಧರಿಸಿದ್ದಾರೆ.

ಮಂಗಳವಾರ ಬೆಳಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಮಾಡಲಿರುವ ಸಿಎಂ ಸಿದ್ದರಾಮಯ್ಯ, ರಾಜ್ಯದ 24 ವಿಧೇಯಕಗಳು ರಾಷ್ಟ್ರಪತಿಗಳ ಸಹಿಗೆ ರಾಷ್ಟ್ರಪತಿ ಭವನಕ್ಕೆ ರವಾನೆ ಆಗಿದ್ದು ಇನ್ನೂ ಸಹಿ ಆಗದೆ ಬಾಕಿ ಉಳಿದಿವೆ. ಬಾಕಿ ಇರುವ ವಿಧೇಯಕಗಳಿಗೆ ಸಹಿ ಹಾಕುವಂತೆ ಮನವಿ ಮಾಡಲು ಮುಂದಾಗಿದ್ದಾರೆ.

ಮಂಗಳವಾರ ಸಂಜೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಸಹ ಭೇಟಿಯಾಗಲು ಸಿಎಂ ನಿರ್ಧರಿಸಿದ್ದಾರೆ. ಬುಧವಾರ ಪ್ರಧಾನಿ ಮೋದಿ ಭೇಟಿಗೆ ಸಮಯ ಕೇಳಿದ್ದಾರೆ. ಅವಕಾಶ ಸಿಕ್ಕರೆ ಬುಧವಾರ ಪ್ರಧಾನಿ ಭೇಟಿ ಆಗಲಿರುವ ಸಿಎಂ ಅಂ-ದೇ ರಾಹುಲ್ ಗಾಂಧಿ ಭೇಟಿಗೂ ಸಮಯ ಹೇಳಿದ್ದಾರೆ.

ರಾಹುಲ್ ಗಾಂಧಿ ವಿದೇಶ ಪ್ರವಾಸದಿಂದ


ವಾಪಸ್ ಆದರೆ ಬುಧವಾರ ಅವರನ್ನು ಭೇಟಿ ಮಾಡಿ ಸಿಎಂ ಸಿದ್ದರಾಮಯ್ಯ ಮಾತುಕತೆ ನಡೆಸಲು ಮುಂದಾಗಿದ್ದಾರೆ.

## ಎನ್‌ಆರ್‌ಇಜಿ ಬಿಲ್ ಪಡೆಯಲು ಪುರುಷನಿಗೆ ಸೀರೆ!

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.20-ಸರಕಾರ ಯೋಜನೆಗಳಲ್ಲಿ ಬಿಲ್ ಪಡೆಯಲು ಏನೇನೋ ಕಸರತ್ತು ಮಾಡುವ ಅನೇಕ ಘಟನಾವಳಿಗಳು ನಿತ್ಯವೂ ನಡದೇ ಇರುತ್ತವೆ.

ಈಗ ಜಿಲ್ಲೆಯ ಇಳಕಲ್ ತಾಲ್ಲೂಕಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಬಿಲ್ ಪಡೆಯಲು ಪುರುಷನಿಗೆ ಸೀರೆ ಉಡಿಸಿ, ಎನ್ ಆರ್ ಇಜಿ ವೆಬ್ಸೈಟ್ ಗೆ ಅಪ್ ಲೋಡ್ ಮಾಡಿದ ಆರೋಪ ಕೇಳಿಬಂದಿದೆ.





ಇಳಕಲ್ ತಾಲ್ಲೂಕಿನ ಚಿಕನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಿದ್ದನಕೊಳ್ಳ ಗ್ರಾಮದಲ್ಲಿ ಪ್ಲಾಂಟೇಷನ್ ಕಾಮಗಾರಿಗೆ ಮಂಗಳಮ್ಮ ಆರಿ ಹೆಸರಿನ ಬಿಲ್ ಪಾವತಿಗೆ ವ್ಯಕ್ತಿಯೊಬ್ಬ ಸೀರೆ ಉಟ್ಟ ಫೋಟೊ ತೋರಿಸಲಾಗಿದೆ.

ಹುನಗುಂದ ತಾಲ್ಲೂಕಿನಲ್ಲಿ ಎರಡು ಗ್ರಾಮಗಳ ಅಂಗನವಾಡಿ ಕಟ್ಟಡಗಳಿಗೆ ಕಾರ್ಮಿಕರ ಒಂದೇ ಫೋಟೊ ಅಪ್ ಲೋಡ್ ಮಾಡಲಾಗಿದೆ. ಗಂಜಿಹಾಳ, ಬಿಂಜವಾಡಗಿ, ರಾಮವಾಡಗಿಯಲ್ಲೂ ಇದೇ ರೀತಿ ಫೋಟೊ ತೋರಿಸಲಾಗಿದೆ.

ಇಳಕಲ್ ತಾಲ್ಲೂಕಿನ ಚಿನ್ನಾಪುರ ಗ್ರಾಮದಲ್ಲಿಯೂ ಕಾಮಗಾರಿಗೆ ಒಂದೇ ಫೋಟೊ ಇದ್ದರೂ ಕಾರ್ಮಿಕರ ಹೆಸರುಗಳು ಬದಲಾಗಿವೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

## ರಾಜ್ಯ ಬಿಜೆಪಿ ಸದ್ಯ ಐಸಿಯುನಲ್ಲಿದೆ : ಯತ್ನಾಳ್



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ:ಜೂ.20: ರಾಜ್ಯ ಬಿಜೆಪಿಯಲ್ಲಿ ಅಸಮಾಧಾನ ತುಂಬಿ ತುಳುಕುತ್ತಿದ್ದು ಸದ್ಯ ಐಸಿಯುನಲ್ಲಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದರು.

ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಒಂದು ಹೋರಾಟ ಮಾಡಬೇಕೆಂದರೆ ಜನ ಸೇರುವುದಿಲ್ಲ. ಇದಕ್ಕೆ ಕಾರಣ ಎಂದರೆ ರಾಜ್ಯ ಬಿಜೆಪಿ ನಾಯಕತ್ವ. ಇನ್ನೂ ಕುಮಾರಸ್ವಾಮಿಯವರ ಜೊತೆ ಕೂಡ ಹೊಂದಾಣಿಕೆ ಇಲ್ಲ. ಜೆಡಿಎಸ್ ನಮ್ಮ ಮಿತ್ರ ಪಕ್ಷವಾಗಿದ್ದರೂ ಕೂಡ ಅದನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಈಗಲಾದರೂ ಅಮಿತ್ ಶಾ ಅವರು ತಿಳಿದುಕೊಳ್ಳಬೇಕು. ಯಡ್ಡಿಯೂರಪ್ಪ ಕುಟುಂಬದ ಬಗ್ಗೆ, ಯಡ್ಡಿಯೂರಪ್ಪ ಅವರ ಅಸ್ತಿತ್ವ ಏನು ಉಳಿದಿಲ್ಲ ಎಂದು ತಿಳಿದುಕೊಳ್ಳಬೇಕು. ಈ ಗ ' ಲ ೂ ಯಡ್ಡಿಯೂರಪ್ಪನನ್ನ ಜೀ, ಜೀ ಅಂದರೆ ಕರ್ನಾಟಕದಲ್ಲಿ ಬಿಜೆಪಿಗೆ ಬಹಳ ಕಷ್ಟ ಆಗುತ್ತದೆ ಎಂದರು.

ಯಡ್ಡಿಯೂರಪ್ಪ ಕುಟುಂಬವನ್ನ ಬಿಜೆಪಿಯಿಂದ ಮುಕ್ತ ಮಾಡಬೇಕು. ಪ್ರತಿನಿತ್ಯ ಹಿಂದೂ ಕಾರ್ಯಕರ್ತರ ಮೇಲೆ ಕೇಸ್ ಹಾಕುತ್ತಿದ್ದಾರೆ. ಇವರು ಸಿದ್ದರಾಮಯ್ಯ, ಡಿಕೆಶಿ, ಜಮೀರ್ ಅಹ್ಮದ್ ಜೊತೆ ಸಂತೋಷವಾಗಿದ್ದಾರೆ. ಇದು ಕಾರ್ಯಕರ್ತರಿಗೆ ಏನು ಸಂದೇಶ ಕೊಡುತ್ತದೆ. ಅವರೊಂದಿಗೆ ನಿಮಗೆ ಅಷ್ಟೊಂದು ಆತ್ಮೀಯತೆ ಇದ್ದರೆ ಕಾಂಗ್ರೆಸ್ ಪಕ್ಷ ಸೇರಿಕೊಳ್ಳಿ. ಹಿಂದೂ ಕಾರ್ಯಕರ್ತರನ್ನು ಬಲಿತೆಗೆದುಕೊಳ್ಳಬೇಡಿ ಎಂದು ಕಿಡಿಕಾರಿದರು. ಅಲ್ಪಸಂಖ್ಯಾತರಿಗೆ ವಸತಿಯಲ್ಲಿ ಶೇ.5 ಏರಿಕೆ ವಿಚಾರವಾಗಿ ಮಾತನಾಡಿದ ಅವರು, ಜೈನ್, ಸಿಖ್, ಕ್ರೈಸ್ತರು ಅಲ್ಪಸಂಖ್ಯಾತರಿದ್ದಾರೆ. ಅವರಿಗೆ ಶೇ.10 ಮಾತ್ರ, ಮುಸ್ಲಿಂರಿಗೆ ಶೇ.80 ಕೊಡುತ್ತಾರೆ. ಬೆಳಗಾವಿ ಅಧಿವೇಶನದಲ್ಲಿ ನನಗೆ ಹಾಗೂ ಜಮೀರ್‌ಗೆ ಇದೇ ವಿಷಯದಿಂದ ಜಗಳವಾಗಿತ್ತು. ಮುಸ್ಲಿಂರಿಗೆ ಶೇ.80 ಹಂಚಿಕೆ ಮಾಡಲು ಇವರ್ಯಾರು? ಹಿಂದೂಗಳಿಗೆ ಇಲ್ಲಿ ಏನಿಲ್ಲ. ಸಿದ್ದರಾಮಯ್ಯ, ಡಿಕೆಶಿ ಬಹುತೇಕ ಮೂರು ವರ್ಷದಲ್ಲಿ ಕರ್ನಾಟಕವನ್ನ ಮತ್ತೊಂದು ಕೇರಳ, ಪಶ್ಚಿಮ ಬಂಗಾಳನಂತೆ ಮುಸ್ಲಿಂ ರಾಜ್ಯ ಮಾಡುತ್ತಾರೆ. ಸಿದ್ದರಾಮಯ್ಯ ತಮ್ಮ ಸಮುದಾಯಕ್ಕೆ ಕೊಡುಗೆ ಕೊಡಲಿ. ಕುರಿಗಾಹಿಗಳಿಗೆ 5 ಲಕ್ಷ ರೂ, ಕೊಡಲಿ. ಮುಸ್ಲಿಂರಿಗೆ ಬಿಟ್ಟು ಬೇರೆ ಯಾರಿಗೂ ಕೊಡುತ್ತಿಲ್ಲ. ಕೇವಲ ಸಾಬ್ರೂ, ಸಾಬ್ರೂ ಎನ್ನುತ್ತಾರೆ. ರಾಜ್ಯದಲ್ಲಿ ಸಾಬ್ರೂ ಬಿಟ್ರೇ ಬೇರೆ ಯಾರು ಇಲ್ವಾ? ಎಂದರು.

## ವಸತಿ ಯೋಜನೆಗಳಲ್ಲಿ ಅಲ್ಪಸಂಖ್ಯಾತರ ಮೀಸಲಾತಿ ಏರಿಕೆ: ಸರ್ಕಾರದಿಂದ ಅಕ್ಷಮ್ಯ ಅಪರಾಧ: ಬಿ.ಎಸ್ ಯಡಿಯೂರಪ್ಪ

ಬೆಂಗಳೂರು:ಜೂ.20: ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಲ್ಲಿ ಅಲ್ಪಸಂಖ್ಯಾತ ಸಮುದಾಯಕ್ಕೆ ನಿಗದಿ ಮಾಡಿರುವ ಮೀಸಲಾತಿ ಪ್ರಮಾಣವನ್ನು ಶೇ 10 ರಿಂದ ಶೇ 15 ಕ್ಕೆ ಹೆಚ್ಚಿಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ತೀವ್ರವಾಗಿ ಟೀಕಿಸಿದ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಅವರಿಗೆ ಅತಿಯಾದ ಸವಲತ್ತುಗಳನ್ನು ಒದಗಿಸುವುದು 'ಅಕ್ಷಮ್ಯ ಅಪರಾಧ' ಎಂದು ಶುಕ್ರವಾರ ಹೇಳಿದ್ದಾರೆ.

ಬೆಂಗಳೂರಿನ ಬಿಜೆಪಿ ರಾಜ್ಯ ಪ್ರಧಾನ ಕಚೇರಿ 'ಜಗನ್ನಾಥ ಭವನ'ದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 'ನಾವು ಅಲ್ಪಸಂಖ್ಯಾತರನ್ನು ವಿರೋಧಿಸುವುದಿಲ್ಲ . ಆದರೆ ಅಲ್ಪಸಂಖ್ಯಾತರಿಗೆ ಅತಿಯಾದ ಸವಲತ್ತುಗಳನ್ನು ಒದಗಿಸುವುದು ಕ್ಷಮಿಸಲಾಗದ ಅಪರಾಧ. ಈ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲೆ ಹೆಚ್ಚು ಗಮನಹರಿಸಬೇಕಿತ್ತು. ಬದಲಿಗೆ, ಅದು ಕೇವಲ ಮತ ಬ್ಯಾಂಕ್ ರಾಜಕೀಯಕ್ಕಾಗಿ ಅಲ್ಪಸಂಖ್ಯಾತರನ್ನು ಓಲೈಸುವಲ್ಲಿ ತೊಡಗಿಸಿಕೊಂಡಿದೆ. ನಾವೆಲ್ಲರೂ ಇದನ್ನು ಬಲವಾಗಿ ಖಂಡಿಸುತ್ತೇವೆ' ಎಂದು ಹೇಳಿದರು.

ಸರ್ಕಾರ ಎಚ್ಚೆತ್ತುಕೊಂಡು ಅಭಿವೃದ್ಧಿಯತ್ತ ಗಮನಹರಿಸಬೇಕು ಮತ್ತು ಸಮಾಜದ ಎಲ್ಲ ವರ್ಗಗಳ ಜನರಿಗೆ ನ್ಯಾಯವನ್ನು ಖಚಿತಪಡಿಸಿಕೊಳ್ಳಬೇಕು. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದ್ದು, ಹೆಚ್ಚಿನ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ' ಎಂದು ಅವರು ಆರೋಪಿಸಿದರು.




ಪರಿಸ್ಥಿತಿ ಎಷ್ಟು ಭೀಕರವಾಗಿದೆ ಎಂದರೆ ಜನರ ಸಮಸ್ಯೆಗಳನ್ನು ಯಾರೂ ಕೇಳುತ್ತಿಲ್ಲ. ಈ ಸರ್ಕಾರ ಕೇವಲ ಪ್ರಚಾರದ ಮೇಲೆ ಗಮನ ಕೇಂದ್ರೀಕರಿಸಿದೆ ಮತ್ತು ಅಭಿವೃದ್ಧಿಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ನೀರಾವರಿ ಯೋಜನೆಗಳು ಸಂಪೂರ್ಣವಾಗಿ ಸ್ಥಗಿತಗೊಂಡಿವೆ' ಎಂದು ಅವರು ಟೀಕಿಸಿದರು.

ಕರ್ನಾಟಕದಲ್ಲಿ ಎಲ್ಲಿಯಾದರೂ ನಿರ್ಮಿಸಲಾದ ಒಂದು ಕಿಲೋಮೀಟರ್ ರಸ್ತೆಯನ್ನು ಸರ್ಕಾರ ತೋರಿಸಲಿ. ಸದ್ಯದ ಆಡಳಿತವು 'ತುಘಲಕ್ ದರ್ಬಾರ್' ನಡೆಸುತ್ತಿದೆ ಎಂದು ಅವರು ಆರೋಪಿಸಿದರು.ವಸತಿ ಯೋಜನೆಯಡಿ ಮನೆ ಪಡೆಯಲು ಹಣ ಪಾವತಿಸಬೇಕು ಎಂಬ ಕಾಂಗ್ರೆಸ್ ಶಾಸಕ ಬಿಆರ್ ಪಾಟೀಲ್ ಹೇಳಿರುವ ವೈರಲ್ ಆಡಿಯೋ ಕ್ಲಿಪ್ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ಬಿಆರ್ ಪಾಟೀಲ್ ಹೇಳಿದ್ದು ನೂರಕ್ಕೆ ನೂರು ಸತ್ಯ. ಹಣ ಪಾವತಿಸದೆ ಏನೂ ಆಗುವುದಿಲ್ಲ. ಅದು ಈಗ ಸಾಬೀತಾಗಿದೆ. ಮನೆ ಅಗತ್ಯವಿರುವ ಬಡವರು ಸಹ ಹಣ ಪಾವತಿಸಬೇಕಾಗುತ್ತದೆ. ಸರ್ಕಾರ ತನ್ನ ತಪ್ಪನ್ನು ಒಪ್ಪಿಕೊಳ್ಳಬೇಕು, ಸರಿಪಡಿಸಬೇಕು ಮತ್ತು ಬಡವರಿಗೆ ನ್ಯಾಯ ಒದಗಿಸಬೇಕು' ಎಂದು ಯಡಿಯೂರಪ್ಪ ಒತ್ತಾಯಿಸಿದರು.

ಕೇಂದ್ರ ಸಚಿವ ಮತ್ತು ಜೆಡಿಎಸ್ ನಾಯಕ ಎಚ್‌ಡಿ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, 'ಬಿಜೆಪಿ ಮತ್ತು ಜೆಡಿಎಸ್ ಬೇರೆ ಬೇರೆಯಲ್ಲ. ನಾವು ಒಟ್ಟಿಗೆ ಮುಂದುವರಿಯುತ್ತೇವೆ. ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರು ಸಹ ಹಲವಾರು ಸಂದರ್ಭಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಮೇಲೆ ನಂಬಿಕೆ ಇದೆ ಎಂದಿದ್ದಾರೆ. ಮುಂಬರುವ ದಿನಗಳಲ್ಲಿ, ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ಕೆಲಸ ಮಾಡುತ್ತವೆ. ಈ ಸರ್ಕಾರವನ್ನು

(2ನೇ ಪುಟ ನೋಡಿ)

## ಜಿಲ್ಲೆಯಲ್ಲಿ ಎಲ್ಲೇ ಬಾಲ್ಯ ವಿವಾಹ ಕಂಡು ಬಂದಲ್ಲಿ ಕೂಡಲೇ ಪ್ರಕರಣ ದಾಖಲಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.20 : ಬೀದರ ಜಿಲ್ಲೆಯಲ್ಲಿ ಎಲ್ಲೇ ಬಾಲ್ಯ ವಿವಾಹ ಕಂಡು ಬಂದಲ್ಲಿ ಕೂಡಲೇ ಪ್ರಕರಣ ದಾಖಲಿಸಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಬಾಲ್ಯ ವಿವಾಹ ತಡೆಗಟ್ಟುವ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಮತ್ತು ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಿದ್ದು ಅವುಗಳನ್ನು ತಡೆಯುವ ಕೆಲಸ ಸಂಬಂಧಿಸಿದಂತೆ ಅಧಿಕಾರಿಗಳು ಮಾಡಬೇಕು ಹಾಗೂ ಬಾಲ್ಯ ವಿವಾಹ ಮಾಡುತ್ತಿರುವ ಪೋಷಕರು, ಪೂಜಾರಿಗಳು, ಕಲ್ಯಾಣ ಮಂಟಪ ಮಾಲಿಕರು ಮತ್ತು ಆಮಂತ್ರಣ ಪತ್ರಿಕೆ ಅಂಗಡಿಯ ಮಾಲಿಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು.

ಮದುವೆ ವಯಸ್ಸಿಗೆ ಸಂಬಂಧಿಸಿದಂತೆ ಬರ್ತ್ ಸರ್ಟಿಫಿಕೇಟ್, ಎಸ್ ಎಸ್ ಎಲ್ ಸಿ ಮಾರ್ಕ್ಸ್ ಕಾರ್ಡ್ ಅಥವಾ ವೈದ್ಯಕೀಯ ವಯಸ್ಸು ಪರೀಕ್ಷೆ ಪತ್ರ ಮಾತ್ರ ಪರಿಗಣಿಸಬೇಕು ಎಂದರು. ಶಾಲೆ ಬಿಟ್ಟ ಬಾಲಕಿಯರ ವಿವರವನ್ನು ಶಾಲಾ ಶಿಕ್ಷಣಾ ಇಲಾಖೆ ನೀಡಬೇಕು ಮತ್ತು ಶಾಲೆ ಬಿಡಲು ಕಾರಣ ಏನು ಎಂದು ತಿಳಿದುಕೊಳ್ಳಬೇಕು. ಗ್ರಾಮ ಪಂಚಾಯಿತಿಯ ಕಾವಲು ಸಮಿತಿಯು ಕೂಡ ಗ್ರಾಮಗಳಲ್ಲಿ ಬಾಲ್ಯ ವಿವಾಹ ಕಂಡು ಬಂದಲ್ಲಿ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಬೇಕು ಎಂದರು. ಏಪ್ರಿಲ್ 2024 ರಿಂದ ಮಾರ್ಚ್ 2025 ರವರಿಗೆ ಜಿಲ್ಲೆಯಲ್ಲಿ ಒಟ್ಟು 58 ಬಾಲ್ಯ ವಿವಾಹ ಪ್ರಕರಣಗಳಲ್ಲಿ

(2ನೇ ಪುಟ ನೋಡಿ)

# ಸಿರಿ ಬಂದಾಗ ದೇವರು ಧರ್ಮವನ್ನು ಮರೆಯದಿರಿ : ರಂಭಾಪುರಿ ಜಗದ್ಗುರುಗಳು

ಮಲ್ಲಮ್ಮನುಡಿ ವಾರ್ತೆ ಜತ್– ಜೂ.20: ಮನುಷ್ಯನಿಗೆ ಬರುವ ಸಿರಿ ಸಂಪತ್ತು ಶಾಶ್ವತವಲ್ಲ. ಆಧ್ಯಾತ್ಮ ಜ್ಞಾನವೊಂದೇ ನಿಜವಾದ ಸಂಪತ್ತು. ಸಿರಿ ಬಂದಾಗ ದೇವರು ಮತ್ತು ಧರ್ಮವನ್ನುಮರೆಯಬಾರದೆಂದು ಬಾಳೆಹೊನ್ನೂರುಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳುಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಸುಸಲಾದಿ ಗ್ರಾಮದಲ್ಲಿ ನಿರ್ಮಿಸಿದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಉದ್ಘಾಟನೆ ಲಿಂಗ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇವರು ಕೊಟ್ಟ ಕೊಡುಗೆ ಬೇರಾರು ಕೊಡಲು ಸಾಧ್ಯವಿಲ್ಲ. ನಿಂತ ನೆಲ, ಕುಡಿಯುವ ನೀರು, ಬೀಸುವ ಗಾಳಿ ದೇವರು ಕೊಟ್ಟ ಅಮೂಲ್ಯ ವರ. ಉದಾತ್ತ ಮಾನವ ಜೀವನದಲ್ಲಿ ಒಂದಿಷ್ಟಾದರೂ ಶಿವಜ್ಞಾನಸಂಪಾದಿಸಿಕೊಳ್ಳದಿದ್ದರೆ ಮತ್ತು ಗುರು ಕಾರುಣ್ಯ ಪಡೆಯದೇ ಹೋದರೆ ಜೀವನ ವ್ಯರ್ಥವಾಗುತ್ತದೆ. ದೇವರ ಮೇಲಿನ ನಂಬಿಗೆ ಮತ್ತು ವಿಶ್ವಾಸವನ್ನು ಎಂದಿಗೂ ಕಳೆದುಕೊಳ್ಳಬಾರದು. ಜೀವನದ ವಿಕಾಸಕ್ಕೆತಂದನೀತಿನಿಯತ್ತುಗಳ ಪರಿಪಾಲನೆಯೇ ನಿಜವಾದ ಧರ್ಮ. ಮಾನವ ಜೀವನದ ಶ್ರೇಯಸ್ಸಿಗಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ದಶವಿಧ ಸೂತ್ರಗಳನ್ನುಬೋಧಿಸಿದ್ದಾರೆ. ಶರಣರು ಸಪ್ತ ಸೂತ್ರಗಳನ್ನು ಹೇಳಿದ್ದಾರೆ. ದೇವರು ಮತ್ತು ಧರ್ಮವನ್ನುತೋರಿಸುವಾತನೇ ನಿಜವಾದ ಗುರು. ಪರಶಿವನ ಸಾಕಾರ ಇನ್ನೊಂದು ರೂಪವೇ ಗುರು. ಅಜ್ಞಾನ ಕಳೆದು ಜ್ಞಾನ ಜ್ಯೋತಿ ಬೆಳಗಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಸುಂದರವಾಗಿ ಕಟ್ಟಿ ಇಂದು ಉದ್ಘಾಟನೆ ಲಿಂಗಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಧರ್ಮ ದೀಪೋತ್ಸವ ಸಂಯೋಜಿಸಿರುವುದು ತಮಗೆ ಅತ್ಯಂತಸಂತೋಷವನ್ನುಉಂಟು ಮಾಡಿದೆ ಎಂದರು. ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ ಮನುಷ್ಯ ಯಂತ್ರದಂತೆ ದುಡಿದರೂ ಮನಸ್ಸಿಗೆ ಶಾಂತಿಯಿಲ್ಲ. ಬೆಳೆಯುವ ಮಕ್ಕಳಿಗೆ ಭೌತಿಕ ಶಿಕ್ಷಣದ ಜೊತೆಗೆಸಂಸ್ಕಾರಕೊಡುವಕೆಲಸ ಮಾಡಬೇಕಾಗಿದೆ. ಸುಸಲಾದಿ ಗ್ರಾಮದ ಬಹು ದಿನಗಳ ಸಂಕಲ್ಪ ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನದೊಂದಿಗೆ ಪೂರ್ಣಗೊಂಡಿದೆ. ಆಗಾಗ ಇಂಥ ಧರ್ಮ ಕಾರ್ಯಗಳು ನಡೆದುಕೊಂಡುಬರಬೇಕೆಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಜಯ ಮತ್ತು ಚನ್ನಪ್ಪ ಅವರು ಮಾತನಾಡಿ ವೀರಶೈವ ಧರ್ಮ ಮತ್ತು ಗುರು ಪರಂಪರೆ ಎಂದಿಗೂ ಮರೆಯಬಾರದೆಂದರು. ತಡವಲಗಾ ಅಭಿನವ ರಾಚೋಟೇಶ್ವರಶಿವಾಚಾರ್ಯರು, ಜಗಜೇವಣಿ ಮುಪ್ಪಿನಾರ್ಯ ಶಿವಾಚಾರ್ಯರು, ಹಾಗೂ ಗುಡ್ಡಾಪುರದ ಗುರಪಾದೇಶ್ವರ ಶಿವಾಚಾರ್ಯರುಉಪಸ್ಥಿತರಿದ್ದರು. ಶಾಸಕ ಗೋಪಿಚಂದ ಪಡೋಳಕರ, ಡಾ.ರವೀಂದ್ರ ಅರಳಿ, ಎಮ್.ಆರ್.ಪಾಟೀಲ, ಚನ್ನಪ್ಪಾ ಹೊರ್ತಿಕರ, ಉಮದಿ ಬಸವರಾಜ ಹಿರೇಮಠ ಅವರನ್ನು ಮೊದಲ್ಗೊಂಡು ಹಲವಾರು ಗಣ್ಯರು ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

ಪ್ರಾತ:ಕಾಲದಲ್ಲಿ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಉದ್ಘಾಟಿಸಿ ಲಿಂಗ ಪ್ರತಿಷ್ಠಾಪನೆ ಮತ್ತು ಕಳಸಾರೋಹಣವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ನೆರವೇರಿಸಿದರು. ಸಮಾರಂಭದ ಹಿಂದಿನ ದಿನ ಸಂಜೆ ಸುಸಲಾದಿ ಗ್ರಾಮದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಸಂಭ್ರಮದ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತ ಸಮುದಾಯದ ಮಧ್ಯೆ ವಿಜೃಂಭಣೆಯಿಂದ ಜರುಗಿತು. ದೇವಸ್ಥಾನ ಉದ್ಘಾಟನೆ ನಿಮಿತ್ಯ 5 ದಿನಗಳ ಕಾಲ ಜೇರಟಗಿಯ ವೇ.ಮಡಿವಾಳೇಶ್ವರ ಶಾಸ್ತ್ರಿಗಳಿಂದ ಆಧ್ಯಾತ್ಮಿಕ ಪ್ರವಚನ ಜರುಗಿತು. ಆಗಮಿಸಿದ ಸಕಲ ಸದ್ಭಕ್ತರಿಗೂ ಅನ್ನದಾಸೋಹ ಜರುಗಿತು.

# ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸಲು ಒತ್ತಾಯಿಸಿ ಎಸ್ ಎಫ್ ಐ ಮನವಿ



ಮಲ್ಲಮ್ಮ ನುಡಿ ವಾರ್ತೆ ಶಹಾಪುರ:ಜೂ.20:ಭಾರತ ವಿದ್ಯಾರ್ಥಿ ಫೆಡರೇಶನ್ ಎಸ್ ಎಫ್ ಐ ಶಾಹಪುರ ತಾಲ್ಲೂಕು ಸಮಿತಿಯುತ ವತಿಯಿಂದ ಗ್ರಾಮೀಣ ಪ್ರದೇಶಗಳಿಂದ ನೂರಾರು ವಿದ್ಯಾರ್ಥಿಗಳ ನಗರ ಪ್ರದೇಶಕ್ಕೆ ಶಿಕ್ಷಣಕ್ಕಾಗಿ ಬರುತ್ತಾರೆ. ಆದರೆ ಅವರಿಗೆ ಸಮರ್ಪಕಬಸ್‌ವ್ಯವಸ್ಥೆಯಿಲ್ಲದೇ ದಿನನಿತ್ಯಪರದಾಡುವ ಪರಿಸ್ಥಿತಿ ಅನುಭವಿಸುತ್ತಿದ್ದಾರೆ.ಸಮಯಕ್ಕೆ ಸರಿಯಾಗಿ ಬಸ್ ಇಲ್ಲದೇ ಶಾಲಾ ಕಾಲೇಜುಗಳಿಗೆತಡವಾಗಿ ಹೋಗುವುದ್ದರಿಂದ ಶಾಲಾ ಕಾಲೇಜುಗಳಲ್ಲಿ ಹಾಜರಾತಿ ಕೊರತೆಯಿಂದಶಿಕ್ಷಣಕುಂಠಿತವಾಗಿದೆ ಎಷ್ಟೋ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸವನ್ನೇ ಮಟುಕುಗೊಳಿಸಿದ್ದಾರೆ.

ಹಾಗಾಗಿ ತಾಲ್ಲೂಕಿನ ಎಲ್ಲಾ ಹಳ್ಳಿಗಳಿಗೆ ಸಮರ್ಪಕ

ಬಸಗಳನ್ನುಒದಗಿಸಲು ಭಾರತ ವಿದ್ಯಾರ್ಥಿ ಫೆಡರೇಶನ್ ಎಸ್ ಎಫ್ ಐ ಶಾಹಪುರ ತಾಲ್ಲೂಕು ಸಮಿತಿಯು ಒತ್ತಾಯಿಸುತ್ತದೆ.

# ವಸತಿ ರಹಿತ ಜನರಿಗೆ ಕಡಿಮೆ ಮತ್ತು ರಿಯಾಯಿತಿ ದರದಲ್ಲಿ ನಿವೇಶನ ಭಾಗ್ಯ

ಕಲಬುರಗಿ,ಜೂ.20:ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಹಾಗರಗಾ ಗ್ರಾಮದಲ್ಲಿ ಕಲಬುರಗಿ–ಹಾಗರಗಾ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಂತೆ ಮತ್ತು ಗ್ರಾಮದ ವರ್ತುಲ ರಸ್ತೆಯಿಂದ ಎರಡೂವರೆ ಕಿ.ಮೀ. ಅಂತರದಲ್ಲಿ 50:50 ರೈತರ ಸಹಭಾಗಿತ್ವದೊಂದಿಗೆ 117 ಎಕರೆ 05 ಗುಂಟೆ ಜಮೀನು ವಿಸ್ತೀರ್ಣದಲ್ಲಿ ದಿ. ಡಾ. ಖಮರ್ ಉಲ್ ಇಸ್ಲಾಂ ವಸತಿ ಯೋಜನೆ (ಹಾಗರಗಾ ಯೋಜನೆ) ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿದ್ದು, ಕಲಬುರಗಿ ನಗರದ ವಸತಿ ರಹಿತ ಜನರಿಗೆ ಕಡಿಮೆ ಹಾಗೂ ರಿಯಾಯತಿ ದರದಲ್ಲಿ ನಿವೇಶನ ಸೌಭಾಗ್ಯ ದೊರೆಯಲಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಮತ್ತು ಆಯುಕ್ತ ಜಿ.ಎಸ್.ಮಳಗಿ ತಿಳಿಸಿದ್ದಾರೆ

ಒಂದನೇ ಪುಟದಿಂದ

## ಸರ್ಕಾರದಿಂದ ಅಕ್ಷಮ್ಯ ಅಪರಾಧ: ಬಿ.ಎಸ್ ಯಡಿಯೂರಪ್ಪ

ಉರುಳಿಸುತ್ತವೆ ಮತ್ತು ನಮ್ಮದೇ ಆದ ಸರ್ಕಾರವನ್ನು ರಚಿಸುತ್ತವೆ. ಆ ಗುರಿಯತ್ತ ನಾವು ಅಗತ್ಯ ಪ್ರಯತ್ನಗಳನ್ನು ಮಾಡುತ್ತೇವೆ' ಎಂದರು.ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಅವರು, ಭಿನ್ನಮತೀಯರೊಂದಿಗೆ ಮಾತುಕತೆ ನಡೆಸಿ ಅವರ ಸಮಸ್ಯೆಗಳನ್ನು ಪರಿಹರಿಸಲು ಕೇಂದ್ರ ಆಹಾರ, ಸಾರ್ವಜನಿಕ ವಿತರಣೆ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರ ಪ್ರಯತ್ನಗಳನ್ನು ಸ್ವಾಗತಿಸಿದರು. 'ಅತೃಪ್ತರಾಗಿರುವ ಎಲ್ಲರೊಂದಿಗೂ ನಾನು ಮಾತನಾಡಲು ಸಿದ್ಧನಿದ್ದೇನೆ. ನಾನು ಪ್ರತಿದಿನ ಈ ಕಚೇರಿಗೆ ಬಂದು ಮಧ್ಯಾಹ್ನದವರೆಗೆ ಇರಲು ನಿರ್ಧರಿಸಿದ್ದೇನೆ. ನಾನು ಪ್ರತಿ ವಾರ ಒಂದು ಅಥವಾ ಎರಡು ಜಿಲ್ಲೆಗಳಿಗೆ ಭೇಟಿ ನೀಡುತ್ತೇನೆ' ಎಂದರು.

ಕರ್ನಾಟಕ ಸರ್ಕಾರ ಗುರುವಾರ, ವಸತಿ ಇಲಾಖೆ ಅಡಿಯಲ್ಲಿ ರಾಜ್ಯದ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಅಲ್ಪಸಂಖ್ಯಾತ ಸಮುದಾಯಗಳಿಗೆ ಮೀಸಲಾತಿಯನ್ನು ಈಗಿರುವ ಶೇ 10 ರಿಂದ ಶೇ 15 ಕ್ಕೆ ಹೆಚ್ಚಿಸಲು ನಿರ್ಧರಿಸಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರವುವಿವಾದಕ್ಕೆ ಕಾರಣವಾಗಿದ್ದು, ಬಿಜೆಪಿ ಈ ನಿರ್ಧಾರವನ್ನು ವಿರೋಧಿಸಿ ಆಂದೋಲನ ನಡೆಸುವುದಾಗಿ ಮತ್ತು ಕಾನೂನು ಹೋರಾಟ ನಡೆಸುವುದಾಗಿ ಘೋಷಿಸಿದೆ.

## ಕೂಡಲೇ ಪ್ರಕರಣ ದಾಖಲಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

55 ಬಾಲ್ಯ ವಿವಾಹ ತೆಗೆಯಲಾಗಿದ್ದು 3 ಬಾಲ್ಯ ವಿವಾಹ ಜರಿಗಿವೆ ಅವುಗಳ ವಿರುದ್ಧ ಎಫ್.ಐ.ಆರ್ ದಾಖಲಾಗಿದೆ ಮತ್ತು 2025 ರ ಏಪ್ರಿಲ್–ಮೇ ತಿಂಗಳಲ್ಲಿ ಒಟ್ಟು 31 ಬಾಲ್ಯ ವಿವಾಹವನ್ನು ತಡೆಯಲಾಗದೆ ಮತ್ತು ಯಾವುದೇ ಬಾಲ್ಯ ವಿವಾಹ ಜರುಗಿರುವುದಿಲ್ಲ ಎಂದರು.

ಜಿಲ್ಲೆಯಲ್ಲಿ 2024–2025ನೇ ಸಾಲಿನಲ್ಲಿ ಆರ್.ಸಿ.ಹೆಚ್ ಪೋರ್ಟಲ್ ನಲ್ಲಿ ನೋಂದಣಿಯಾದ ಬಾಲಗರ್ಭಿಣಿಯರ ಸಂಖ್ಯೆ 75 ಆಗಿದ್ದು ಇದನ್ನು ನಾವು ಗಂಭೀರವಾಗಿ ಪರಿಗಣಿಸಿ ಮುಂದಿನ ದಿನಗಳಲ್ಲಿ ಈ ರೀತಿಯ ಪ್ರಕರಣಗಳು ಆಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ 2024–25ನೇ ಸಾಲಿನಲ್ಲಿ 37 ಪೋಕ್ಸೋ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಾಗಿವೆ ಆದ್ದರಿಂದ ಜನರಿಗೆ ಪೋಕ್ಸೋ ಕಾಯ್ದೆ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು. ಪೋಕ್ಸೋ ಪ್ರಕರಣದ ಹೆಣ್ಣು ಮಕ್ಕಳನ್ನು ಸಖಿ ಓನ್ ಸೆಂಟರ್ ಮೂಲಕ ಕೌನ್ಸಿಲಿಂಗ್ ಮಾಡಿ ಒಂದೇ ಸೂರಿನಡಿ ಸಹಾಯ ಮಾಡಲಾಗುವುದು ಎಂದರು. ಜಿಲ್ಲೆಯಲ್ಲಿ ಚಿಂದೋಡಿ ಆಯುವ ಮತ್ತು ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳನ್ನು ಕಾಪಾಡಿ ಅವರಿಗೆ ಶಾಲೆಗೆ ದಾಖಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ರಮ್ಯಾ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಗುರುರಾಜ, ಡಿವಾಯ್‌ಎಸ್‌ಪಿ ಶಿವನಗೊಡ ಪಾಟೀಲ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ವಾಯುಪ್ರದೇಶ ನಿರ್ಬಂಧ ಸಡಿಲಿಸಿದ ಇರಾನ್

ಎಲ್ಲಾ ಭಾರತೀಯ ಪ್ರಜೆಗಳು ಪ್ರಸ್ತುತ ಸುರಕ್ಷಿತವಾಗಿದ್ದಾರೆ ಎಂದು ಇರಾನ್ ಅಧಿಕಾರಿಗಳು ದೃಢಪಡಿಸಿದ್ದಾರೆ. ಅಗತ್ಯವಿದ್ದರೆ ಸ್ಥಳಾಂತರಕ್ಕೆ ಹೆಚ್ಚಿನ ವಿಮಾನಗಳ ವ್ಯವಸ್ಥೆ ಮಾಡಬಹುದು ಎಂದು ಅವರು ಹೇಳಿದ್ದಾರೆ.

ಆಪರೇಷನ್ ಸಿಂಧು ಕಾರ್ಯಾಚರಣೆ ಅಡಿ ಭಾರತ, ಇರಾನ್ ನಿಂದ ಭಾರತೀಯರನ್ನು ಕರೆತರುತ್ತಿದ್ದು, ಈಗಾಗಲೇ 110 ಭಾರತೀಯ ವಿದ್ಯಾರ್ಥಿಗಳನ್ನು ಇರಾನ್‌ನಿಂದ ಯಶಸ್ವಿಯಾಗಿ ಕರೆತಂದಿದೆ.

ಯುದ್ಧ ಪೀಡಿತ ಇರಾನ್ ನಲ್ಲಿರುವ ವಿದ್ಯಾರ್ಥಿಗಳನ್ನು ಮೊದಲು ಅರ್ಮೇನಿಯಾಗೆ ಸ್ಥಳಾಂತರಿಸಲಾಯಿತು, ನಂತರ ದೋಹಾಗೆ ವಿಮಾನದಲ್ಲಿ ಕರೆದೊಯ್ಯಲಾಯಿತು ಮತ್ತು ಅಂತಿಮವಾಗಿ ಗುರುವಾರ ಬೆಳಗ್ಗೆ ದೆಹಲಿಗೆ ಆಗಮಿಸಿದ್ದಾರೆ.

# ಅಲಂಕೃತ ರಥದಲ್ಲಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 20 : ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಜಿಲ್ಲಾ ಘಟಕದ ವತಿಯಿಂದ ರಾಜ್ಯಮಟ್ಟದ ಗಡಿನಾಡು ಕನ್ನಡ ಜಾಗೃತಿ ಸಮಾವೇಶದ ನಿಮಿತ್ತ ನಗರದಲ್ಲಿ ಗುರುವಾರ ಅಲಂಕೃತ ರಥದಲ್ಲಿ ಕನ್ನಡ ತಾಯಿ ಭುವನೇಶ್ವರಿ ಭಾವಚಿತ್ರದ ಸಂಭ್ರಮದ ಮೆರವಣಿಗೆ ನಡೆಯಿತು. ಬಸವೇಶ್ವರ ವೃತ್ತದಿಂದ ಆರಂಭಗೊಂಡ ಮೆರವಣಿಗೆ ಮಹಾವೀರ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ, ಹರಳಯ್ಯ ವೃತ್ತ, ಜಿಲ್ಲಾ ಆಸ್ಪತ್ರೆ ಕ್ರಾಸ್, ರೋಟರಿ ಕನ್ನಡಾಂಬೆ ವೃತ್ತದ ಮೂಲಕ ಹಾಯ್ದು ಜಿಲ್ಲಾ ರಂಗ ಮಂದಿರಕ್ಕೆ ತಲುಪಿ ಸಮಾರೋಪಗೊಂಡಿತು. ಪುಷ್ಪಗಳಿಂದ ಅಲಂಕೃತ ರಥದಲ್ಲಿ ಕನ್ನಡ ತಾಯಿ ಭುವನೇಶ್ವರಿಯ ಬೃಹತ್ ಭಾವಚಿತ್ರ ಇಡಲಾಗಿತ್ತು. ಸಂಘಟನೆ ಕಾರ್ಯಕರ್ತರು ಹಾಗೂ ಕನ್ನಡಾಭಿಮಾನಿಗಳು ಕೊರಳಲ್ಲಿ ಶಲ್ಯ ಧರಿಸಿದ್ದರು.



ಮೆರವಣಿಗೆ ಉದ್ದಕ್ಕೂ ಕನ್ನಡ ಧ್ವಜಗಳು ರಾರಾಜಿಸಿದವು. ಕನ್ನಡ ತಾಯಿ ಭುವನೇಶ್ವರಿಗೆ ಜಯವಾಗಲಿ ಎಂಬ ಘೋಷಣೆಗಳು ಮೊಳಗಿದವು.

ಬ್ಯಾಂಡ್ ಬಾಜಾ, ಯುವಕರ ನರ್ತನ ಮೆರವಣಿಗೆ ಸಂಭ್ರಮ ಇಮ್ಮಡಿಗೊಳಿಸಿದವು. ಚಿತ್ರನಟ ಟೆನ್ನಿಸ್ ಕೃಷ್ಣ, ಕನ್ನಡ ಸೇನೆ ಕರ್ನಾಟಕದ ರಾಜ್ಯ ಅಧ್ಯಕ್ಷ ಎ.ಆರ್. ಕುಮಾರ್, ಉಪಾಧ್ಯಕ್ಷ ರವಿ ಸ್ವಾಮಿ ನಿರ್ಣಾ, ಜಿಲ್ಲಾ ಅಧ್ಯಕ್ಷ ಸುಭಾಷ್ ಕೆನಾಡೆ, ಬೀದರ್ ತಾಲ್ಲೂಕು ಅಧ್ಯಕ್ಷ ರಾಜಶೇಖರ ಮಂಗಲಪೇಟ್, ಸಂಘಟನೆಯ ಕಾರ್ಯಕರ್ತರು, ಕನ್ನಡಾಭಿಮಾನಿಗಳು ಪಾಲ್ಗೊಂಡಿದ್ದರು.

# ಬೂತ್ ಲೆವೆಲ್ ಎಜೆಂಟ್‌ರನ್ನು ನೇಮಿಸಲು ರಾಜಕೀಯ ಪಕ್ಷಗಳ ಸಹಕಾರ ಅಗತ್ಯ


ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಜೂ. 20: ಮತದಾನದಿಂದ ಯಾರು ವಂಚತರಾಗಬಾರದು ಎಂಬ ಉದ್ದೇಶದಿಂದ ಭಾರತದ ಚುನಾವಣಾ ಆಯೋಗವು ನೀಡಿದಂತಹ ನಿರ್ದೇಶನದ ಮೇರೆಗೆ ಕಲಬುರಗಿ ಜಿಲ್ಲಾ ವ್ಯಾಪ್ತಿಯ ಎಲ್ಲಾ ವಿಧಾನಸಭಾ ಮತಕ್ಷೇತ್ರಗಳ ಮತಗಟ್ಟೆಗಳ ಕೇಂದ್ರಗಳಲ್ಲಿ ಬೂತ್ ಲೆವೆಲ್ ಏಜೆಂಟ್‌ರನ್ನುನೇಮಿಸಲು ಎಲ್ಲಾ ರಾಜಕೀಯ ಪಕ್ಷಗಳ ಸಹಕಾರ ಬಹಳಷ್ಟು ಮುಖ್ಯವಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ಶುಕ್ರವಾರದಂದುಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ವಿಧಾನಸಭಾ ಮತಕ್ಷೇತ್ರಗಳ ಮತಗಟ್ಟೆಗಳ ಕೇಂದ್ರಗಳಲ್ಲಿ ಬೂತ್ ಲೆವೆಲ್ ಏಜೆಂಟ್‌ರನ್ನು ನೇಮಿಸುವ ಸಭೆಯ ಅಧ್ಯಕ್ಷತೆಯನ್ನುವಹಿಸಿ ಮಾತನಾಡಿ, ಹೊಸ ಬಿಎಲ್‌ಓ ಗಳನ್ನು ನೇಮಿಸಿದ ನಂತರ ಅವರಿಗೆ ಐ.ಡಿ ಕಾರ್ಡನ್ನು ನೀಡಲಾಗವುದು ಎಂದರು.

ಕಲಬುರಗಿಯಲ್ಲಿ 2400 ಬೂತ್‌ಗಳಿದ್ದು. ಎಲ್ಲಾ ಕಡೆಗೂ ಬೂತ್ ಲೇವಲ್ ಏಜೆಂಟರನ್ನು ನೇಮಿಸಿ ಚುನಾವಣೆಗಳು ನಿಷ್ಪಕ್ಷಪಾತವಾಗಿ ಮತ್ತು ಪಾರದರ್ಶಕವಾಗಿ ಚುನಾವಣೆಗಳು ನಡೆಸಲು ಚುನಾವಣಾ ಆಯೋಗವು ಹಲವಾರು ನಿರ್ದೇಶನ ನೀಡಿದೆ ಎಂದರು.

ಬೂತ್ ಮಟ್ಟದ ಏಜಂಟ್‌ಗಳ ಛಾಯಾಚಿತ್ರ ಮತ್ತು ಮೊಬೈಲ್ ಸಂಖ್ಯೆಯನ್ನು ಸೇರಿಸಲು ಚುನಾವಣಾ ಆಯೋಗವು ಫಾರ್ಮ್ ಬಿಎಲ್ಎ–2 ಅನ್ನು ಮಾರ್ಪಡಿಸಲಾಗಿದೆ. ಮತ್ತು ಭವಿಷ್ಯದಲ್ಲಿ ಬಿಎಲ್‌ಓಗಳ ನೇಮಕಾತಿಗೆ ಮಾಹಿತಿಯನ್ನು ಪಡೆಯಲು ಎಲ್ಲಾ ರಾಜಕೀಯ ಪಕ್ಷಗಳು ಬೂತ್ ಏಜಂಟ್‌ರನ್ನು ನೇಮಿಸಲು

ಸಹಕಾರ ನೀಡಬೇಕೆಂದು ಹೇಳಿದರು.



ಬಿಎಲ್‌ಓ ಗಳ ಕುರಿತು ಸಂಗ್ರಹಿಸಿದ ಮಾಹಿತಿಯನ್ನು ಜೂನ್ 2025 ರೊಳಗಾಗಿ ಕಳುಹಿಸಬೇಕಾದ ಕಾರಣ ಎಲ್ಲಾ ರಾಜಕೀಯ ಪಕ್ಷಗಳ ಮುಖಂಡರುಗಳು ಸಹಕಾರ ನೀಡಬೇಕೆಂದು ಹೇಳಿದರು.

ಈ ಸಭೆಯಲ್ಲಿ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಮತ್ತು ಆಮ್ ಆದ್ಮಿ ಪಾರ್ಟಿಯ ಜಿಲ್ಲಾ ಅಧ್ಯಕ್ಷರುಗಳು ಮತ್ತು ಕಾರ್ಯಕರ್ತರುಉಪಸ್ಥಿತರಿದ್ದರು.

# ವಿವಿಧ ಸ್ಪರ್ಧೆಗಳ ಬಹುಮಾನ ವಿತರಣೆ

ಬೀದರ್: ಜೂ. 20:ಗುರು ನಾನಕ್ ಪ್ರಥಮ ದರ್ಜೆ ಮಹಾವಿದ್ಯಾಲಯದ ರಜತ (ಬೆಳ್ಳಿ) ಮಹೋತ್ಸವದ ಅಂಗವಾಗಿ ಆಯೋಜಿಸಿದ ಅಂತರ ಮಹಾವಿದ್ಯಾಲಯದ ವಿವಿಧ ಸ್ಪರ್ಧೆಗಳ ಬಹುಮಾನ ವಿತರಣೆ ಕಾರ್ಯಕ್ರಮವು ಶುಕ್ರವಾರ ನಗರದ ಗುರು ನಾನಕ್ ಭವನದಲ್ಲಿ ಜರುಗಿತು. ಬೆಳ್ಳಿ ಮಹೋತ್ಸವದ ಅಂಗವಾಗಿ ಗುರು ನಾನಕ್ ಪ್ರಥಮ ದರ್ಜೆ ಮಹಾವಿದ್ಯಾಲಯವು ಒಂದು ವಾರಗಳ ಕಾಲ ಕ್ರಿಕೆಟ್, ಥ್ರೂಬಾಲ್, ಖೋ ಖೋ, ಛಾಯಾ ಚಿತ್ರ, ರಂಗೋಲಿ, ಇತ್ಯಾದಿ ಸ್ಪರ್ಧೆಗಳನ್ನು ಆಯೋಜಿಸಿತು.



ಸ್ಪರ್ಧೆಗಳಲ್ಲಿ ಸುಮಾರು 12 ಮಹಾವಿದ್ಯಾಲಯದ 450ಕ್ಕು ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದರು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರೊ. ಪರಮೇಶ್ವರ್ ನಾಯಕ್ ಟಿ. ಕುಲ ಸಚಿವರು (ಮೌಲ್ಯಮಾಪನ) ಹಾಗೂ ಸುರೇಖಾ ಎಸ್. ಕುಲ ಸಚಿವರು (ಆಡಳಿತ) ಕಾರ್ಯಕ್ರಮವನ್ನು ಉದ್ಘಾಟಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ಕೊಟ್ಟರು. ಕಾರ್ಯಕ್ರಮದ ಅಧ್ಯಕ್ಷತೆಯನ್ನುವಹಿಸಿದ ಗುರು ನಾನಕ್ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷರು ಡಾ. ರೇಷ್ಮಾ ಕೌರರವರು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಶುಭಾಶಯ ಕೋರುವ ಮೂಲಕ ಪ್ರಮಾಣ ಪತ್ರಗಳು ಹಾಗೂ ಸ್ಮರಣಿಕೆಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಶ್ಯಾಮಲಾ ವಿ ದತ್ತ, ಗುರು ನಾನಕ್ ಪಿ. ಯು. ಕಾಲೇಜಿನ ಮುಖ್ಯಸ್ಥರಾದ ಡಾ. ಜಸ್ಮಿತ್ ಕೌರ್, ಐಕಿಂಅ ಸಂಯೋಜಕರಾದ ಡಾ. ಸಂಜಯ ಮೈನಳ್ಳಿ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಆಸ್ತಿ ವಿವಾದ: ವ್ಯಕ್ತಿ ಮೇಲೆ ಹಲ್ಲೆ

(ಮಲ್ಲಿಕಾರ್ಜುನ ಎಂ.)

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಗುರುವಾರ ಇಚನೆ ತಹಶೀಲ್ದಾರ್ ಕಚೇರಿಗೆ ಬಂದಿದ್ದಾಗ ವ್ಯಕ್ತಿಯೊಬ್ಬರ ಮೇಲೆ ಹಲ್ಲೆ ನಡೆದಿದೆ. ವಡಗೇರಾ ಹಯ್ಯಾಳ(ಕೆ) ಗ್ರಾಮದ ಮಿತಿ ಮಹಾದೇವಪ್ಪ ಶರಣಪ್ಪ ಬಿರಾದಾರ ಹಲ್ಲೆಗೆ ಒಳಗಾದ ವ್ಯಕ್ತಿ. ತಾಲ್ಲೂಕಿನ ಕನ್ಯಾಕೊಳ್ಳೂರ ಗ್ರಾಮದ ದೇವಣ್ಣಗೌಡ ಹಾಗೂ ಇತರ ಐವರ ವಿರುದ್ಧ ದೂರು ದಾಖಲಾಗಿದೆ. ತಾಲೂಕಿನ ಕನ್ಯಾಕೊಳ್ಳುರ ಗ್ರಾಮದಲ್ಲಿ ಬರುವ ಜಮೀನು ವಿವಾದ ಮಹಾದೇವ ಹಾಗೂ ದೇವಣ್ಣಗೌಡ ನಡುವೆ ನಡೆದಿದೆ. ಗುರುವಾರ ಶಹಾಪೂರ ಪೊಲೀಸರು ದಾಖಲಿಸಿದ್ದ ಪ್ರಕರಣದಲ್ಲಿ



ಜಾಮೀನು ಪಡೆದು ಮುಚ್ಚಳಕ ಪತ್ರ ಬರೆದು ಹೊರಗಡೆ ಬಂದಾಗ ದೇವಣ್ಣಗೌಡ ಹಾಗೂ ಇತರ ಐವರು ಹಲ್ಲೆ ಮಾಡಿದ್ದಾರೆ ಎಂದು ಗಾಯಗೊಂಡಿರುವ ಮಹಾದೇವ ಮಾಹಿತಿ ನೀಡಿದರು. ಹಲ್ಲೆಗೆ ಒಳಗಾದ ಮಹಾದೇವಪ್ಪ ಅವರು, ಶಹಾಪುರ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಅವರ ಹೇಳಿಕೆ ಪಡೆದು ದೂರು ದಾಖಲಿಸಲಾಗುವುದು ಎಂದು ಶಹಾಪುರ ಠಾಣೆ ಪಿಐ ಎಸ್.ಎನ್.ಪಾಟೀಲ ತಿಳಿಸಿದ್ದಾರೆ. ನಮ್ಮ ಕಚೇರಿಯ ಅವರಣದಲ್ಲಿ ಘಟನೆ ನಡೆದ ಬಗ್ಗೆ ಮಾಹಿತಿಯಿಲ್ಲ. ತಮ್ಮ ಕಚೇರಿಯಲ್ಲಿ ಸಿಸಿ ಕ್ಯಾಮರಾ ಇದ ಎಂದು ತಹಶೀಲ್ದಾರ್ ಉಮಕಾಂತ ಹಳ್ಳಿ ಸಷ್ಪಪಡಿಸಿದ್ದಾರೆ.

## ಮುಖ್ಯಮಂತ್ರಿಗಳು ಆಗಮನದ ಕಾರ್ಯಕ್ರಮದ ಸಿದ್ಧತೆ ಪರಿಶೀಲಿಸಿದ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂನ್ 20: ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜೂನ್ 23ರಂದು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ಹಿನ್ನೆಲೆಯಲ್ಲಿ ನಾನಾ ಕಾರ್ಯಕ್ರಮಗಳ ಸಿದ್ಧತೆಯ ಬಗ್ಗೆ ಶ್ರೀಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಜೂನ್ 20ರಂದು ಕಾರ್ಯಕ್ರಮದ ಸ್ಥಳಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿದರು.

ಬೆಳಗ್ಗೆ ತಮ್ಮ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ನಡೆಸಿದ ನಂತರ ನೇರವಾಗಿ ರಾಯಚೂರ ವಿಶ್ವವಿದ್ಯಾಲಯದ ಆವರಣಕ್ಕೆ ತೆರಳಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಹಿನ್ನೆಲೆಯಲ್ಲಿ ಹಬ್ಬದ ರೀತಿಯಲ್ಲಿ ಸಿದ್ಧವಾಗುತ್ತಿರುವ ವಿಶ್ವವಿದ್ಯಾಲಯದ ಆವರಣದಲ್ಲಿನ ನಾನಾ ಸಿದ್ಧತಾ ಕಾರ್ಯಗಳನ್ನು ಪರಿಶೀಲಿಸಿದರು. ಬಳಿಕ ಶಾಸಕರು, ಹೆಲಿಪ್ಯಾಡ್ ಆವರಣಕ್ಕೆ ತೆರಳಿ ಅಲ್ಲಿನ ಸಿದ್ಧತೆ ಮತ್ತು ಸೂಕ್ತ ಭದ್ರತೆಯ ಬಗ್ಗೆ ಮಾಹಿತಿ ಪಡೆದುಕೊಂಡರು.

ಅಲ್ಲಿಂದ ಶಾಸಕರು, ಯರಗೇರಾ ಗ್ರಾಮಕ್ಕೆ ತೆರಳಿದರು. ಯರಗೇರಾ ಕ್ರಾಸ್ ಬಳಿಯಲ್ಲಿ, ಬೃಹತ್ ರೀತಿಯಲ್ಲಿ ಸಿದ್ಧವಾಗುತ್ತಿರುವ



ಬುಡಕಟ್ಟು ಉತ್ಸವ ಹಾಗೂ 371 ಜೆ ದಶಮಾನೋತ್ಸವ ಮತ್ತು ರಾಯಚೂರ ಗ್ರಾಮೀಣ ಕ್ಷೇತ್ರವ್ಯಾಪ್ತಿಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಸಮಾರಂಭದ ಮುಖ್ಯ ವೇದಿಕೆಯ ಸಿದ್ಧತೆಯನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಮುಖ್ಯ ವೇದಿಕೆ ನಿರ್ಮಾಣ ಸೇರಿದಂತೆ ಎಲ್ಲಾ ಸಿದ್ಧತಾ ಕಾರ್ಯಗಳನ್ನು ವೇಗಗೊಳಿಸಲು ಸೂಚನೆ ನೀಡಿದರು. ವೇದಿಕೆ ನಿರ್ಮಾಣ ಸೇರಿದಂತೆ ಶಿಷ್ಠಾಚಾರ ಪಾಲನೆ ಹಾಗು ಇನ್ನಿತರೆ ಜವಾಬ್ದಾರಿ ವಹಿಸಿಕೊಂಡ ಅಧಿಕಾರಿಗಳು ಸ್ಥಳದಲ್ಲಿದ್ದು, ವೇದಿಕೆಯ ಮೇಲೆ ಮತ್ತು ಮುಂಭಾಗದಲ್ಲಿ ಗಣ್ಯರ ಆಸನದ ವ್ಯವಸ್ಥೆ, ಪತ್ರಿಕಾ ಗ್ಯಾಲರಿ, ಸಾರ್ವಜನಿಕರಿಗೆ ಆಸನ, ಪ್ರವೇಶ ದ್ವಾರ, ಗದ್ದಲ ಆಗದಂತೆ ಸೂಕ್ತ ಬ್ಯಾರಿಕೇಡ್ ವ್ಯವಸ್ಥೆ, ತಾತ್ಕಾಲಿಕ ಚಿಕಿತ್ಸಾ ವ್ಯವಸ್ಥೆ, ಕುಡಿಯುವ ನೀರು, ಉಪಹಾರ ಊಟದ ಗ್ಯಾಲರಿ ನಿರ್ಮಾಣ ಕಾರ್ಯಗಳು ಅಚ್ಚುಕಟ್ಟಾಗಿ ನಡೆಯುವಂತೆ ಶಾಸಕರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮುಖ್ಯ ವೇದಿಕೆಯ ಬಳಿ ಗದ್ದಲವಾಗದಂತೆ ವಾಹನಗಳಿಗೆ ಸೂಕ್ತ ಪಾರ್ಕಿಂಗ್, ತುರ್ತು ಸಂದರ್ಭದಲ್ಲಿ ಅಂಬುಲೆನ್ಸ್ ಸರಳವಾಗಿ ಮುಖ್ಯ ರಸ್ತೆಗೆ ಸಂಪರ್ಕಿಸಲು ಅನುಕೂಲವಾಗುವಂತೆ ಬ್ಯಾರಿ–ಕೇಡ್ ಬಳಸಿ ಪ್ರತ್ಯೇಕ ಮಾರ್ಗ ನಿರ್ಮಾಣ ಸೇರಿದಂತೆ ಎಲ್ಲಾ ರೀತಿಯ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಇದೆ ವೇಳೆ ಶಾಸಕರು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಮುಖಂಡರಾದ ಬಸವರಾಜ ಪಾಟೀಲ ಇಟಗಿ, ರಜಾಕ್ ಉಸ್ತಾದ್, ಮಲ್ಲಿಕಾರ್ಜುನ ಗೌಡ ತಲಮಾರಿ, ಅಸ್ಲಂ ಪಾಶಾ ಸೇರಿದಂತೆ ಇನ್ನಿತರ ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಯರಗೇರಾ ಗ್ರಾಮದ ಪ್ರಮುಖರು ಇದ್ದರು.

# ಇಂದು 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಜೂನ್ 20–ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವು ಜೂನ್ 21ರಂದು ಬೆಳಗ್ಗೆ 6.30ಕ್ಕೆ ರಾಯಚೂರಿನಲ್ಲಿ ವಿಜೃಂಭಣೆಯಿಂದ ಆಯೋಜಿಸಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ್ ಅವರು ಉದ್ಘಾಟಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಿವರಾಜ್ ಎಸ್ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್. ಬಸನಗೌಡ ತುರವಿಹಾಳ, ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸದಸ್ಯರಾದ ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ. ನಮೋಶಿ, ಮಾನ್ವಿ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸೂಗೂರು ಶಾಸಕರಾದ ಮಾನಪ್ಪ ಡಿ. ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ. ಪಾಟೀಲ, ದೇವದುರ್ಗ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ್ ಬಯ್ಯಾಪೂರ, ಎ ವಸಂತಕುಮಾರ, ಬಸನಗೌಡ ಬಾದರ್ಲಿ, ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಆಧ್ಯಕ್ಷರಾದ ಪವನ್ ಪಾಟೀಲ, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಿತೇಶ್ ಕುಮಾರ್ ಸಿಂಗ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಹರ್ಷ ಗುಪ್ತ, ಕಲಬುರಗಿ ಪ್ರಾದೇಶಿಕ ಆಯುಕ್ತರಾಧ ಕೃಷ್ಣಾ ಬಾಜಪೇಯಿ, ಆಯುಷ್ ಇಲಾಖೆಯ ಆಯುಕ್ತರಾದ ವಿಪಿನ್ ಸಿಂಗ್, ರಾಯಚೂರು ಜಿಲ್ಲಾಧಿಕಾರಿಗಳಾದ ಕೆ.ನಿತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಪಾಂಡ್ವೆ ರಾಹುಲ್ ತುಕರಾಂ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಉಪಸ್ಥಿತರಿರುವರು ಎಂದು ಆಯುಷ್ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಶಂಕರಗೌಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಸಾಹಿತ್ಯ ಪರಿಷತ್ತಿನ ನಗರ ಘಟಕ ಉಪಾಧ್ಯಕ್ಷರಾಗಿ ಮಂಜುನಾಥ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕನ್ನಡ ಸಾಹಿತ್ಯ ಪರಿಷತ್ತು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಭಾಷೆ, ಸಾಹಿತ್ಯ ಉಳಿವಿಗಾಗಿ ಶ್ರಮಿಸಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ನಗರ ಘಟಕ ಉಪಾಧ್ಯಕ್ಷನಾಗಿ ಮಂಜುನಾಥ್ ಪಿ. ಚಿಂತ–ಕೋಟಿ ಇವರನ್ನು ನೇಮಕ ಮಾಡಲಾಗಿದೆ ಎಂದು ನಗರ ಘಟಕ ತಾಲುಕಾಧ್ಯಕ್ಷ ರಾಜಕುಮಾರ್ ಆರ್. ಹಡಪದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕು ಸಮಿತಿ ವತಿಯಿಂದ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ತಾಲೂಕ ಪಂಚಾಯಿತಿ ಕಾರ್ಯಾಲಯ ಮುಂದೆ ರಸ್ತಾಪುರ ಗ್ರಾಮದ ಬಡ ದಲಿತರ ಕೆರೆಗೆ ಮತ್ತು ಬೆನಕನಹಳ್ಳಿ ಗ್ರಾಮದ ದಲಿತರ ಕೇರಿಗೆ ಶುದ್ಧ ಕುಡಿಯುವ ನೀರು ಒದಗಿಸಿ ಕೊಡಬೇಕೆಂದು ಮತ್ತು ಉದ್ಯೋಗ ಖಾತ್ರಿ ಕೆಲಸ ಸಮರ್ಪಕವಾಗಿ ಕೊಡಬೇಕೆಂದು. ಹೋರಾಟ ಮಾಡಿದ್ದೇವೆ ಆದರೆ ತಾಲೂಕ ಪಂಚಾಯಿತಿ ಇಔ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಧ್ಯಪ್ರವೇಶ ಮಾಡಿ ಮೂರು ದಿನ ಒಳಗಾಗಿ ಕುಡಿಯುವ ನೀರು ಕೊಡುತ್ತೇವೆ ಎಂದು ಸುಳ್ಳು ಭರವಸೆ ನೀಡಿ ಒಂದು ತಿಂಗಳ ಕಳೆದರೂ ಕುಡಿಯುವ ನೀರು ಕೊಡದೆ ವಿನಾಕಾರಣ ಸತಾಯಿಸುತ್ತಿರುವುದು ಖಂಡಿಸಿ ಶಹಪುರ್ ತಾಲೂಕ ಮುಖಂಡರು ತಾಲೂಕ ಪಂಚಾಯತಿ ಮುಂಭಾಗ ಧರಣಿ ಸತ್ಯಾಗ್ರ. ತಕ್ಷಣ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಆಗಮಿಸಿ ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ ಬಡ ದಲಿತರ ಕೆ–ರೆಗೆ ನೀರು ಕೊಡುವವರೆಗೂ ಹೋರಾಟ ನಿಲ್ಲುವುದಿಲ್ಲ ಎಂಬ ಭೀಮಣ್ಣ ಪೂಜಾರಿ ತಿಪ್ಪನಹಳ್ಳಿ ಆಗ್ರಹಿಸಿದ್ದರು.

## ಕಲಬುರಗಿ ಜಿಲ್ಲಾ ನ್ಯಾಯಾಲಯದಲ್ಲಿ "ಯೋಗ ಧನುಷ್" ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಜೂ.20–ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಕಲಬುರಗಿ ಜಿಲ್ಲಾ ನ್ಯಾಯಾಲಯದಲ್ಲಿ ಶುಕ್ರವಾರ "ಯೋಗಧನುಷ್" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಸರ್ಕಾರಿ ಹೋಮಿಯೋಪತಿ ಮತ್ತು ಆಯುರ್ವೇದ ಸಂಯುಕ್ತ ಅಸ್ಪತ್ರೆ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಸಂಜಯ ಕುಲಕರ್ಣಿ ಅವರು "ಯೋಗ ಧನುಷ್" ಕಾರ್ಯಕ್ರಮದ ಉದ್ದೇಶ ಹಾಗೂ Y-Break ಯೋಗ ಆ್ಯಪ್ (app) ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಯೋಗ ತರಬೇತಿದಾರ ಸುದೀಪ ಅವರು ಜ–ಃಡಿಜಚಿಞ ಯೋಗ ಆ್ಯಪ್ ಪ್ರೊಟೋಕಾಲ್ ಪ್ರಕಾರ ಯೋಗಾಭ್ಯಾಸ ಮಾಡಿಸಿದರು.

ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಹಾಗೂ ಜಿಲ್ಲಾ ನ್ಯಾಯಾಲಯದ ಆಡಳಿತಾಧಿಕಾರಿ ಸುನಿಲ್ ಕುಮಾರ್ ಚಂದೆ ಅವರು ಮಾತನಾಡಿ, ಸಿಬ್ಬಂದಿಗಳು Y-break app ಬಳಸಿ ಪ್ರತಿನಿತ್ಯ ಯೋಗವನ್ನು ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯ ಸಿಬ್ಬಂದಿಗಳಾದ ಶರಣಕುಮಾರ್, ಕಲ್ಲಪ್ಪ ಹಾಗೂ ಇನ್ನಿತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಜೂ.20–ಸೂಲಹಳ್ಳಿ–ಚಿತ್ತಾಪುರ ರೈಲ್ವೆ ನಿಲ್ದಾಣಗಳ ಮಧ್ಯೆ ಕಿ.ಮೀ. ನಂ. 11/10–12 ಡೌನ್‌ಲೈನ್‌ನ ರೈಲ್ವೆ ಹಳಿಯ ಪಕ್ಕದಲ್ಲಿ ದಿನಾಂಕ:13–06–2025 ರಂದು ಸುಮಾರು 35 ರಿಂದ 40 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವ್ಯಕ್ತಿಯು 5 ಅಡಿ 4 ಇಂಚು ಎತ್ತರ ಇದ್ದು, ಗೋಧಿ ಮೈಬಣ್ಣ, ಕೋಲು ಮುಖ, ಉದ್ದನೆಯ ಮೂಗು ತಲೆಯಲ್ಲಿ ಸುಮಾರು 3 ಇಂಚು ಉದ್ದದ ಕಪ್ಪು ಕೂದಲು, ಮುಖದ ಮೇಲೆ ಸಣ್ಣ ಮೀಸೆ ಬಿಟ್ಟಿದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ.

ಕಪ್ಪು ಮತ್ತು ಬಿಳಿ ಮಿಶ್ರಿತ ಅಂಡರ್‌ವೇರ್ ಧರಿಸಿರುತ್ತಾರೆ. ಈ ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080–22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476–202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

"ಧರ್ತಿ ಆಬಾ ಗ್ರಾಮ ಉತ್ಕರ್ಷ ಅಭಿಯಾನಕ್ಕೆ ಚಾಲನೆ

## ಸರ್ಕಾರದ ಯೋಜನೆಗಳು ಬುಡಕಟ್ಟು ಜನರಿಗೆ ಸಿಗುವಂತೆ ಶ್ರಮಿಸಿ: ಇಒ ರಮೇಶ ಸುಲ್ಫಿ.

(ವರದಿ. ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಜೂ 20 ಸರ್ಕಾರದ ಯೋಜನೆಗಳು ಲಾಭವನ್ನು ಪ್ರತಿಯೊಬ್ಬ ಬಡವನಿಗೆ ಸಿಗುವಂತೆ ಸಂಬಂಧ ಪಟ್ಟ ಇಲಾಖೆ ಅಧಿಕಾರಿಗಳು ಮಾಡಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಫಿ ಹೇಳಿದರು.

ತಾಲ್ಲೂಕಿನ ಪರತಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಯ ಖಾನಾಪೂರ(ಕೆ)ವಾಡಿ ಗ್ರಾಮದಲ್ಲಿ ಹಮ್ಮಿಕೊಂಡ "ಧರ್ತಿ ಆಬಾ ಗ್ರಾಮ ಉತ್ಕರ್ಷ ಅಭಿಯಾನಕ್ಕೆ" ಚಾಲನೆ ನೀಡಿ ಮಾತನಾಡಿ, ದುರ್ಗಮ ಪ್ರದೇಶಗಳಲ್ಲಿ ವಾಸಿಸುವ ಬುಡಕಟ್ಟು ಜನರಿಗೆ ಮೂಲಭೂತ ಸೌಕರ್ಯಗಳಾದ ರಸ್ತೆ, ಶುದ್ಧ ಕುಡಿಯುವ ನೀರು, ಆರೋಗ್ಯ, ದೂರವಾಣಿ ಸಂಪರ್ಕ, ವಿದ್ಯುಚ್ಛಕ್ತಿ ಮತ್ತು ಮನೆಗಳನ್ನು ಒದಗಿಸಿ ಕೊಡುವುದೇ ಈ ಅಭಿಯಾನದ ಉದ್ದೇಶವಾಗಿದೆ ಎಂದರು.



ದೇಶದ 30 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ 63843 ಹಳ್ಳಿಗಳಲ್ಲಿ ವಾಸಸುತ್ತಿರುವ 5338 ಬುಡಕಟ್ಟು ಜನರಿಗೆ ಮೂಲಭೂತ ಸೌಕರ್ಯಗಳು ಒದಗಿಸುವ ಗುರಿಯನ್ನು ಹೊಂದಿದೆ. ಹೀಗಾಗಿ ತಾಲ್ಲೂಕಿನ ಮಿರ್ಜಾಪೂರ, ಘೋಗ್ಗಾ, ಕೌಡಿಯಾಳ(ಎಸ್) ಖೇರ್ಡಾ(ಕೆ) ಗ್ರಾಮಗಳಲ್ಲಿ ವೇಳಾ ಪಟ್ಟಿಯಂತೆ ಅಭಿಯಾನ ಹಮ್ಮಿಕೊಳ್ಳುವ ಮೂಲಕ ಸಂಬಂಧ ಪಟ್ಟ ಅಧಿಕಾರಿಗಳು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ತಾಲ್ಲೂಕು ಪರಿಶಿಷ್ಟ ಪಂಗಡಗಳ ಕಲ್ಯಾಣ ಅಧಿಕಾರಿ ಮೋನಮ್ಮ ಅವರು ಮಾತನಾಡಿ, ಸಂಬಂಧ ಪಟ್ಟ ಅಧಿಕಾರಿಗಳು ನಿಮಗೆ ಸ್ಪಂದನೆ ಮಾಡದೆ ಇದ್ದಲ್ಲಿ ನಮಗೆ ದೂರು ನೀಡಿ ಅಥವಾ ನಮ್ಮ ಗಮನಕ್ಕೆ ತಂದಲ್ಲಿ ನಾವು ಮೇಲಾಧಿಕಾರಿಗಳ ಗಮನಕ್ಕೆ ತಂದು ನಿಮಗೆ ನ್ಯಾಯ ಒದಗಿಸಿಕೊಡು ಕೆಲಸ ಮಾಡುತ್ತೇವೆ ಎಂದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಚಂದ್ರಾಮ ಧೂಳಖೇಡ ಮಾತನಾಡಿ, ಗ್ರಾಮ ಪಂಚಾಯತ್‌ಗಳಲ್ಲಿ ಸರ್ಕಾರದ ವತಿಯಿಂದ ಸಿಗಬೇಕಾದ ಸೌಲಭ್ಯಗಳನ್ನು ಬಡವರ ಮನೆ ಬಾಗಿಲಿಗೆ ಮುಟ್ಟಿಸುವಂತೆ ಪ್ರಾಮಾಣಿಕವಾಗಿ ಮಾಡುತ್ತವೆ ಎಂದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆ ಮೇಲ್ವಿಚಾರಕಿರಾದ ಡಾ.ಭಾಗ್ಯಮ್ಮ, ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯತ್

ಜೂನ್ 23ಕ್ಕೆ ರಾಯಚೂರಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮ;

## 371 ಜೆ ದಶಮಾನೋತ್ಸವ, ಬುಡಕಟ್ಟು ಉತ್ಸವ, 936 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂನ್ 20–: ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಂದ ಜೂನ್ 23ರಂದು ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ನಾನಾ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತ ಅಡಿಗಲ್ ಸಮಾರಂಭದ ಜೊತೆಗೆ 371 ಜೆ ದಶಮಾನೋತ್ಸವ ಮತ್ತು ಬುಡಕಟ್ಟು ಉತ್ಸವ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲು ರಾಯಚೂರ ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ ಹಾಗೂ ಶ್ರೀಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಜೂನ್ 20 ರಂದು ಜಂಟಿ ಪತ್ರಿಕಾಗೋಷ್ಠಿ ನಡೆಸಿದರು.

ಶಾಸಕರ ಕಚೇರಿ ಆವರಣದಲ್ಲಿ ಬೆಳಗ್ಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಂಸದರಾದ ಜಿ.ಕುಮಾರ ನಾಯಕ ಅವರು ಮಾತನಾಡಿ, ಸಂವಿಧಾನದ ಅನುಚ್ಛೇದ 371(ಜೆ) ಕಾಯಿದೆ ಅನುಷ್ಠಾನದಿಂದಾಗಿ ಈ ಭಾಗದವರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲು ಸೌಕರ್ಯ ಲಭ್ಯವಾಗಿ ನಮ್ಮ ಭಾಗದಲ್ಲಿ ಬಹುದೊಡ್ಡ ಕ್ರಾಂತಿಯಾಗುತ್ತಿದೆ. ಕೆಕೆಆರ್‌ಡಿಬಿ ಅಡಿಯಲ್ಲಿ ಇದುವರೆಗೆ 13,000 ಕೋಟಿ ರೂ ಅನುದಾನ ನೀಡಲಾಗಿದೆ. ಇದನ್ನು ಸಂಭ್ರಮಿಸಲಿಕ್ಕೆ ದಶಮಾನೋತ್ಸವ ಕಾರ್ಯಕ್ರಮ ಮಾಡುತ್ತಿದ್ದೇವೆ. ಜೊತೆಗೆ ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ ಅಂದಾಜು 936 ಕೋಟಿ ರೂ ವೆಚ್ಚದಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ಮತ್ತು ಉದ್ಘಾಟನೆಯು ಮಾನ್ಯ ಮುಖ್ಯಮಂತ್ರಿಗಳಿಂದ ನೆರವೇರಲಿದೆ ಎಂದು ತಿಳಿಸಿದರು.

ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜೂನ್ 23ರಂದು ನಡೆಯುವ ಕಾರ್ಯಕ್ರಮವು ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಹೊಸ ಇತಿಹಾಸ ಬರೆಯಲಿದೆ. ಮಾನ್ಯ ಮುಖ್ಯಮಂತ್ರಿಗಳ ಜೊತೆಗೆ ಹಿರಿಯ ಮುಖಂಡರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ. ಅಂದು ಅಂದಾಜು 936 ಕೋಟಿ ರೂ. ವೆಚ್ಚದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಲಿದೆ ಎಂದರು.

ರಾಯಚೂರ ವಿವಿ ಆವರಣದಲ್ಲಿ ವಿಶೇಷ ಕಾರ್ಯಕ್ರಮವಿದೆ. ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಎಂದು ರಾಯಚೂರ ವಿವಿಗೆ ಮರುನಾಮಕರಣ ನಡೆಯಲಿದೆ. ಒಂದೂವರೆ ಕೋಟಿ ರೂ ವೆಚ್ಚದಲ್ಲಿ ರಾಯಚೂರ ವಿವಿ ಆವರಣದಲ್ಲಿ 6 ಎಕರೆ ಪ್ರದೇಶದಲ್ಲಿ ಹೊಸದಾಗಿ ಉದ್ಯಾನ ವನ ನಿರ್ಮಾಣವಾಗಲಿದೆ ಎಂದರು.

ಕಾರ್ಯಕ್ರಮದ ಸಿದ್ಧತೆಯು ಭರ್ಜರಿ ನಡೆದಿದೆ. ಒಂದೆಡೆ ಬುಡಕಟ್ಟು ಉತ್ಸವದ ಮಳಿಗೆಗಳ ನಿರ್ಮಾಣ ಕಾರ್ಯ ಮತ್ತೊಂದೆಡೆ ಫಲಾನುಭವಿಗಳಿಗೆ ಸೌಲಭ್ಯ ವಿತರಣೆಯ ಮಳಿಗೆಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಬುಡಕಟ್ಟು ಸಮುದಾಯವರ ಕರಕುಶಲ ವಸ್ತುಗಳ ಪ್ರದರ್ಶನಕ್ಕೆ ಮತ್ತು ಅವರ ಕಲೆಗಳ ಅನಾವರಣಕ್ಕೆ ಉತ್ಸವದಲ್ಲಿ ಏರ್ಪಾಡು ಮಾಡಲಾಗಿದೆ ಎಂದರು.

ಅಂಬೇಡ್ಕರ್ ಅಭಿವೃದ್ಧಿ ನಿಗಮ, ಆದಿಜಾಂಬವ ನಿಗಮ, ಭೋವಿ ನಿಗಮ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಬಿಸಿಎಂ ಇಲಾಖೆಗೆ ಸಂಬಂಧಿಸಿದ ನಾನಾ ಕಾರ್ಯಕ್ರಮಗಳಡಿ 100 ಫಲಾನುಭವಿಗಳಿಗೆ ಕಾರು, ಟ್ರಾಕ್ಟರ್ ಸೇರಿದಂತೆ ನಾನಾ ಸೌಲಭ್ಯ ವಿತರಣೆ ಕಾರ್ಯಕ್ರಮ ನಡೆಯಲಿದೆ. 60 ಜನ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ಇದೆ ವೇಳೆ ವಿತರಿಸಲಾಗುವುದು. ಇದೆ ವೇಳೆ ಸಂವಿಧಾನದ ಅನುಚ್ಛೇದ 371(ಜೆ) ದಶಮಾನೋತ್ಸವ ಕಾರ್ಯಕ್ರಮವು ವಿಭಿನ್ನವಾಗಿ ನಡೆಯಲಿದೆ. 371(ಜೆ) ಹೋರಾಟಗಾಥೆ, ಈ ಮೀಸಲು ಸೌಲಭ್ಯ ಪಡೆದು ಉದ್ಯೋಗ ಗಿಟ್ಟಿಸಿದ ನೌಕರರ ಯಶೋಗಾಥೆ ಮಾಹಿತಿಯ ಮತ್ತು ಹೋರಾಟದ ವಿಭಿನ್ನ ಛಾಯಾಚಿತ್ರಗಳು ಒಳಗೊಂಡ ಪುಸ್ತಕದ ಲೋಕಾರ್ಪಣೆ ನಡೆಯಲಿದೆ ಎಂದರು.

24 ಕೋಟಿ ರೂ ವೆಚ್ಚದಲ್ಲಿ 72 ಸರ್ಕಾರಿ ಶಾಲೆಗಳಲ್ಲಿ 185 ಹೆಚ್ಚುವರಿ ಶಾಲಾ ಕೊಠಡಿಗಳು, ಶೌಚಾಲಯ, ಬೋಜನಾಲಯ ನಿರ್ಮಾಣ ಕಾಮಗಾರಿಗೆ, 12 ಕೋಟಿ ರೂ ವೆಚ್ಚದಲ್ಲಿ 5 ಹೊಸ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ, 6 ಕೋಟಿ ವೆಚ್ಚದಲಿ 27 ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ, 48 ಕೋಟಿ ರೂ ವೆಚ್ಚದಲ್ಲಿ 98 ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗೆ, 111 ಕೋಟಿ ರೂ ವೆಚ್ಚದಲ್ಲಿ 24 ಬಿಟಿ ರಸ್ತೆ ಕಾಮಗಾರಿಗಳಿಗೆ, 289 ಕೋಟಿ ರೂ ವೆಚ್ಚದಲ್ಲಿ 6 ಕೆರೆ ತುಂಬುವ ಯೋಜನೆ ಮತ್ತು ಏತ ನೀರಾವರಿ ಯೋಜನೆ ಕಾಮಗಾರಿಗೆ, 152 ಕೋಟಿ ರೂ ವೆಚ್ಚದಲ್ಲಿ 1 ಬ್ರಿಜ್ ಕಂ ಬ್ಯಾರೇಜ್ ಕಾಮಗಾರಿಗಳಿಗೆ,

21 ಕೋಟಿ ರೂ ವೆಚ್ಚದಲ್ಲಿ 218 ಹಳೆಯ ದೇವಾಲಯಗಳ ಜೀರ್ಣೋದ್ಧಾರ ಕಾಮಗಾರಿಗೆ, 3 ಕೋಟಿ ರೂ ವೆಚ್ಚದಲ್ಲಿ 12 ಚರ್ಚಗಳ ದುರಸ್ತಿ ಕಾಮಗಾರಿಗೆ, 2.83 ಕೋಟಿ ರೂ ವೆಚ್ಚದಲ್ಲಿ 35 ಮಸೀದಿ, ದರ್ಗಾ ಮತ್ತು ಆಶುರ್ ಖಾನ್ ಅಭಿವೃದ್ಧಿ ಕಾಮಗಾರಿಗೆ, 222 ಕೋಟಿ ರೂ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗೆ, 7 ಕೋಟಿ ರೂ ವೆಚ್ಚದಲ್ಲಿ 36 ಗ್ರಂಥಾಲಯಗಳ ನಿರ್ಮಾಣ ಕಾಮಗಾರಿಗೆ, 3 ಕೋಟಿ ರೂ ವೆಚ್ಚದಲ್ಲಿ 12 ಗ್ರಾಮದಲ್ಲಿ ಸಮುದಾಯ ಶೌಚಾಲಯ ನಿರ್ಮಾಣ ಕಾಮಗಾರಿಗೆ, 7 ಕೋಟಿ ರೂ ವೆಚ್ಚದಲ್ಲಿ 2 ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆರೋಗ್ಯ ಉಪಕೇಂದ್ರ ಕಾಮಗಾರಿಗಳಿಗೆ, 48 ಕೋಟಿ ರೂ ವೆಚ್ಚದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದಲ್ಲಿ ಜೆನೋಮ ಸೆಂಟರ್, ಉದ್ಯಾನವನ ಮತ್ತು ಬೋಧನಾ ಕೊಠಡಿ ಕಾಮಗಾರಿಗಳಿಗೆ, 40 ಲಕ್ಷ ರೂ ವೆಚ್ಚದಲ್ಲಿ ಪಶು ಆಸ್ಪತ್ರೆ, 2 ಕೋಟಿ ರೂ ವೆಚ್ಚದಲ್ಲಿ ಟ್ರಿ ಪಾರ್ಕ ನಿರ್ಮಾಣ ಕಾಮಗಾರಿ ಸೇರಿದಂತೆ ಇನ್ನಿತರ ಬೇರೆ ಬೇರೆ ಇಲಾಖೆಗಳ ಕಾಮಗಾರಿ ಒಳಗೊಂಡು ಅಂದಾಜು 936 ಕೋಟಿ ರೂ ವೆಚ್ಚದಲ್ಲಿ ನಾನಾ ಕಾಮಗಾರಿಗಳಿಗೆ ಮಾನ್ಯ ಮುಖ್ಯಮಂತ್ರಿಗಳು ಶಂಕುಸ್ಥಾಪನೆ ಮತ್ತು ಪೂರ್ಣಗೊಂಡ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಶಾಸಕರು ವಿವರಿಸಿದರು. ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಮುಖಂಡರಾದ ಬಸವರಾಜ ಪಾಟೀಲ ಇಟಗಿ, ಮಲ್ಲಿಕಾರ್ಜುನಗೌಡ ತಲಮಾರಿ, ಅಬ್ದುಲ್ ಖರೀಂ, ರಜಾಕ್ ಉಸ್ತಾದ್, ಜಯಂತರಾವ್ ಪತಂಗೆ, ರಾಜಶೇಖರ ರಾಮಸ್ವಾಮಿ, ಅಸ್ಲಂ ಪಾಶಾ, ಚಂದ್ರಶೇಖರ ಪಾಟೀಲ, ನಾಗೇಂದ್ರಪ್ಪ ಮಟಮಾರಿ, ಪಂಪಾಪತಿ, ಚನ್ನಬಸು ನಾಯಕ ಸೇರಿದಂತೆ ಇತರರು ಇದ್ದರು.

# ಬಾನು ಮುಷ್ತಾಕ್ ಬರಹಗಳು ಮಹಿಳಾ ಕುಲಕ್ಕೆ ಸ್ಫೂರ್ತಿ: ಡಾ. ಮಹಾದೇವಿ ಹೆಬ್ಬಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 20 : ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಬಾನು ಮುಷ್ತಾಕ್ ಅವರ ಬರಹಗಳಲ್ಲಿ ಮಹಿಳಾ ಸಂವೇದನೆ ಇದೆ. ಬಾನು ಅವರ ಹಸೀನಾ ಮತ್ತಿತರ ಕಥೆಗಳು ಜಾತಿ ಧರ್ಮಗಳಾಚೆ ಸ್ತ್ರೀ ಕುಲಕ್ಕೆ ಸ್ಫೂರ್ತಿಯ ಚಿಲುಮೆಗಳಂತಿವೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕಿ ಡಾ. ಮಹಾದೇವಿ ಹೆಬ್ಬಾಳೆ ಪ್ರತಿಪಾದಿಸಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು, ಚಕೋರ ಸಾಹಿತ್ಯ ವಿಚಾರ ವೇದಿಕೆ ಬೀದರ ಹಾಗೂ ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಬ್ರಿಮ್ಸ್ ಕನ್ನಡ ಸಂಘದ ಸಹಯೋಗದಲ್ಲಿ ಬ್ರಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ ಅಂತರಾಷ್ಟ್ರೀಯಾ ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್ ಅವರ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಿಳೆ ಎಲ್ಲಾ ಕಟ್ಟುಪಾಡು, ಸಂಪ್ರದಾಯ ಮತ್ತು ಮೂಢನಂಬಿಕೆಯಿಂದ ಹೊರಬರಬೇಕು. ತನಗೂ ಒಂದು ಜೀವನವಿದೆ, ಬದುಕಿದೆ ಎಂದು ಅರ್ಥೈಸಿಕೊಂಡು ಸ್ವತಂತ್ರವಾಗಿ ಬದುಕಬೇಕೆಂದು ಬಾನು ಮುಷ್ತಾಕ್ ಅವರು ತಮ್ಮ ಬರಹದಲ್ಲಿ ತಿಳಿಸಿದ್ದಾರೆ ಎಂದು ತಿಳಿಸಿದರು.



ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದ ವಿಶ್ರಾಂತ ಡೀನ್ ಪ್ರೊ. ದೇವಿದಾಸ ತುಮಕುಂಟೆ ಮಾತನಾಡಿ ಮುಷ್ತಾಕ್ ಅವರು ಬರೆದ ಕೃತಿಯನ್ನು 2025ರಲ್ಲಿ ದೀಪಾ ಭಸ್ತಿ ಅವರಿಂದ ಆಂಗ್ಲ ಭಾಷೆಗೆ ಅನುವಾದಿಸಲ್ಪಟ್ಟ ಸಣ್ಣ ಕಥಾಸಂಕಲನ 'ಹಾರ್ಟ್ ಲ್ಯಾಂಪ್'ಗೆ ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿ ಲಭಿಸಿದೆ. ಮೂಲತಃ ಹಾಸನ ಜಿಲ್ಲೆಯವರಾದ ಮುಷ್ತಾಕ್ ಅವರು ವಕೀಲೆ, ಸಾಮಾಜಿಕ ಕಾರ್ಯಕರ್ತೆ ಮತ್ತು ಬರಹಗಾರ್ತಿ. ಉರ್ದು, ಹಿಂದಿ, ತಮಿಳು, ಮಲೆಯಾಳಂ, ಆಂಗ್ಲಭಾಷೆಯಲ್ಲಿ ಕೃತಿಗಳು ಹೊರಬಂದಿವೆ ಎಂದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕಿ ಡಾ. ಚಂದ್ರಕಲಾ ಬಿದರಿ ಪ್ರಾಸ್ತಾವಿಕ ಮಾತನಾಡಿ ಬಾನು ಮುಷ್ತಾಕ್ ಅವರ ಜೀವನ ಮತ್ತು ಸಾಧನೆ ಕುರಿತು ಇಂದಿನ ಯುವ ಜನತೆಗೆ ತಿಳಿಸಿಕೊಡಲು ಕಾಲೇಜುಗಳಲ್ಲಿ ಅಕಾಡೆಮಿ ವತಿಯಿಂದ ಉಪನ್ಯಾಸ ಕಾರ್ಯಕ್ರಮ ಆಯೋಜಿಸುತ್ತಿದ್ದೇವೆ. ಹೃದಯಕ್ಕೆ ತಟ್ಟುವ, ಮನಸ್ಸಿಗೆ ಮುಟ್ಟುವ ಹಸೀನಾ ಮತ್ತು ಇತರೆ ಕಥೆಗಳನ್ನು ಬಾನು ಅವರು ರಚನೆ ಮಾಡಿ ಇಂದಿನ ಸಾಹಿತಿಗಳಿಗೆ ಆದರ್ಶಪ್ರಾಯರಾಗಿದ್ದಾರೆ ಎಂದರು. ಅನೇಕ ಕಷ್ಟಗಳನ್ನು ಸಹಿಸಿಕೊಂಡು, ಆ ಅನುಭವಗಳನ್ನು ಕಥೆ ಕಾದಂಬರಿ ಮೂಲಕ ಜನತೆಗೆ ತಿಳಿಸಲು ಪ್ರಯತ್ನ ಮಾಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬ್ರಿಮ್ಸ್ ಪ್ರಭಾರಿ ನಿರ್ದೇಶಕ ಡಾ. ಸುನೀಲ ತಪಸೆ ಮಾತನಾಡಿ ಬಾನು ಅವರು 'ಹೆಜ್ಜೆ ಮೂಡಿದ ಹಾದಿ, ಬೆಂಕಿ ಮಳೆ, ಎದೆಯ ಹಣತೆ, ಸಫಿರಾ, ಬಡವರ ಮಗಳು ಹೆಣ್ಣಲ್ಲ, ಕುಬ್ರ ಕಾದಂಬರಿ, ಇಬ್ಬನಿಯ ಹಾವು ಲೇಖನಗಳ ಸಂಗ್ರಹ, ಒದ್ದೆ ಕಣ್ಣಿನ ಬಾಗಿನ ಕವನ ಸಂಕಲನ ಹೀಗೆ ಅನೇಕ ಗಟ್ಟಿಸಾಹಿತ್ಯ ರಚನೆ ಮಾಡಿ ಅನೇಕ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಪ್ರಶಸ್ತಿಗಳನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ ಎಂದರು ಅಭಿಪ್ರಾಯಪಟ್ಟರು.

ಇದೇ ವೇಳೆ ವೇದಿಕೆ ಮೇಲೆ ಸಮುದಾಯ ವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಪಲ್ಲವಿ ಕೇಸರಿ, ಕ.ಜಾ.ಪ. ತಾಲೂಕಾಧ್ಯಕ್ಷ ಎಸ್.ಬಿ.ಕುಚಬಾಳ, ಸಂಚಾಲಕ ಅಜೀತ ನೇಳಗೆ ಸೇರಿದಂತೆ ವೈದ್ಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಬ್ರಿಮ್ಸ್ ಕನ್ನಡ ಸಂಘದ ಸಂಯೋಜಕ ಡಾ. ರಾಜಕುಮಾರ ಹೆಬ್ಬಾಳೆ ನಿರೂಪಿಸಿದರು. ಚಕೋರ ಸಾಹಿತ್ಯ ವಿಚಾರ ವೇದಿಕೆ ಸಂಚಾಲಕಿ ಡಾ. ಮಕ್ತುಂಬಿ ಎಂ. ಸ್ವಾಗತಿಸಿದರು. ಸಮುದಾಯ ವೈದ್ಯಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಪ್ರೊ. ಶಶಿಕಾಂತ ಹೊಸದೊಡ್ಡೆ ವಂದಿಸಿದರು.

# ಸಿದ್ರಾಮಯ್ಯ ಸ್ವಾಮಿಗೆ ರಾಜ್ಯಮಟ್ಟದ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 20 : ಕೃಷಿಕ ಸಮಾಜದ ಜಿಲ್ಲಾ ಅಧ್ಯಕ್ಷ, ಹಿರಿಯ ಪತ್ರಕರ್ತ ಸಿದ್ರಾಮಯ್ಯ ಸ್ವಾಮಿ ಅವರು ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕೃಷಿ, ಸಾಮಾಜಿಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ, ಕೊಡುಗೆಯನ್ನು ಪರಿಗಣಿಸಿ, ಈ ಪ್ರತಿಷ್ಠಿತ ಪ್ರಶಸ್ತಿ ನೀಡಲಾಗಿದೆ.

ಬೆಂಗಳೂರಿನ ಭಾರತ ಸ್ಕೌಟ್ಸ್ ಗೈಡ್ಸ್ ಕೊಂಡಪ್ಪ ಬಸಪ್ಪ ಸಭಾಂಗಣದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಮಾಜಿ ಲೋಕಾಯುಕ್ತರಾದ ನ್ಯಾ. ಸಂತೋಷ ಹೆಗ್ಡೆ ಅವರು ಸಿದ್ರಾಮಯ್ಯ ಸ್ವಾಮಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ಕೃಷಿ ಮತ್ತು ಕೃಷಿಕರ ಸಮಸ್ಯೆಗಳ ಪರಿಹಾರಕ್ಕಾಗಿ ಬದ್ಧತೆಯಿಂದ ಶ್ರಮಿಸುತ್ತಿರುವ ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘವು ರೈತರ ಸಮಸ್ಯೆಗಳ ಅಧ್ಯಯನಕ್ಕೆ ಹಮ್ಮಿಕೊಂಡಿರುವ ರೈತಯಾತ್ರೆಗೆ ಇದೇ ಸಂದರ್ಭದಲ್ಲಿ ಚಾಲನೆ ನೀಡಲಾಯಿತು.

ಬೀದರ್ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರೂ ಆಗಿರುವ ಸಿದ್ರಾಮಯ್ಯ ಸ್ವಾಮಿ ಅವರ ಸೇವೆಯನ್ನು ಸಮಾರಂಭದಲ್ಲಿ ಕೊಂಡಾಡಲಾಯಿತು.

ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಅಧ್ಯಕ್ಷ ಎಂ. ಪ್ರಕಾಶ ತಿಮ್ಮಲಾಪುರ, ಕಾರ್ಯಾಧ್ಯಕ್ಷ ಎಂ. ಬಸವರಾಜ, ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಆನೆಗುಂದಿ, ಮತ್ತಿತರ ಗಣ್ಯರು, ವಿವಿಧ ಕ್ಷೇತ್ರಗಳ ಸಾಧಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಬೀದರಿಗೆ ನ್ಯಾ. ಸಂತೋಷ ಹೆಗ್ಡೆ

ಬೀದರ್ ಜಿಲ್ಲೆಯ ರೈತರು, ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ನ್ಯಾ. ಸಂತೋಷ ಹೆಗ್ಡೆ ಅವರಿಗೆ ಮಾಹಿತಿ ನೀಡಲಾಗಿದೆ ಎಂದು ಸಿದ್ರಾಮಯ್ಯ ಸ್ವಾಮಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ನ್ಯಾ. ಸಂತೋಷ ಹೆಗ್ಡೆ ಅವರೊಂದಿಗೆ ಬೀದರ್ ಜಿಲ್ಲೆಯ ಕೃಷಿಕರ ಸಮಸ್ಯೆಗಳ ಕುರಿತು ಚರ್ಚಿಸಲಾಗಿದೆ. ವಿಶೇಷವಾಗಿ ಸಹಕಾರಿ ಕ್ಷೇತ್ರದ ಸಕ್ಕರೆ ಕಾರಖಾನೆಗಳ ಸ್ಥಿತಿಗತಿ ಕುರಿತು ಮಾಹಿತಿ ನೀಡಲಾಗಿದೆ. ಜಿಲ್ಲೆಯ ಕೃಷಿಕರ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸಿ ನಡೆಸಲಾಗುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕೋರಿದ್ದು, ನ್ಯಾ. ಸಂತೋಷ ಹೆಗ್ಡೆ ಒಪ್ಪಿಕೊಂಡಿದ್ದಾರೆ ಎಂದು ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರೂ ಆಗಿರುವ ಸಿದ್ರಾಮಯ್ಯ ಸ್ವಾಮಿ ತಿಳಿಸಿದ್ದಾರೆ.

# ಕಲಾ ಗ್ರಾಮ ನಿರ್ಮಾಣಕ್ಕೆ ಶೀಘ್ರದಲ್ಲಿ ಸ್ಥಳ ಅಂತಿಮ:ಡಿಸಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.20: ಬೀದರ ಜಿಲ್ಲೆಯಲ್ಲಿ ಜಿಲ್ಲಾ ಕಲಾ ಗ್ರಾಮವನ್ನು ಸ್ಥಾಪಿಸಲು ಬೀದರ ವಿಶ್ವವಿದ್ಯಾಲಯ ಅಥವಾ ಹಳ್ಳಿಕೇರಿ ಹತ್ತಿರ ಸ್ಥಳವನ್ನು ಪರಿಶೀಲಿಸಿ ಅಂತಿಮ ತೀರ್ಮಾನಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಕಲಾ ಗ್ರಾಮ ಸ್ಥಾಪಿಸಲು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಜಿಲ್ಲೆಯಲ್ಲಿ ಸ್ಥಾಪಿಸಲು ಇಚ್ಛಿಸಿರುವ ಕಲಾ ಗ್ರಾಮದಲ್ಲಿ ಕಲಾ ಗ್ರಾಮವು ಸಂಸ್ಕೃತಿಕ ಪ್ರವಾಸಿ ತಾಣ, ಜಾನಪದ ಕರಕುಶಲ, ಮಾರಾಟ ಮಳಿಗೆ, ಬಯಲುರಂಗಮಂದಿರ, ಆರ್ಟ್ ಗ್ಯಾಲರಿ, ಅಡಟೋರಿಯಮ್, ವಚನಕಾರರ ಮೂರ್ತಿಗಳು, ವಚನ ಸಿಂಚನ, ವಚನ ಸಾಹಿತ್ಯ ಕುರಿತು ನಾಮಫಲಕ ಮತ್ತು ಸಾರಾಂಶ ಕೋಶ, ಶಿಲ್ಪಾವನ, ಡಿಜಿಟಲ್ ಗ್ರಂಥಾಲಯ, ಬೀದರ ಜಿಲ್ಲೆಯ ವಿಶಿಷ್ಟ ಸಂಗೀತ ವಾದ್ಯ ಪರಿಕರಗಳು, ಮೂರ್ತಿ ಪ್ರದರ್ಶನಗಳು, ಜಾನಪದ ಶೈಲಿಯ ವಸ್ತು ಪ್ರದರ್ಶನ, ಸಂಗೀತ ಕಾರಂಜಿ, ಪ್ರಾಚೀನ ಕಾಲದ ನಾಣ್ಯಗಳು, ಕೃಷಿ ಉಪಕರಣಗಳು, ನಾಟಿವೈದ್ಯ ಮುಂತಾದ ವೈಶಿಷ್ಟತೆಗಳನ್ನು ಒಳಗೊಂಡಿರುತ್ತವೆ. ಇದರ ಮುಖ್ಯ ಉದ್ದೇಶ ಜಿಲ್ಲೆಯಲ್ಲಿರುವ ಕಲೆ, ಸಾಹಿತ್ಯ, ನಾಟಕ, ರಂಗಭೂಮಿ ಮತ್ತು ಜಿಲ್ಲೆಯ ವೈಶಿಷ್ಟತೆಯನ್ನು ತಿಳಿಸುವುದಾಗಿದೆ ಹಾಗೂ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೂ ಅನುಕೂಲವಾಗಲಿದೆ ಎಂದರು. ಜಿಲ್ಲಾ ಕಲಾ ಗ್ರಾಮಗಳ ಸಮಿತಿಗೆ ಮೂರು ಜನ ಸಂಪನ್ಮೂಲ ವ್ಯಕ್ತಿಗಳ ನೇಮಕ ಮಾಡಿಕೊಳ್ಳಲಾಗುವುದು. ಆದ್ದರಿಂದ ಆಸಕ್ತರು ಸ್ವವಿವರವನ್ನು (ಖಿಜಣಟಜ) ದಿನಾಂಕ: 23–06–2025 ರ ಸಂಜೆ 5.30 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೀದರಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ವಿಜಯಕುಮಾರ ಸೋನಾರೆ, ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಸಂಜುಕುಮಾರ ಅತಿವಾಳೆ, ಜಗನ್ನಾಥ ಹೆಬ್ಬಾಳೆ, ಮಾರುತಿ ಬೌದ್ದೆ, ಪಾರ್ವತಿ ಸೋನಾರೆ, ಮಹೇಶ ಪಾಟೀಲ, ಭಾರತಿ ವಸ್ತ್ರದ, ಮಹೇಶ ಗೋರನಾಳಕರ, ಅಂಬ್ರೀಶ ಮಲ್ಲೇಶಿ ಸೇರಿದಂತೆ ಜಿಲ್ಲೆಯ ಕಲಾವಿದರು, ಸಾಹಿತಿಗಳು, ಸಂಘ–ಸಂಸ್ಥೆಯ ಮುಖಂಡರುಗಳು ಉಪಸ್ಥಿತರಿದ್ದರು.

# ಮಹಾಲಕ್ಷ್ಮೀ ಜಾತ್ರಾ ಮಹೋತ್ಸವ ಇಂದಿನಿಂದ ಆರಂಭ

ಕಲಬುರಗಿ:ಜೂ.20:ತಾಲೂಕಿನ ಹತಗುಂದಾ ಗ್ರಾಮದಲ್ಲಿ ಪ್ರತಿ 3 ವರ್ಷಕ್ಕೊಮ್ಮೆ ನಡೆಯುವ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರೆ ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿದೆ. ಇಂದು ಸಾಯಂಕಾಲ 9 ಗಂಟೆಗೆ ಗುರುನಾಥ ಸುತಾರ ಮನೆಯಿಂದ ಭವ್ಯ ಮೆರವಣಿಗೆ ಮುಖಾಂತರ ಮಹಾಲಕ್ಷ್ಮೀ ಮಂದಿರಕ್ಕೆ ಬರುವುದು. ಜೂನ 22 ರಂದು ರವಿವಾರ ಗ್ರಾಮಸ್ಥರಿಂದ ಮಂದಿರದಲ್ಲಿ ದೇವಿ ದರ್ಶನ ಮತ್ತು ಪೂಜೆ ಹಾಗೂ ಗೀಗೀ




ಪದಗಳು ಮತ್ತು ವಿವಿಧ ಕಾರ್ಯಕ್ರಮಗಳು ಜರುಗುವವು. 23 ರಂದು ಸೋಮವಾರ ಮದ್ಯಾಹ್ನ 12.30 ನಿಮಿಷಕ್ಕೆ ನಾಡಿನ ಪ್ರಸಿದ್ಧ ಪೈಲ್ವಾನರಿಂದ ಜಂಗಿ ಕುಸ್ತಿ ನಡೆಸಲಾಗುವುದು ಮತ್ತು ಸಾಯಂಕಾಲ 4 ಗಟೆಗೆ ದೇವಿಯ ಮೂರ್ತಿ ಗ್ರಾಮಸ್ಥರ ಸಮ್ಮುಖದಲ್ಲಿ ಮೆರವಣಿಗೆಯ ಮೂಖಾಂತರ ಊರ ಸೀಮೆಯವರೆಗೆ ತಲುಪಿಸಲಾಗುವುದು ಎಂದು ಗ್ರಾಮದ ಮುಖಂಡರಾದ ಬೀರಪ್ಪ ಎಸ್.ನಾಯ್ಕೋಡಿ, ರಾಜಕುಮಾರ ಬಸವರಾಜ ಹಂಗರಗಿ ಅವರು ಪ್ರತಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ನಾಳೆ 312ನೇ ಮಾಸಿಕ ಶರಣ ಸಂಗಮ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ,ಜೂ.20: ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಭಾನುವಾರ ಸಾಯಂಕಾಲ 5.30 ಗಂಟೆಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮತ್ತು ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ 312ನೆಯ ಮಾಸಿಕ ಶರಣ ಸಂಗಮ ಮತ್ತು ಕುರುಬ ಗೊಲ್ಲಾಳೇಶ್ವರ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ನಿಂಗಣ್ಣ ಎಸ್ ಗಚ್ಚಿನಮನಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಡಾ.ಶಿವಲಿಂಗ ಹೇಡೆ ಅನುಭಾವ



ನೀಡಲಿದ್ದಾರೆ. ಶಿವಶರಣಪ್ಪ ಛತ್ರೆ ಅಧ್ಯಕ್ಷತೆ ವಹಿಸುವರು. ಶಿವರಾಜ ಮಲ್ಲೇಶಿ ಬಸವ ಗುರುವಿನ ಪೂಜೆ ನೆರವೇರಿಸುವರು. ಶಾಂತಿ ಪ್ರಶಸ್ತಿ ಪುರಸ್ಕೃತ ಡಾ.ಮನ್ಮಥ ಢೋಳೆ, ಪಿಎಚ್‌ಡಿ ಪುರಸ್ಕೃತ ಶಿವಲಿಂಗ ಹೇಡೆ ಅವರನ್ನು ಶ್ರೀಮಠದ ಪರವಾಗಿ ಸನ್ಮಾನಿಸಲಾಗುವುದು.

ಬಾಲಾಜಿ ಖೇಡಕರ್, ಪಂಡರಿ ಮೇತ್ರೆ, ಸಂಜು ಗುಂಜರಗೆ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ. ಶ್ರೀದೇವಿ ಶರಣಪ್ಪ ಬಿರಾದಾರ್ ಕಾರ್ಯಕ್ರವದ ಭಕ್ತಿ ದಾಸೋಹ ವಹಿಸಿಕೊಳ್ಳಲಿದ್ದಾರೆ.

ಸನ್ಮಾನ:ಕನ್ನಡ ಝೀವಾಹಿನಿಯ ಸರಿಗಮಪ ಸೀಜನ್ 21ರ ವಿಜೇತೆ ಶಿವಾನಿ ಶಿವದಾಸ ಅವರನ್ನು ಸನ್ಮಾನಿಸಲಾಗುತ್ತಿದೆ. ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

# ಇಂದು ಬೀದರಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ

ಬೀದರ, ಜೂ.20 : ಅರಣ್ಯ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಜೂನ್.21 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರತ್ತಾರೆ. ಜೂನ್.21 ರಂದು ಬೆಳಿಗ್ಗೆ 7 ಗಂಟೆಗೆ ಬೀದರ ಕೋಟೆಯಲ್ಲಿ ಹಮ್ಮಿಕೊಂಡಿರುವ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ "ಯೋಗ ಸಂಗಮ" ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಬೆಳಿಗ್ಗೆ 9 ರಿಂದ ರಾತ್ರಿ 7 ಗಂಟೆಯವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ರಾತ್ರಿ 7 ಗಂಟೆಗೆ ಬೀದರದಿಂದ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜೂ.20:ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರು ಜೂನ್ 21 ಮತ್ತು 22 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಸಚಿವರು ಜೂ.21 ರಂದು ಸಂಜೆ 4 ಗಂಟೆಗೆ ರಾಯಚೂರಿನಿಂದ ರಸ್ತೆಯ ಮೂಲಕ ಹೊರಟು, ಸಂಜೆ 6ಕ್ಕೆ ಕೊಪ್ಪಳ ಜಿಲ್ಲೆ ಕಾರಟಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಹಾಗೂ ಕನಕಗಿರಿ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಭೇಟಿ ಮತ್ತು ಕುಂದುಕೊರತೆಗಳ ವಿಚಾರಣೆ ಮಾಡುವರು. ನಂತರ ಅಂದು ಕಾರಟಗಿಯಲ್ಲಿ ವಾಸ್ತವ್ಯ ಮಾಡುವರು.

ಜೂ. 22ರಂದು ಬೆಳಿಗ್ಗೆ 10 ಗಂಟೆಗೆ ಕಾರಟಗಿಯಿಂದ ನಿರ್ಗಮಿಸಿ, 11.30ಕ್ಕೆ ಕುಕನೂರು ತಾಲ್ಲೂಕಿನ ಶಿರೂರ ಗ್ರಾಮಕ್ಕೆ ಆಗಮಿಸಿ, ದಿವಂಗತ ಕೆ.ಹೆಚ್.ಪಾಟೀಲ್ ರವರ ಮೂರ್ತಿ ಅನಾವರಣ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಅವರ ಜೊತೆಯಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 2.30ಕ್ಕೆ ಅಲ್ಲಿಂದ ನಿರ್ಗಮಿಸಿ, ಸಂಜೆ 4 ಗಂಟೆಗೆ ಕಾರಟಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಹಾಗೂ ಕನಕಗಿರಿ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಭೇಟಿ ಮತ್ತು ಕುಂದುಕೊರತೆಗಳ ವಿಚಾರಣೆ ನಡೆಸಿ ಕಾರಟಗಿಯಲ್ಲಿ ವಾಸ್ತವ್ಯ ಮಾಡುವರು.

ಜೂ.23ಕ್ಕೆ ಬೆಳಿಗ್ಗೆ 9 ಗಂಟೆಗೆ ಕಾರಟಗಿಯಿಂದ ರಾಯಚೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಗಣಿತ ಪುಸ್ತಕದ ಸದುಪಯೋಗ ಪಡೆದುಕೊಳ್ಳಿ: ಡಾ. ಮಲ್ಲಿಕಾರ್ಜುನ ಹಂಗರಗಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 20 : ಕರ್ನಾಟಕ ರಾಜ್ಯ ಸರ್ಕಾರದ ಹೊಸ ಶಿಕ್ಷಣ ನೀತಿಯಂತೆ ರಚಿಸಲಾದ ಬಿ.ಎಸ್‌ಸಿ ಪದವಿಯ ಎರಡನೇ ಸೆಮಿಸ್ಟರ್ ಗಣಿತ ಪಠ್ಯಪುಸ್ತಕವನ್ನು ವಿದ್ಯಾರ್ಥಿಗಳು ತಪ್ಪದೇ ಸದುಪಯೋಗ ಪಡೆದುಕೊಳ್ಳಬೇಕೆಂದು ಕರ್ನಾಟಕ ಕಾಲೇಜಿನ ಪ್ರಾಚಾರ್ಯರಾದ ಡಾ.ಮಲ್ಲಿಕಾರ್ಜುನ ಹಂಗರಗಿ ತಿಳಿಸಿದರು.

ನಗರದ ಕರ್ನಾಟಕ ಕಲಾ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬಿಡುಗಡೆಗೊಳಿಸಿ ಮಾತನಾಡಿದ ಅವರು ಈ ಪಠ್ಯಪುಸ್ತಕವು ಬೀದರ ಮತ್ತು ಗುಲಬರ್ಗಾ ವಿಶ್ವವಿದ್ಯಾಲಯಗಳಿಗೆ ಸಂಯೋಜಿತವಾಗಿರುವ ವಿವಿಧ ಪದವಿ ಕಾಲೇಜುಗಳಿಗೆ ಮೀಸಲಾಗಿದೆ. ಬಿ.ಎಸ್‌ಸಿ ಪದವಿಯ ಸಾಮಾನ್ಯ ಗಣಿತದ ಪಠ್ಯಪುಸ್ತಕವನ್ನು ಮಕ್ಕಳು ಸದುಪಯೋಗ ಮಾಡಿಕೊಳ್ಳಬೇಕು. ಬಹಳ ಪರಿಶ್ರಮದಿಂದ ಡಾ. ಸಿದ್ದನಗೌಡ ಪಾಟೀಲ ಕಲಬುರಗಿ, ಡಾ. ಜಗದೀಶ ತವಡೆ ಭಾಲ್ಕಿ, ಡಾ. ಪದ್ಮಿನಿ ಕಾಜಿ ಬೀದರ ಅವರು ಸಹಲೇಖಕರಾಗಿ ರಚನೆ ಮಾಡಿದ್ದಾರೆ. ಈ ಪಠ್ಯಪುಸ್ತಕವು ಸರಳವಾಗಿ ವಿದ್ಯಾರ್ಥಿಗಳಿಗೆ ಅರ್ಥವಾಗುವಂತಿದೆ. ಮಕ್ಕಳಿಗೆ ಆಳವಾದ ಜ್ಞಾನವನ್ನು ನೀಡಲಿದ್ದು, ಶೈಕ್ಷಣಿಕ ಗುಣಮಟ್ಟ ಮತ್ತಷ್ಟು ಹೆಚ್ಚಿಸುವಲ್ಲಿ ಈ ಪಠ್ಯಪುಸ್ತಕ ಸಹಕಾರ ನೀಡಲಿದೆ ಎಂದರು.

ಪಠ್ಯಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಪ್ರೊ. ಧನರಾಜ ಬಿರಾದಾರ, ಡಾ. ಹೇಮಾವತಿ ಪಾಟೀಲ, ಡಾ. ಚನ್ನಕೇಶವ ಮೂರ್ತಿ, ಡಾ. ಪದ್ಮಿನಿ ಕಾಜಿ, ಡಾ. ಸಿದ್ದನಗೌಡ ಪಾಟೀಲ ಕಲಬುರಗಿ, ಡಾ. ಜಗದೀಶ ತವಡೆ ಭಾಲ್ಕಿ ಸೇರಿದಂತೆ ವಿವಿಧ ಸರಕಾರಿ ಪ್ರಥಮ ದರ್ಜೆಯ ಕಾಲೇಜುಗಳ ಪ್ರಾಂಶುಪಾಲರು, ಗಣಿತ ವಿಭಾಗದ ಮುಖ್ಯಸ್ಥರು, ಉಪಸ್ಥಿತರಿದ್ದರು.

# ಜೂ.22ರ ವರೆಗೆ ಸಮೀಕ್ಷೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.20:2025–26ನೆಯ ಸಾಲಿನ ಪರಿಶಿಷ್ಟ ಜಾತಿ ಒಳಮಿಸಲಾತಿಯ ಸಮಗ್ರ ಸಮೀಕ್ಷೆಯನ್ನು ಜೂ.22ರ ವರೆಗೆ ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಇಲಾಖೆಯ ಸಹಾಯ ನಿರ್ದೇಶಕ ಸತೀಶಕುಮಾರ ಸಂಗನ್ ತಿಳಿಸಿದ್ದಾರೆ. ಕರ್ನಾಟಕ ಒನ್, ಬೆಂಗಳೂರು



ಒನ್ ಮತ್ತು ಗ್ರಾಮ ಒನ್ ಕೇಂದ್ರಗಳು, ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಸಹ ಸಮೀಕ್ಷೆಗೆ ಅವಕಾಶವನ್ನು ಕಲ್ಪಿಸಲಾಗಿದೆ. ಆನ್‌ಲೈನ್ ಮೂಲಕ https:/Schedulecastesurvey.Karnatka.gov,in/self declaration

ಈ ಲಿಂಕ್ ಮೂಲಕ ಸ್ವಯಂ ಘೋಷಣೆ ಕೂಡ ಮಾಡಿಕೊಳ್ಳಲು ಅವಕಾಶವಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚಗವ್ಯ ತಪಾಸಣಾ ಶಿಬಿರ ಇಂದು

ಬೀದರ. ಜೂ. 20 : ಉತ್ತರ ಕರ್ನಾಟಕ ಪ್ರಾಂತ ಗೋ ಸೇವಾ ಗತಿ ವಿಧಿ, ನಾಗೋರಾದ ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಚಾರಿಟಬಲ್ ಟ್ರಸ್ಟ್ ಸಂಚಾಲಿತ ಕಾಮಧೇನು ಗೋಶಾಲೆ ಹಾಗೂ ಶ್ರೀ ಸಿದ್ಧರಾಮೇಶ್ವರ ಆಯುರ್ವೇದಿಕ್ ವೈದ್ಯಕೀಯ ಕಾಲೇಜು ಸಹಯೋಗದಲ್ಲಿ ಇಲ್ಲಿಯ ಗಣೇಶ ಮೈದಾನ ಬಳಿಯ ಶ್ರೀ ಸಿದ್ಧರಾಮೇಶ್ವರ ಆಯುರ್ವೇದಿಕ್ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಶನಿವಾರ (ಜೂ.21) ಪಂಚಗವ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ರ ವರೆಗೆ ನಡೆಯಲಿದೆ. ಡಾ. ಡಿ.ಪಿ. ರಮೇಶ್ ಅವರು ರಕ್ತದೊತ್ತಡ, ಮಧುಮೇಹ, ಸೋರಿಯಾಸಿಸ್, ಕ್ಯಾನ್ಸರ್ ಮೊದಲಾದ ರೋಗಗಳ ತಪಾಸಣೆ ಮಾಡಲಿದ್ದಾರೆ.

ಆಸಕ್ತರು ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಶಿವಕುಮಾರ ಹಿರೇಮಠ (ಮೊ: 7411993300) ಅಥವಾ ಸಿ.ಬಿ. ರೆಡ್ಡಿ (9449829468) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ತಂಬಾಕು ಉತ್ಪನ್ನ ಮಾರಾಟ ವ್ಯಾಪಾರಿ

### ಕಡ್ಡಾಯವಾಗಿ ಪರವಾನಿಗೆ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 20–ದಗಿರಿ ನಗರಸಭೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ಕಡ್ಡಾಯವಾಗಿ ಪ್ರತ್ಯೇಕವಾಗಿ ಪರವಾನಿಗೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆಎಂದುಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ತಿಳಿಸಿದ್ದಾರೆ.

ಯಾದಗಿರಿನಗರಸಭೆವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ಪ್ರತ್ಯೇಕ ಪರವಾನಿಗೆ ಪಡೆಯುವುದು ಕಡ್ಡಾಯವಾಗಿ ಪ್ರತ್ಯೇಕ ಪರವಾನಿಗೆ ಪಡೆಯಲು ಅರ್ಜಿ ಆಹ್ವಾನಿಸಿದೆ,ಹಿನ್ನೆಲೆಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ವ್ಯಾಪಾರಿಗಳು ನಿಗದಿತ ಅರ್ಜಿ ನಮೂನೆ ಯಾದಗಿರಿ ನಗರಸಭೆ ಕಛೇರಿಯಿಂದ ಪಡೆದು ಭರ್ತಿಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಆಧಾರ್ ಕಾರ್ಡ್, ಬಾಡಿಗೆ ಕರಾರು ಪತ್ರ, ಉದ್ದಿಮೆ ಪರವಾನಿಗೆ ಹಾಗೂ ಪೋಟೋವನ್ನು ಲಗತ್ತಿಸಿ ಅರ್ಜಿಸಲ್ಲಿಸಬೇಕು. ಅರ್ಜಿ ಶುಲ್ಕ 500 ರೂ.ಗಳ ಇದ್ದು, ಒಂದು ವರ್ಷ ಚಾಲ್ತಿಯಲ್ಲಿರುತ್ತದೆ 2025ರ ಜೂನ್ 30ರ ಒಳಗೆ ಅರ್ಜಿಸಲ್ಲಿಸಬೇಕು,ನಂತರ ಪತ್ಯೇಕ ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳ ಮಾರಾಟ ಮಾಡುವ ವ್ಯಾಪಾರಸ್ಥರ ವಿರುದ್ಧ ಕಾನೂನಿನನ್ವಯಕ್ರಮಕೈಗೊಳ್ಳಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.21 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಬಳ್ಳಾರಿನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾರ್ಯಕೈಗೊಳ್ಳುತ್ತಿರುವುದರಿಂದ ಜೂ.21 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05.30 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ನಗರ ಉಪವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ಎಫ್–09 ಫೀಡರ್ ಮಾರ್ಗದ ನೆಹರು ಕಾಲೋನಿ, ಎಸ್.ಎನ್.ಪೇಟೆ 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಎಸ್.ಎನ್.ಪೇಟೆ 4ನೇ, 5ನೇ ಮತ್ತು 6ನೇ, ಡಿಅರ್ ಗ್ರೌಂಡ್, ಕೂಲ್ ಕಾರ್ನರ್, ಡಬಲ್ ರಸ್ತೆ, ಕೋಲಾಂಚಾಲಂ ಕಾಂಪೌಂಡ್, ರಾಯಲ್ ಸರ್ಕಲ್, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ತಾಲ್ಲೂಕ್ ಅಫೀಸ್, ಡಿಸಿ ಅಫೀಸ್, ಸ್ಟೇಷನ್ ರೋಡ್ ಮುಂತಾದ ಪ್ರದೇಶಗಳು.

ಎಫ್–07 ಫೀಡರ್ ಮಾರ್ಗದ ಎಸ್.ಎನ್.ಪೇಟ್ 3ನೇ ಕ್ರಾಸ್, ಜಿಲ್ಲಾ ಆಸ್ಪತ್ರೆ, ರಾಘವ ಕಲಾಮಂದಿರ, ಅನಂತಪುರ ರಸ್ತೆ, ವಡ್ಡರ ಬಂಡೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿ ರಸ್ತೆ, ಮುಬರಕ್ ಟಾಕೀಸ್, ಬಾಲಾಜಿರಾವ್ ರಸ್ತೆ, ಕೆ.ಸಿ.ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಅಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮ ಕಟ್ಟೆ ಸೇರಿದಂತೆ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಸ್ಯವೂ ಸಜೀವವೇ? – ಸಸ್ಯಶಾಸ್ತ್ರ ಉಪನ್ಯಾಸಕರ ದೃಷ್ಟಿಯಲ್ಲಿ ವಿಶ್ವಗುರು ಬಸವಣ್ಣನವರ ವಚನದ ವೈಜ್ಞಾನಿಕ ಸ್ಪಷ್ಟತೆ

ರೋಹಿತ್ ವಿಜಯ್ ಜಿರೋಬೆ
ಸಸ್ಯಶಾಸ್ತ್ರ ಉಪನ್ಯಾಸಕ – ಬೀದರ್

ಪರಿಚಯ: ಸಸ್ಯಗಳ ಜೀವಿತತ್ವದ ಮಹತ್ವ

ಇಂದಿನ ಜಗತ್ತಿನಲ್ಲಿ ಪರಿಸರ ಸಂರಕ್ಷಣೆಯ ಮಹತ್ವ ಹೆಚ್ಚಾಗುತ್ತಿದ್ದು, ಮರ ಕಡಿತ, ಗಿಡಗಳ ನಾಶ ಇವುಗಳ ವಿರುದ್ಧ ಜಾಗೃತಿ ಮೂಡುತ್ತಿದೆ. ಆದರೆ, ಕೆಲವು ಜನರು ಇನ್ನೂ "ಸಸ್ಯಗಳಿಗೆ ಜೀವವಿಲ್ಲ" ಎಂಬ ಭ್ರಮೆಯಲ್ಲಿದ್ದಾರೆ. ಈ ಮಿತಿಚಿಂತನೆ ಪರಿಸರ ಹಾನಿಗೆ ಕಾರಣವಾಗಿದೆ. ಆದರೆ, ಈ ಭ್ರಮೆಯನ್ನು ಸಾವಿರಾರು ವರ್ಷಗಳ ಹಿಂದೆ (12ನೇ ಶತಮಾನದಲ್ಲಿ) ನಮ್ಮ ಶ್ರೇಷ್ಠ ತತ್ವಜ್ಞರು, ವಿಶ್ವಗುರು ಬಸವಣ್ಣನವರು ತಮ್ಮ ವಚನಗಳಲ್ಲಿ ಸ್ಪಷ್ಟವಾಗಿ ತಿರಸ್ಕರಿಸಿದ್ದಾರೆ.

ವಚನದಲ್ಲಿ ಸಸ್ಯಗಳ ಜೀವಿತತ್ವ –ತತ್ವ ಮತ್ತು ವೈಜ್ಞಾನಿಕ ದೃಷ್ಟಿಕೋಣ

ವಿಶ್ವಗುರು ಬಸವಣ್ಣನವರು ತಮ್ಮ ವಚನದಲ್ಲಿ ಹೇಳುತ್ತಾರೆ:

"ಮರ ಗಿಡ ಬಳ್ಳಿ ಧಾನ್ಯಂಗಳ ಬೆಳಸೆಲ್ಲವ ತರಿತರಿದು
ಪ್ರಾಣವ ಕೊಂದುಂಡು,
ಶರೀರವ ಹೊರೆವ ದೋಷಕ್ಕೆ
ಇನ್ನಾವುದು ವಿಧಿಯಯ್ಯಾ
ಒಂದಿಂದ್ರಿಯ ಮೊದಲಾಗಿ
ಐದಿಂದ್ರಿಯ ಕಡೆಯಾದ
ಜೀವಜಾಲದಲ್ಲಿದೆ ಚರಾಚರವೆಲ್ಲ."

ಇಲ್ಲಿ "ಒಂದಿಂದ್ರಿಯ" ಎಂದರೆ ಸಸ್ಯಗಳು, "ಐದಿಂದ್ರಿಯ" ಎಂದರೆ ಮಾನವರು. ಅಂದರೆ, ಸಸ್ಯಗಳು ಜೀವಿಗಳೇ, ಅವುಗಳಲ್ಲೂ ಪ್ರಾಣವಿದೆ. ಈ ವಚನವು ಸಸ್ಯಗಳ ಜೀವಿತತ್ವದ ತತ್ವವನ್ನು ಸ್ಪಷ್ಟಪಡಿಸುತ್ತದೆ.

ಸಸ್ಯಗಳ ಜೀವಿತತ್ವದ ವೈಜ್ಞಾನಿಕ ದೃಷ್ಟಾಂತಗಳು

ನಾನು ಸಸ್ಯಶಾಸ್ತ್ರ ಉಪನ್ಯಾಸಕನಾಗಿ ವಿದ್ಯಾರ್ಥಿಗಳಿಗೆ ಸಸ್ಯಗಳ ಆಂತರಿಕ ಕ್ರಿಯೆಗಳು, ಹಾರ್ಮೋನ್ಗಳ ಚಲನೆ, ಮತ್ತು ಸಸ್ಯಗಳ ಪ್ರತಿಕ್ರಿಯೆಗಳ ಬಗ್ಗೆ ಬೋಧಿಸುತ್ತೇನೆ. 20ನೇ ಶತಮಾನದಲ್ಲಿ ಸರ್ ಜಗದೀಶ್ ಚಂದ್ರಬೋಸ್ ಅವರು "Crescograph" ಉಪಕರಣದಿಂದ ಸಸ್ಯಗಳ ಸ್ಪಂದನೆಗಳನ್ನು ವಿಜ್ಞಾನವಾಗಿ ದಾಖಲಿಸಿದರು. ಅವರ ಪ್ರಯೋಗಗಳು ಸಸ್ಯಗಳಲ್ಲೂ ಜೀವಚೇತನವಿದೆ ಎಂಬುದನ್ನು ದೃಢಪಡಿಸಿದವು.



ಬೋಸನವರು: "Plants react to stimuli."

ಬಸವಣ್ಣನವರು: "ಮರ ಗಿಡು ಬಳ್ಳಿಗಳಲ್ಲೂ ಪ್ರಾಣವಿದೆ."

ಇದು ತತ್ವ ಮತ್ತು ವಿಜ್ಞಾನದ ಅದ್ಭುತ ಸಮನ್ವಯ.

ಇತ್ತೀಚಿನ ಸಂಶೋಧನೆಗಳು ಮತ್ತು ಸಸ್ಯಗಳ ಸಂವೇದನೆ

ಇತ್ತೀಚಿನ ವಿಜ್ಞಾನ ಸಂಶೋಧನೆಗಳು ಸಸ್ಯಗಳ ಸಂವೇದನೆ ಮತ್ತು ಸಂವಹನದ ಬಗ್ಗೆ ಹೆಚ್ಚಿನ ಬೆಳಕು ಚೆಲ್ಲಿವೆ. ಸಸ್ಯಗಳು ಕೇವಲ ಸ್ಥಿರ ಜೀವಿಗಳು ಅಲ್ಲ, ಅವು ಸುತ್ತಲೂ ಇರುವ ಪರಿಸರದ ಬದಲಾವಣೆಗಳಿಗೆ ಸ್ಪಂದಿಸುತ್ತವೆ, ತಮ್ಮ ಹಿತಾಸಕ್ತಿಗಳನ್ನು ರಕ್ಷಿಸಲು ರಾಸಾಯನಿಕ ಸಂಕೇತಗಳನ್ನು ಬಿಡುಗಡೆಮಾಡುತ್ತವೆ. ಉದಾಹರಣೆಗೆ, ಕೆಲವು ಗಿಡಗಳು ಹಾನಿಕಾರಕ ಕೀಟಗಳ ಹಾನಿಯನ್ನು ತಡೆಯಲು ಹತ್ತಿರದ ಸಸ್ಯಗಳಿಗೆ ಎಚ್ಚರಿಕೆ ನೀಡುತ್ತವೆ. ಈ ರೀತಿಯ ಸಂವೇದನೆ ಸಸ್ಯಗಳಲ್ಲಿಯೂ ಜೀವರಾಶಿಯಂತಹ ಜಟಿಲ ವ್ಯವಸ್ಥೆಗಳಿರುವುದನ್ನು ತೋರಿಸುತ್ತದೆ.

ಪರಿಸರ ಸಂರಕ್ಷಣೆಯಲ್ಲಿ ಸಸ್ಯಗಳ ಮಹತ್ವ

ಸಸ್ಯಗಳು ನಮ್ಮ ಪರಿಸರದ ಮೂಲಭೂತ ಅಂಶಗಳಾಗಿವೆ. ಅವು ಹವಾಮಾನ ನಿಯಂತ್ರಣ, ಮಣ್ಣಿನ ರಕ್ಷಣೆ, ಜಲಚಕ್ರ ನಿರ್ವಹಣೆ, ಮತ್ತು ಜೈವವೈವಿಧ್ಯತೆಯ ಸ್ಥಾಪನೆಗೆ ಪ್ರಮುಖ ಪಾತ್ರ ವಹಿಸುತ್ತವೆ. ಮರಗಳನ್ನು ಕತ್ತರಿಸುವುದು, ಗಿಡಗಳನ್ನು ನಾಶಮಾಡುವುದು, ನೇರವಾಗಿ ಈ ಸಮತೋಲನವನ್ನು ಹಾಳುಮಾಡುತ್ತದೆ. ಆದ್ದರಿಂದ, ಸಸ್ಯಗಳ ಜೀವಿತತ್ವವನ್ನು ಅರಿತು, ಅವುಗಳ ಸಂರಕ್ಷಣೆಗೆ ನಾವು ಜಾಗೃತಿ ಹೊಂದಬೇಕು. ಇದು ನಮ್ಮ ಮುಂದಿನ ತಲೆಮಾರಿಗೆ ಆರೋಗ್ಯಕರ ಪರಿಸರವನ್ನು ಒದಗಿಸುವುದಕ್ಕೆ ಅವಶ್ಯಕ.

ಬಸವಣ್ಣನವರ ತತ್ವ ಮತ್ತು ಇಂದಿನ ಪರಿಸರ ನೀತಿ

ವಿಶ್ವಗುರು ಬಸವಣ್ಣನವರ ತತ್ವಗಳು ನಾವೀಗ ecologicalethics ಎಂದು ಕರೆಯುವ ಪರಿಸರ ನೀತಿಯ ಮೂಲಾಧಾರಗಳಾಗಿವೆ. "ಜೀವಜಾಲದಲ್ಲಿದೆ ಚರಾಚರವೆಲ್ಲ" ಎಂಬ ವಚನವು ಪ್ರಕೃತಿಯ ಪ್ರತಿಯೊಂದು ಜೀವಿಯಲ್ಲೂ ಆತ್ಮವಿದೆ ಎಂಬ ನಂಬಿಕೆಯನ್ನು ಪ್ರತಿಪಾದಿಸುತ್ತದೆ. ಈ ತತ್ವವು ಮಾನವನಿಗೆ ಪ್ರಕೃತಿಯೊಂದಿಗೆ ಸಹಜ ಸಮನ್ವಯದಲ್ಲಿ ಬದುಕಬೇಕೆಂದು ಸೂಚಿಸುತ್ತದೆ. ಇಂದಿನ ತಲೆಮಾರಿಗೆ ಈ ಸಂದೇಶ ಅತ್ಯಂತ ಪ್ರಸ್ತುತವಾಗಿದೆ.

ಸಮಾಜದಲ್ಲಿ ಸಸ್ಯಗಳ ಜೀವಿತತ್ವ ಅರಿವು ಹೆಚ್ಚಿಸುವುದು

ನಮ್ಮ ಸಮಾಜದಲ್ಲಿ ಸಸ್ಯಗಳ ಜೀವಿತತ್ವದ ಅರಿವು ಹೆಚ್ಚಿಸುವುದು ಬಹುಮುಖ್ಯ. ಶಾಲಾ ಶಿಕ್ಷಣದಿಂದ ಹಿಡಿದು ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳವರೆಗೆ, ಸಸ್ಯಗಳ ಪ್ರಾಣತತ್ವ ಮತ್ತು ಪರಿಸರ ಸಂರಕ್ಷಣೆಯ ಮಹತ್ವವನ್ನು ವಿವರಿಸುವುದು ಅಗತ್ಯ. ಇದರಿಂದ ಜನರು ಮರಗಳನ್ನು ಕತ್ತರಿಸುವುದನ್ನು ತಡೆದು, ಗಿಡಗಳನ್ನು ನೆಡುವಲ್ಲಿ ಉತ್ಸಾಹ ತೋರಿಸುತ್ತಾರೆ. ಪರಿಸರದೊಂದಿಗೆ ಹೃದಯಪೂರ್ವಕ ಸಂಬಂಧ ಬೆಳೆಸುವುದು ನಮ್ಮ ಭವಿಷ್ಯದ ಭದ್ರತೆಗೆ ನೆರವಾಗುತ್ತದೆ. ನವೀನ ತಂತ್ರಜ್ಞಾನ ಮತ್ತು ಸಸ್ಯ ಸಂಶೋಧನೆ

ಇತ್ತೀಚಿನ ತಂತ್ರಜ್ಞಾನಗಳು ಸಸ್ಯಗಳ ಅಧ್ಯಯನದಲ್ಲಿ ಹೊಸ ಆಯಾಮಗಳನ್ನು ತೆರೆದಿವೆ. ಜೆನೆಟಿಕ್ ಇಂಜಿನಿಯರಿಂಗ್, ಬಯೋಇನ್ಫರ್ಮ್ಯಾಟಿಕ್ಸ್, ಮತ್ತು ಸಸ್ಯ ಸಂವೇದನೆಗಳ ಡಿಜಿಟಲ್ ವಿಶ್ಲೇಷಣೆಗಳು ಸಸ್ಯಗಳ ಜೀವಚೇತನವನ್ನು ಇನ್ನಷ್ಟು ವಿವರವಾಗಿ ತಿಳಿಯಲು ಸಹಾಯಮಾಡುತ್ತಿವೆ. ಇವುಗಳಿಂದ ಸಸ್ಯಗಳ ಆರೋಗ್ಯ, ಬೆಳವಣಿಗೆ, ಮತ್ತು ಪರಿಸರ ಪ್ರತಿಕ್ರಿಯೆಗಳ ಬಗ್ಗೆ ನವೀನ ಪರಿಹಾರಗಳು ಕಂಡುಬರುತ್ತಿವೆ.

ಈ ಲೇಖನ ನನ್ನ ಅನುಭವ ಮತ್ತು ಅಧ್ಯಯನಗಳ ಪಾಕವಟಿಸಿ. ಸಸ್ಯಶಾಸ್ತ್ರದ ವೈಜ್ಞಾನಿಕ ಜ್ಞಾನ ಮತ್ತು ವಿಶ್ವಗುರು ಬಸವಣ್ಣನವರ ತತ್ವಗಳ ಸಂಯೋಜನೆಯೇ ಈ ಲೇಖನದ ಸಾರವಾಗಿದೆ. ಸಸ್ಯಗಳಲ್ಲಿಯೂ ಜೀವವಿದೆ ಎಂಬ ಅರ್ಥವನ್ನು ನಾವು ಮನಗಂಡಾಗ, ನಾವು ಪ್ರಕೃತಿಯೊಂದಿಗೆ ಸಮಾನತೆ, ಸಹಜತೆ, ಮತ್ತು ಆತ್ಮೀಯತೆಯನ್ನು ಅನುಭವಿಸುವುದಕ್ಕೆ ಸಾಧ್ಯ.

ವಂದನೆಗಳೊಂದಿಗೆ,



**ವಂದನೆಗಳೊಂದಿಗೆ,
ರೋಹಿತ್ ವಿಜಯ್ ಜಿರೋಬೆ.
ಸಸ್ಯಶಾಸ್ತ್ರ ಉಪನ್ಯಾಸಕ – ಬೀದರ್**

## ಜೂ.23 ರಂದು ವಾಕ್ ಇನ್ ಇಂಟರ್‌ವ್ಯೂವ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಪ್ಪಳದಲ್ಲಿ ಜೂನ್ 23 ರಂದು ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಆಯೋಜಿಸಲಾಗಿದ್ದು, ಖಾಸಗಿ ಸಂಸ್ಥೆಗಳು ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ ಅಭ್ಯರ್ಥಿಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. 18 ರಿಂದ 30 ವರ್ಷದೊಳಗಿನ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು ಮತ್ತು ಆಧಾರ್ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 20–2025ರ ಜೂನ್ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಯಾದಗಿರಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಸಾರವರ್ಧಿತ (ಈಂಡಿಣುಜಿಜಜ) ಅಕ್ಕಿ ಮತ್ತು 14 ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 3 ಕೆ.ಜಿ ಸಾರವರ್ಧಿತ (ಈಂಡಿಣುಜಿಜಜ) ಅಕ್ಕಿ ಮತ್ತು 2 ಕೆ.ಜಿ ಜೋಳ ಮತ್ತು ರಾಜ್ಯ ವ್ಯಾಪ್ತಿಯ ಪಡಿತರ ಚೀಟಿದಾರರಿಗೆ 5 ಕೆ.ಜಿ ಸಾರವರ್ಧಿತ (Fortified) ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುತ್ತಿದೆ ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಅನೀಲಕುಮಾರ ಡವಳಗಿ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 5 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ, ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂ.ಸಂ.1967 ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬೇಕು, ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿ ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## “ಯೋಗ ಆಂತರಿಕ ಶಕ್ತಿಯ ವಿಜ್ಞಾನ”

ಸ್ವಸ್ತ ಮನಸ್ಸಿನಿಂದ ಸಮಗ್ರ ಆರೋಗ್ಯ, ಆರೋಗ್ಯಯುತ ಜೀವನದಿಂದ ಸ್ವಾಸ್ಥ ಸಮಾಜದ ನಿರ್ಮಾಣ, ಯೋಗ ಸ್ವಸ್ಥ ಮನಸ್ಸಿಗೆ ದಾರಿ, ಸಮಗ್ರ ಆರೋಗ್ಯಕ್ಕೆ ನಾಂದಿ. ಯೋಗ ಮಾನವೀಯತೆಗೆ ಭರತ ಖಂಡದ ವರ, ಯೋಗ ಮನಸ್ಸಿನ ಮೌನ ಶರೀರದ ಚಲನೆ, ಯೋಗದಿಂದ ದೃಢ ಜೀವನದ ನೆಲೆ. ಜೂನ್ 21 ರಂದು ಕೋಟ್ಯಾಂತರ ಜನರು ತಮ್ಮ ಯೋಗದ ಮ್ಯಾಟ್ ಗಳನ್ನು ತೆರೆದುಕೊಳ್ಳುತ್ತಾರೆ, ಆದರೆ ಇದು ಕೇವಲ ಅಂದಿನ ದಿನದ ವ್ಯಾಯಾಮಕಷ್ಟೇ ಸೀಮಿತವಾಗದೆ, ನಮ್ಮ ನಿರಂತರ ಯೋಗದ ಜೀವನ ಶೈಲಿಯ ನೆನಪಿಸುವ ದಿನವಾಗಬೇಕು. ಯೋಗ ಅಂತರಾಷ್ಟ್ರೀಯ ದಿನದ ಕೇವಲ ಉತ್ಸವವಲ್ಲ. ಡಿಜಿಟಲ್ ಗದ್ದಲದ ಮತ್ತು ಭೌತಿಕ ಹಂಬಲದ ಇಂದಿನ ಈ ಆಧುನಿಕ ಯುಗದಲ್ಲಿ ಆರೋಗ್ಯವು ಕಡೆಗಾಣಿಸಲ್ಪಟ್ಟಿದೆ ಕಾರಣ ಮನಸ್ಸಿನ ಚಂಚಲತೆ, ಆಧುನಿಕತೆಯ ಸೌಲಭ್ಯದಿಂದ ದೈಹಿಕ ಶ್ರಮದ ಕೊರತೆ ಕ್ರಮಬದ್ಧವಾದ ಜೀವನ ನಡೆಸಲು ವಿಫಲರಾಗಿದ್ದೇವೆ.


ನಮ್ಮ ಹಿರಿಯರ ಜೀವನಶೈಲಿಯನ್ನು ಒಂದು ಕ್ಷಣ ನೆನಪಿಸಿಕೊಂಡಾಗ ಅವರು ಬೆಳಿಗ್ಗೆ ಯಿಂದ ರಾತ್ರಿ ಮಲಗುವ ಸಮಯದವರೆಗೂ ಸಂಪೂರ್ಣ ಯೋಗಮಯ ಜೀವನ ಅವರದಾಗಿತ್ತು ಭೌತಿಕ ಶ್ರಮ, ಸ್ವಸ್ಥ ಮನಸ್ಸು, ದೀರ್ಘ ಉಸಿರಾಟ, ಉಪಕಾರ, ನಿಸ್ವಾರ್ಥ ಜೀವನ, ಅತೀ ಆಸೆ ಇಲ್ಲದ ಬದುಕು ಸ್ವಂತಕ್ಕಾಗಿ ಸ್ವಲ್ಪ ಸಮಾಜಕ್ಕಾಗಿ ಸರ್ವಸ್ವ ಸಹಬಾಳ್ವೆ, ಸಾರ್ಥಕ ಜೀವನ ನಡೆಸಲು ಸರ್ವ ಸಿದ್ಧತೆ ಈ ಜೀವನದ ಕ್ರಮದಿಂದ ಸ್ವಸ್ಥ ಮನಸ್ಸು, ಆರೋಗ್ಯ ಪಡೆದು ಸಮಾಜಕ್ಕೆ ತಮ್ಮ ಸೇವೆಯನ್ನು ನೀಡಿ ಸಾರ್ಥಕ ಜೀವನ ನಡೆಸಿದ ಮಹಾನ್ ಯೋಗಿಗಳಾಗಿದ್ದರು. ನಮ್ಮದು ಹಿಂದಿನ ಜೀವನದ ಶೈಲಿಗೆ ತದ್ವಿರುದ್ಧವಾಗಿ ಆಧುನಿಕತೆಯ ಬರದಲ್ಲಿ ಸಮಯದ ಕೊರತೆ ಎನ್ನುವ ನೆಪದಲ್ಲಿ ಉಸಿರಾಟದ ಕಡೆ ಗಮನವೇ ಇಲ್ಲ, ಭೌತಿಕ ಶ್ರಮ ಇಲ್ಲದ ಕೆಲಸ, ಮೆದುಳಿಗೆ ಕೊಡುವ ಶ್ರಮ ಹೆಚ್ಚಾಗಿದೆ ಮನುಷ್ಯ ದುಡಿಯುವುದು ಹೊಟ್ಟೆಗಾಗಿ ಗೇಣು ಬಟ್ಟೆಗಾಗಿ ಎನ್ನುವುದು ಮರೆತು ಮುಂದಿನ ಪೀಳಿಗೆಗಾಗಿ ಸಂಪತ್ತು ಕೂಡಿಸುವ ಬರದಲ್ಲಿ ಊಟ ನೀರು ನಿದ್ದೆ ಎಲ್ಲವನ್ನು ಮರೆತಿದ್ದಾನೆ. ಅದರ ಪರಿಣಾಮ ಪ್ರತಿ ಹಂತದಲ್ಲೂ ಅನಾರೋಗ್ಯ ಇದೆಲ್ಲದಕ್ಕೂ ನಾವು ಸಾಕ್ಷಿಯಾಗಿದ್ದೇವೆ. ಇದು ಎಲ್ಲರಿಗೂ ತಿಳಿದಿರುವ ವಿಷಯವೇ,

ಆದುನಿಕ ಜೀವನ ಶೈಲಿಗೆ ಯೋಗ ಅತಿ ಅವಶ್ಯಕ. ಅಂತರಾಷ್ಟ್ರೀಯ ಯೋಗದಿನದಂದು ನಮ್ಮ ಜೀವನ ಶೈಲಿಯನ್ನು ಬದಲಿಸುವ ನಿಟ್ಟಿನಲ್ಲಿ ನಾವು ಯೋಗವನ್ನು ಅಳವಡಿಸಿಕೊಳ್ಳಲು ಸಿದ್ದರಾಗೋಣ ಎನ್ನುವ ಮುನ್ನುಡಿಯಿಂದ ಯೋಗದ ಮಹತ್ವವನ್ನು ತಿಳಿಸುವ ಸಣ್ಣ ಪ್ರಯತ್ನವನ್ನು ಮಾಡಿದ್ದೇನೆ. ಅಂತರಾಷ್ಟ್ರೀಯ ಯೋಗ ದಿನವನ್ನು ನಾವು ಆಚರಿಸುತ್ತಿರುವಾಗ ಯೋಗದ ನಿಜವಾದ ತಾತ್ಪರ್ಯವನ್ನು ತಿಳಿಯೋಣ, ಯೋಗವೆಂದರೆ ಒಟ್ಟಾಗಿ ಬದುಕುವುದು, ಪ್ರಜ್ಞೆಯಿಂದ ಬದುಕುವುದು, ಮತ್ತು ಆತ್ಮಾವಲೋಕನದತ್ತ ಚಿಂತನೆ ನಡೆಸುವುದು, ನಿಜವಾದ ಯೋಗ ಅಷ್ಟಾಂಗ ಯೋಗ, ಮಹರ್ಷಿ ಪತಂಜಲಿ ಅವರು ಯೋಗಸೂತ್ರಗಳಲ್ಲಿ ವಿವರಿಸಿದ 8



ಹೆಜ್ಜೆಗಳ ಪಥ ಇದು ವೈಯಕ್ತಿಕ ಶುದ್ಧತೆಯಿಂದ ಹಿಡಿದು ಆತ್ಮ ಸಾಕ್ಷಾತ್ಕಾರದವರೆಗೆ ವ್ಯಕ್ತಿಗಳನ್ನು ರೂಪುಗೊಳಿಸುವ ಆಧ್ಯಾತ್ಮಿಕ ಪಥ್ಯವಾಗಿದೆ ಅಷ್ಟಾಂಗ ಯೋಗದ ಎಂಟು ಅಂಗಗಳು ಯಮ, ನಿಯಮ, ಆಸನ, ಪ್ರಾಣಾಯಾಮ, ಪ್ರತ್ಯಾಹಾರ ಧಾರಣ ಧ್ಯಾನ ಮತ್ತು ಅಂತಿಮ ಮೆಟ್ಟಿಲೇ ಸಮಾಧಿ. ಈ ನಿಯಮಗಳನ್ನು ತಿಳಿದು ಕೊಂಡು ಯೋಗದಲ್ಲಿ ತೊಡಗಿದ ಪ್ರತಿಯೊಬ್ಬರು ಸಹಜ, ಸುಂದರ ಆನಂದಮಯ ಜೀವನ ನಡೆಸಿ ಸಮಾಜಕ್ಕೆ ಅಸ್ತಿಯಾಗುವುದರಲ್ಲಿ ಸಂದೇಹವೇ ಇಲ್ಲ. ಅಂದರೆ ನೈತಿಕ ನಿಯಮಗಳು ಸಮಾಜದೊಂದಿಗೆ ಹೊಂದಾಣಿಕೆ ಬದುಕಿಗಾಗಿ ಯಮದಲ್ಲಿ ತಿಳಿಸಿರುವ ಐದು ತತ್ವಗಳು ಅಹಿಂಸೆ, ಸತ್ಯ ಅಸ್ತೆಯ ಬ್ರಹ್ಮಚರ್ಯ ಅಪರಿಗ್ರಹ ಅದೇ ರೀತಿ ನಿಯಮದಲ್ಲಿ ಬರುವ ಅಂತರಗದ ಶುದ್ಧಿಗಾಗಿ ಶೌಚ, ಸಂತೋಷ, ತಪಸ್ಸು, ಸ್ವಾಧ್ಯಾಯ ಹಾಗೂ ಈಶ್ವರ ಪ್ರಣಿಧಾನ ಆಸನ: ದೇಹದ ಶಿಸ್ತು ಪ್ರಾಣಾಯಾಮ: ಉಸಿರಿನ ನಿಯಂತ್ರಣ ಧಾರಣ ಒಂದು ವಸ್ತುವಿನ ಮೇಲೆ ಮನಸ್ಸಿನ ಕೇಂದ್ರೀಕರಣ ಧ್ಯಾನ, ಮನಸ್ಸಿನ ಸ್ಪಷ್ಟತೆ, ಸಮಾಧಿ ಅಂತಿಮ ಆನಂದ, ಇಷ್ಟು ನಾವು ಪಾಲಿಸಲು ನಿರಂತರ ಅಭ್ಯಾಸ ಶ್ರದ್ಧೆಯಿಂದ ಸಾಧ್ಯ ಆದರೆ ಅದನ್ನು ತಿಳಿದು ಅದರಲ್ಲಿ ತೊಡಗಿದ್ದಾಗ ಮಾತ್ರ ಸಾಧ್ಯ.

ಯೋಗವೆಂದರೆ ದೇಹ ಮತ್ತು ಮನಸ್ಸಿನ, ಮನಸ್ಸು ಮತ್ತು ಆತ್ಮದ, ಆತ್ಮ ಮತ್ತು ವಿಶ್ವಚೇತನದ, ಏಕತ್ವ ಭಾರತದಿಂದ ವಿಶ್ವಕ್ಕೆ ಉಡುಗೊರೆ ಯೋಗ ಭಾರತದ ಪವಿತ್ರ ಗುಹೆಗಳಲ್ಲೋ ಅರಣ್ಯಗಳಲ್ಲಿಯೋ ಹುಟ್ಟಿದ ಜೀವಶಾಸ್ತ್ರ, ಇಂದು ಟೋಕಿಯೋದಿಂದ ಟೊರಂಟಾವರೆಗೂ ನ್ಯೂಯಾರ್ಕಿನಿಂದ ನೈರೋಬಿ ವರೆಗೂ ಯೋಗದ ಪರಿಮಳ ಹರಡಿದೆ. ಯೋಗ ಎನ್ನುವುದು ಭಾರತದ ಶಕ್ತಿ ಇದು ವಿವೇಕದ ವಿಜಯ. ಸಮಾಜದಲ್ಲಿ ಉಂಟಾಗಿರುವ ಮಾನಸಿಕ ಒತ್ತಡ, ಒಂಟಿತನ, ಮತ್ತು ಆತ್ಮಸ್ಥೈರ್ಯದಲ್ಲಿ ಕುಂಠಿತ ನೆಮ್ಮದಿ ಇರದ ಜೀವನಕ್ಕೆ ಯೋಗವು ಅತ್ಯಂತ ಅವಶ್ಯವಾಗಿದೆ. ಯೋಗವು ಆಂತರಿಕ ಶಕ್ತಿ ತಲುಪಲು ಮಾರ್ಗವಾಗಿದೆ. ಆತ್ಮದ ಪ್ರಜಾಸತ್ತಾತ್ಮಕ ಶಕ್ತಿ ಯೋಗ. ಧರ್ಮ ಜಾತಿ ಭಾಷೆ ದೇಶ ಯಾವುದು ಯೋಗಕ್ಕೆ ಅಡ್ಡಿಯಾಗದು. ಯೋಗ ಅರಿವಿನಿಂದ ಬದುಕುವ ಸಂಕಲ್ಪ ಇದು ಎಲ್ಲಾ ವರ್ಗದವರಿಗೂ ಪೂರಕವಾದ ಜೀವನ ಮಾರ್ಗ. ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸುವಾಗ ಪತಂಜಲಿಯವರ ಜೊತೆಗೆ ನಾವು ನೆನೆಯಲೇ ಬೇಕಾದ ಮಹಾಪುರುಷರಾದ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರನ್ನು .ಯೋಗದ ನಿಜವಾದ ತಾತ್ಪರ್ಯವನ್ನು ಪಾಶ್ಚಾತ್ಯ ಜಗತ್ತಿಗೆ ಪರಿಚಯಿಸಿದ ಮೊದಲ ಧರ್ಮ ಯೋಗ ಅವರ ದೃಷ್ಟಿಯಲ್ಲಿ ಯೋಗ ಎಂದರೆ ಕೇವಲ ದೈಹಿಕ ವ್ಯಾಯಾಮವಲ್ಲ ಅದು ಆತ್ಮ ಸಾಧನೆಯ ಮಾರ್ಗ ಮತ್ತು ಮಾನವ ಶಕ್ತಿಯ ವಿಜ್ಞಾನ ಯೋಗವೆಂದರೆ ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವ ಜ್ಞಾನ. ಶಿಸ್ತು ಮತ್ತು ಸ್ಪಷ್ಟತೆಯೊಂದಿಗೆ ಬದುಕನ್ನು ಎದುರಿಸುವುದು.



ವಿವೇಕಾನಂದರು ವಿವರಿಸಿದ ನಾಲ್ಕು ಯೋಗ ಮಾರ್ಗಗಳು ಎಂದೆಂದಿಗೂ ಎಲ್ಲಾ ಸಮಯಕ್ಕೂ ಸೂಕ್ತ ಜ್ಞಾನಯೋಗ ಜ್ಞಾನ ಮತ್ತು ತಾತ್ವಿಕ ವಿಚಾರದ ಪಥಭಕ್ತಿ ಯೋಗ ಪ್ರೀತಿ ಮತ್ತು ಶರಣಾಗತಿಯ ಪಥಕರ್ಮ ಯೋಗ ನಿಷ್ಕಾಮ ಸೇವೆಯ ಪಥ ರಾಜಯೋಗ ಧ್ಯಾನ ಮತ್ತು ಮನಸ್ಸಿನ ನಿಯಂತ್ರಣದ ಪಥ. ಪಶ್ಚಿಮ ಜಗತ್ತಿಗೆ ಯೋಗವನ್ನು ಪರಿಚಯಿಸಿದ ಯುಗಪುರುಷ 1893 ರ ಚಿಕಾಗೋ ಧರ್ಮ ಸಮ್ಮೇಳನದಲ್ಲಿ ಸ್ವಾಮಿ ವಿವೇಕಾನಂದರು ಪಶ್ಚಿಮದ ಜನರ ಮುಂದೆಲ್ಲಾ ಭಾರತದಿಂದ ಯೋಗದ ಪ್ರಾಚೀನ ತತ್ವಗಳನ್ನು ವೈಜ್ಞಾನಿಕವಾಗಿ ಸರಳವಾಗಿ ಮತ್ತು ಪ್ರಾಮಾಣಿಕವಾಗಿ ಮಂಡಿಸಿದರು ಅವರ ರಾಜಯೋಗ ಎಂಬ ಗ್ರಂಥವು ಪಶ್ಚಿಮ ದೇಶಗಳಲ್ಲಿ ಬಹುಮಟ್ಟಿಗೆ ಆದರಿಸಲ್ಪಟ್ಟಿದೆ ಪ್ರತಿ ಆತ್ಮದಲ್ಲೂ ದಿವ್ಯತೆ ಇರುತ್ತದೆ ಈ ದಿವ್ಯತೆಯನ್ನು ವ್ಯಕ್ತಗೊಳಿಸುವುದೇ ಯೋಗದ ಗುರಿಯಾಗಿದೆ.

ಯೋಗ ನವ ಭಾರತ ಮತ್ತು ಮಾನವೀಯತೆಗೆ ದಾರಿ. ಈ ಯೋಗ ದಿನದಂದು ನಾವು ಕೇವಲ ಸೆಲ್ಫಿಗಳಿಗೆ ಅಥವಾ ಫೋಟೋಕ್ಕೆ ಸೀಮಿತವಾಗದೆ ನಮ್ಮ ಜೀವನ ಶೈಲಿಯನ್ನು ಬದಲಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದಾಗ ಅಂತರರಾಷ್ಟ್ರೀಯ ಯೋಗ ದಿನದ ನಿಜವಾದ ಅರ್ಥಪೂರ್ಣ ಆಚರಣೆಯಾಗುತ್ತದೆ. ಆಚರಣೆಗಾಗಿ ಯೋಗ ಮಾಡದೆ ನಾವೇ ಯೋಗವಾಗೋಣ. ಈ ಯೋಗದ ದಿನದಂದು ನಾವು ಕೇವಲ ಆಸನ ಅಥವಾ ಪ್ರಾಣಾಯಾಮ ಮಾಡದೆ ನಿಜವಾದ ಅರ್ಥದಲ್ಲಿ ಯೋಗವನ್ನು ಅಳವಡಿಸಿಕೊಂಡು ಕರ್ಮದಲ್ಲಿ ಶುದ್ಧತೆ ಭಕ್ತಿಯಲ್ಲಿ ಶ್ರದ್ಧೆ, ಜ್ಞಾನದಲ್ಲಿ ಅರಿವು ರಾಜಯೋಗದಲ್ಲಿ ನಿಗ್ರಹ ಇವೆಲ್ಲವೂ ಸೇರಿ ಯೋಗದ ಪರಿಪೂರ್ಣತೆಯನ್ನು ಹೊಂದೋಣ ಯೋಗದಿಂದ ಶಕ್ತಿ ಮತ್ತು ಶಾಂತಿಯನ್ನು ಹೊಂದಿ ಜಾಗೃತಿ ಕಡೆಗೆ ಮುನ್ನಡೆಯೋಣ.



**ಡಾ॥ ವಸುಂದರ ಪಾಟೀಲ್,
ಸಹಾಯಕ ಉಪನ್ಯಾಸಕರು,
ಎಸ್ ಸಿ ಎ ಬಿ ಕಾನೂನು ಮಹಾವಿದ್ಯಾಲಯ
ರಾಯಚೂರ.**

ಮಾನವಿ: ಬಾಲಕಾರ್ಮಿಕ, ಕಿಶೋರ ಕಾರ್ಮಿಕತೆ

## ನಿರ್ಮೂಲನೆಯ ಆಟೋ ಪ್ರಚಾರದ ಜನಜಾಗೃತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 20–ಜಿಲ್ಲೆಯ ಮಾನವಿ ತಾಲೂಕಿನಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕತೆ ನಿರ್ಮೂಲನೆಯ ಆಟೋ ಪ್ರಚಾರದ ಜನಜಾಗೃತಿ ಸಂಚಾರಿ ವಾಹನಕ್ಕೆ ಜೂನ್ 19ರಂದು ಮಾನವಿಯ ಗ್ರೇಡ್–2 ತಹಶೀಲ್ದಾರ ಅಬ್ದುಲ್ ವಾಹಿದ್ ಅವರು ರಿಬ್ಬನ್ ಕತ್ತರಿಸಿ ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಮಕ್ಕಳನ್ನು ಯಾವುದೇ ಕಾರಣಕ್ಕೂ ಕೆಲಸಕ್ಕೆ ಕಳುಹಿಸದೇ ಕಡ್ಡಾಯವಾಗಿ ಶಾಲೆಗೆ ಕಳುಹಿಸಬೇಕು. ಮಕ್ಕಳು ತಮ್ಮ ಬಾಲ್ಯವನ್ನು ಶಿಕ್ಷಣ ಮತ್ತು ಆಟದ ಜೊತೆಗೆ ಕಳೆಯಬೇಕು. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳುಹಿಸುವುದು ಪೋಷಕರ ಆದ್ಯ ಕರ್ತವ್ಯವಾಗಿರುತ್ತದೆ ಎಂದು ತಿಳಿಸಿದರು.

ಈ ಸಂಚಾರಿ ಜನಜಾಗೃತಿ ವಾಹನವು ಎಸ್.ಸಿ ಮತ್ತು ಎಸ್.ಟಿ ಜನಾಂಗದವರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮಾನವಿ ತಾಲೂಕಿನಾದ್ಯಂತ 02 ದಿನಗಳ ಕಾಲ ಸಂಚರಿಸಲಿದೆ. ಇದೆ ವೇಳೆ ಕರಪತ್ರಗಳನ್ನು ಹಂಚುವುದರ ಮೂಲಕ ಮತ್ತು ಸ್ಟಿಕ್ಕರ್‌ಗಳನ್ನು ಅಂಟಿಸುವ ಮುಖಾಂತರ ಜನಜಾಗೃತಿ ಮೂಡಿಸಲಾಗುತ್ತಿದೆ.

ಮಕ್ಕಳನ್ನು ಕೆಲಸಕ್ಕೆ ಕಳುಹಿಸದೇ ಶಾಲೆಗೆ ಕಳುಹಿಸಬೇಕು ಎಂದು ಜನರಲ್ಲಿ ತಿಳಿಸುವ ಕಾರ್ಯಕ್ರಮ ಇದಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ, ಮಾನವಿಯ ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ, ಶಿಕ್ಷಣ ಇಲಾಖೆಯ ಸೋಮಶೇಖರ ಹಾಗೂ ಹಾಲೇಶ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ರಾಜಶೇಖರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಸರಿತಾ ಹಾಗೂ ಶಿವಶಂಕರ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

### ಜೂ.26 ರವರೆಗೆ ಸಾರ್ವಜನಿಕರ ವೀಕ್ಷಣೆಗೆ ಅವಕಾಶ

# ಸರ್ಕಾರ ನುಡಿದಂತೆ ನಡೆದಿದೆ; ಗ್ಯಾರಂಟಿ ಯೋಜನೆಗಳಿಂದ ಜನರ ಜೀವನಮಟ್ಟ ಸುಧಾರಣೆ–ಮೇಯರ್ ಮುಲ್ಲಂಗಿ ನಂದೀಶ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ 2 ವರ್ಷ ಪೂರೈಸಿದ್ದು,ರಾಜ್ಯದಲ್ಲಿ ಆಶ್ವಾಸನೆ ನೀಡಿದಂತಹ 5 ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿ ಜನರ ಜೀವನಮಟ್ಟವನ್ನು ಸುಧಾರಿಸಿದ್ದು, ನುಡಿದಂತೆ ನಡೆದುಕೊಂಡಿದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.




ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಬಳ್ಳಾರಿ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ನಗರದ ಟ್ಯಾಂಕ್ ಬಂಡ್ ರಸ್ತೆಯ ಕೇಂದ್ರ ಬಸ್ ನಿಲ್ದಾಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಕರ್ನಾಟಕ ರಾಜ್ಯ ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಶಕ್ತಿ ಯೋಜನೆ, ಅನ್ನಭಾಗ್ಯ,ಗೃಹಲಕ್ಷ್ಮೀ,ಗೃಹಜ್ಯೋತಿ ಮತ್ತು ಯುವನಿಧಿ ಸೇರಿದಂತೆ ಐದು ಯೋಜನೆಗಳನ್ನು ಜಾರಿಗೊಳಿಸಿದಾಗ ಅನೇಕ ಟೀಕೆ–ಪ್ರಹಾರಗಳು ನಡೆದಿದ್ದವು. ಅವೆಲ್ಲವುಗಳನ್ನು ಮೆಟ್ಟಿನಿಂತು ರಾಜ್ಯ ಸರ್ಕಾರವು ದೇಶದಲ್ಲಿಯೇ ಮಾದರಿ ಸರ್ಕಾರವಾಗಿದೆ ಎಂದರು.

ಬಳ್ಳಾರಿ ಜಿಲ್ಲೆಯು ಅಭಿವೃದ್ಧಿಯತ್ತ ಸಾಗುತ್ತಿದೆ. ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದ ಸರ್ಕಾರವು ಮಾತು ಕೊಟ್ಟಂತೆ, ನಡೆದುಕೊಂಡಿದೆ.ಪ್ರಜಾಪ್ರಭುತ್ವದಲ್ಲಿ ಜನಾಭಿಪ್ರಾಯಗಳೇ ಮುಖ್ಯವಾಗಿದ್ದು, ಜನರಿಗೆ ಉಪಯೋಗವಾಗುವಂತಹ ಯೋಜನೆಗಳನ್ನೇ ಜಾರಿಗೊಳಿಸಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಗಳು ನಾಡಿನ ಜನರ ಕಷ್ಟ–ಕಾರ್ಪಣ್ಯಗಳನ್ನು ತಗ್ಗಿಸಿ, ಘನತೆಯ ಜೀವನದ ಮೂಲಕ ಬದುಕು ಕಟ್ಟಿಕೊಳ್ಳಲು ಒದಗಿಸಿರುವ ರಕ್ಷಣೆಗಳಾಗಿವೆ.ರಾಜ್ಯ ಸರ್ಕಾರವು ಕೇವಲ ಗ್ಯಾರಂಟಿ ಯೋಜನೆಗಳಿಗೆ ಒತ್ತು ನೀಡಿಲ್ಲ, ಬದಲಾಗಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಸಹ ಮಾಡುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಶೇ.97 ರಷ್ಟು ಪ್ರಗತಿಯಾಗಿದೆ. ಅದೇರೀತಿಯಾಗಿ ಬಳ್ಳಾರಿ ಜಿಲ್ಲೆಯಲ್ಲಿ ಶೇ.97.05 ರಷ್ಟು ಫಲಾಭವಿಗಳಿಗೆ ಗ್ಯಾರಂಟಿಗಳ ಸೌಲಭ್ಯಗಳನ್ನು ತಲುಪಿಸಿದ್ದೇವೆ. ಅದೇರೀತಿಯಾಗಿ ಈವರೆಗೂ ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯದೇ ವಂಚಿತರಾಗಿದ್ದಲ್ಲಿ, ನಗರದ ಜಿಲ್ಲಾ ಪಂಚಾಯತ್‌ನಲ್ಲಿರುವ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿ ಭೇಟಿ ನೀಡಬಹುದು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ರಾಜ್ಯ ಸರ್ಕಾರವು ಅಸ್ತಿತ್ವಕ್ಕೆ ಬಂದು ಎರಡು ಪೂರೈಸಿರುವ ಹಿನ್ನಲ್ಲೆಯಲ್ಲಿ ಸರ್ಕಾರದ ಸಾಧನೆಗಳು ಮತ್ತು ಯೋಜನೆಗಳ ಮಾಹಿತಿಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸಿ ಜನರ ಗಮನ ಸೆಳೆಯುವಂತೆ ಮಾಡುತ್ತಿದ್ದು, ಈ ಯೋಜನೆಗಳು ಜನರ ಮನೆಯ ಬಾಗಿಲಿಗೆ ತಲುಪಿಸುವುದರ ಜೊತೆಗೆ ಸರ್ಕಾರದಿಂದ ಜಾರಿ ಮಾಡುವಂತಹ ಯೋಜನೆಗಳ ಸೌಲಭ್ಯಗಳನ್ನು ಯಾವ ರೀತಿ ಪಡೆದುಕೊಳ್ಳಬೇಕು ಎಂಬುದರ ಬಗ್ಗೆ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಭಾಗವಾನ್, ವಿಭಾಗೀಯ ಸಂಚಾರಾಧಿಕಾರಿ ಚಾಮರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕರಾದ ವಿ.ಸಿ.ಗುರುರಾಜ, ಸಿಬ್ಬಂದಿಗಳಾದ ವಿಜಯ್ ಕುಮಾರ್, ಹನುಮಂತಪ್ಪ, ಮಲ್ಲೇಶಪ್ಪ, ಹನುಮೇಶ್.ಹೆಚ್., ತೇಜ, ದಿವಾಕರ, ಶ್ರೀಧರ್ ಕಾವಲಿ, ರುದ್ರಮುನಿ ಸ್ವಾಮಿ ಸೇರಿದಂತೆ ಇತರರು ಇದ್ದರು.

*ಜೂ.26 ರ ವರೆಗೆ ವೀಕ್ಷಿಸಲು ಅವಕಾಶ:*

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಹಾಗೂ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವು ನಗರದ ಟ್ಯಾಂಕ್ ಬಂಡ್ ರಸ್ತೆಯ ಕೇಂದ್ರ ಬಸ್ ನಿಲ್ದಾಣದಲ್ಲಿ ಜೂ.26 ರ ವರೆಗೆ ಇರಲಿದೆ. ಈ ವಸ್ತು ಪ್ರದರ್ಶನವು ಸಾರ್ವಜನಿಕರ ವೀಕ್ಷಣೆಗೆ ಅವಕಾಶವಿದ್ದು, ಭೇಟಿ ನೀಡಿ ವೀಕ್ಷಿಸಬಹುದು.

ವಸ್ತು ಪ್ರದರ್ಶನವು ರಾಜ್ಯ ಸರ್ಕಾರ ಅನುಷ್ಠಾನಗೊಳಿಸಲಾದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿಯ ಮಾಹಿತಿ ಫಲಕ ಮತ್ತು ಸರ್ಕಾರದ ವಿವಿಧ ಯೋಜನೆಗಳ ಸಾಧನೆಯ ಮಾಹಿತಿ ಫಲಕಗಳು ಒಳಗೊಂಡಿದೆ.

## ವಿವಿಧ ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಜಿಲ್ಲಾಡಳಿತದಿಂದ ವಿವಿಧ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು. ಇದಕ್ಕೆ ಬೇಕಾದ ಎಲ್ಲಾ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ವಿವಿಧ ಮಹನೀಯರ ಜಯಂತಿಗಳ ಆಚರಣೆ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇ–ರಿಯ ಕೆಸ್ವಾನ್ ವಿಡೀಯೊ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕೇಂದ್ರದಲ್ಲಿ ಜೂ.27 ರಂದು ಕೆಂಪೇಗೌಡ ಜಯಂತಿ, ಜುಲೈ 02 ರಂದು ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಮತ್ತು ಜುಲೈ 10 ರಂದು ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ನಿರ್ಧಾರ ಕೈಗೊಳ್ಳಲಾಯಿತು.

ಜೂ.27 ರಂದು ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಚರಿಸಲಾಗುವುದು. ವೇದಿಕೆ ವ್ಯವಸ್ಥೆ ಮತ್ತು ಅಲಂಕಾರ, ಆಸನಗಳ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಇತರೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಕೆಂಪೇಗೌಡ ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ ನಡೆಯಲಿದ್ದು, ಸೂಕ್ತ ಪೊಲೀಸ್ ಬಂದೋಬಸ್ತ್ ನೀಡಬೇಕು. ಮೆರವಣಿಗೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು.

ಜುಲೈ 02 ರಂದು ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಮತ್ತು ಜುಲೈ 10 ರಂದು ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮಗಳನ್ನು ನಗರದ ಸಾಂಸ್ಕೃತಿಕ ಸಮುಚ್ಛಯ ಆವರಣದ ಹೊಂಗಿರಣ ಸಭಾಂಗಣದಲ್ಲಿ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ವಿವಿಧ ಮುಖಂಡರ ಸಮ್ಮುಖದಲ್ಲಿ ನಿರ್ಧರಿಸಲಾಯಿತು.

ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ಮಹನೀಯರ ಸಾಧನೆ ಮತ್ತು ಕಾರ್ಯಗಳ ಬಗ್ಗೆ ಬಿತ್ತರಿಸಲು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಆಯೋಸಬೇಕು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾ–ತಂಡಗಳನ್ನು ನಿಯೋಜಿಸಬೇಕು ಎಂದು ತಿಳಿಸಿದರು.

ಶಾಲೆ–ಪಿಯು ಕಾಲೇಜುಗಳಲ್ಲಿ ಕೆಂಪೇಗೌಡರ ಕುರಿತಾಗಿ ಪ್ರಬಂಧ, ಚಿತ್ರಕಲೆ, ಆಶುಭಾಷಣ, ವಿಚಾರಗೋಷ್ಠಿ ಮತ್ತು ಜಾಥಾ ಕಾರ್ಯಕ್ರಮ ಆಯೋಜಿಸುವಂತೆ ಸರ್ಕಾರದ ನಿರ್ದೇಶನವಿದ್ದು, ಇದಕ್ಕೆ ಬೇಕಾದ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಡಿಡಿಪಿಐ ಅವರಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಸಮುದಾಯದ ಮುಖಂಡರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ರಸ್ತೆ ಸೇತುವೆ ಕಾಮಗಾರಿ; ಬದಲಿ ಮಾರ್ಗಗಳಲ್ಲಿ ಸಂಚರಿಸುವಂತೆ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ನಗರದ ಹವಂಭಾವಿಯ ಹತ್ತಿರದ ರಾಷ್ಟ್ರೀಯ ಹೆದ್ದಾರಿ–150 ಎ ರಸ್ತೆಯ ತುಂಗಭದ್ರ ಬಲದಂಡೆ ಮೇಲ್ಮಟ್ಟದ ವಿತರಣಾ ಕಾಲುವೆ ಸಂಖ್ಯೆ–14 ಕಿ.ಮೀ 4.40 ರಲ್ಲಿ ಕಾಲುವೆಯ ತುರ್ತು ಕಾಮಗಾರಿ ಕೈಗೊಳ್ಳುತ್ತಿರುವ ಹಿನ್ನಲೆಯಲ್ಲಿ ಜೂ.20 ರಿಂದ 24 ರವರೆಗೆ ರಸ್ತೆ ಸಂಚಾರವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿ ಪರ್ಯಾಯ ಮಾರ್ಗಗಳಲ್ಲಿ ಸಂಚರಿಸಬೇಕು ಎಂದು ಜಿಲ್ಲಾ ದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ಈ ಸೇತುವೆಯ ಒಂದು ಭಾಗದ ಗೋಡೆ ದುಸ್ಥಿತಿಯಲ್ಲಿದ್ದು, ಮುಂದೆ ಆಗಬಹುದಾದ ಅನಾಹುತ ತಪ್ಪಿಸಲು ಮತ್ತು ಮುಂಗಾರು ಹಂಗಾಮಿಗೆ ಕಾಲುವೆಗೆ ನೀರು ಹರಿಸುವ ಮುಂಚಿತವಾಗಿ ಸೇತುವೆ ಕಾಮಗಾರಿ ಕೈಗೊಳ್ಳುವುದು ಅವಶ್ಯವೆಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ನಂ.06 ಕಾಲುವೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರು ಈ



ಕುರಿತು ವರದಿ ಸಲ್ಲಿಸಿರುತ್ತಾರೆ.

ಹಾಗಾಗಿ, ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ಹಿತದೃಷ್ಠಿಯಿಂದ ಮೋಟಾರ್ ವಾಹನ ಕಾಯ್ದೆ 1988 ರ ಅಧಿನಿಯಮ 115 ಹಾಗೂ ಕರ್ನಾಟಕ ಮೋಟಾರ್ ವಾಹನ ನಿಯಮಗಳು 1989 ರ ನಿಯಮ 221ಎ (5) ರನ್ವಯ ಪ್ರದತ್ತವಾದ ಅಧಿಕಾರದಡಿ ಜೂ.20 ರಿಂದ 24 ರವರೆಗೆ ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

**ಬದಲಿ ಮಾರ್ಗ:**

ಬಳ್ಳಾರಿಯಿಂದ ಸಿರುಗುಪ್ಪ ಕಡೆಗೆ ಹೋಗುವ ಲಘು ಮತ್ತು ಬಾರಿ ವಾಹನಗಳು ಕಾಮಗಾರಿ ಹತ್ತಿರದ ಕಾಲುವೆಯ ಎಡಭಾಗದ ಸರ್ವೀಸ್ ರಸ್ತೆಯಿಂದ 100 ಮೀ. ಅಂತರದ ಸೇತುವೆ ಮೂಲಕ ಬಲಕ್ಕೆ ತಿರುವು ಪಡೆದುಕೊಂಡು ಸಿರುಗುಪ್ಪ ರಸ್ತೆಯ ಕಡೆಗೆ ಸಂಚಾರ ಮಾಡಬೇಕು.ಸಿರುಗುಪ್ಪದಿಂದ ಬಳ್ಳಾರಿ ನಗರಕ್ಕೆ ಪ್ರವೇಶಿಸುವ ಭಾರಿ ವಾಹನಗಳು ಹವಂಭಾವಿ ಹೆಚ್‌ಎಲ್‌ಸಿ ವಿತರಣಾ ಕಾಲುವೆಯ ಸೇವಾ ರಸ್ತೆ (ಸಿಸಿ ರಸ್ತೆ) ಮೂಲಕ ತಾಳೂರು ರಸ್ತೆಯ ಮೂಲಕ ಸಂಚರಿಸಬೇಕು.

ಸಿರುಗುಪ್ಪದಿಂದ ಬಳ್ಳಾರಿ ನಗರಕ್ಕೆ ಬರುವ ಲಘು ವಾಹನಗಳು ಹವಂಭಾವಿ ಹೆಚ್‌ಎಲ್‌ಸಿ ವಿತರಣಾ ಕಾಲುವೆಯ ಸೇವಾ ರಸ್ತೆ ಕಿ.ಮೀ 5.10 ರಲ್ಲಿನ ಸೇತುವೆ ಮೂಲಕ ಸಂಚಾರ ಮಾಡಬೇಕು ಎಂದು ಜಿಲ್ಲಾಧಿಕಾರಿವರು ತಿಳಿಸಿದ್ದಾರೆ.


ಕಾಮಗಾರಿ ನಿರ್ಮಾಣದ ಬಗ್ಗೆ ಹಾಗೂ ಸಾರ್ವಜನಿಕರ ಸುರಕ್ಷತೆ ಬಗ್ಗೆ ಸೂಚನಾ ಫಲಕ ಮತ್ತು ಸಂಚಾರ ಬದಲಾವಣೆ ಮಾರ್ಗ ಅಳವಡಿಸಬೇಕು. ಸಂಬಂಧಿಸಿದ ಅಧಿಕಾರಿಗಳು ರಸ್ತೆಯಲ್ಲಿ ಸೂಕ್ತ ಸಂಕೇತಗಳನ್ನು ಹಾಗೂ ಕಾಮಗಾರಿ ಸ್ಥಳದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳಕಿನ ವ್ಯವಸ್ಥೆ ಅಳವಡಿಸಬೇಕು. ಇತರೆ ಎಲ್ಲಾ ರಸ್ತೆ ಸುರಕ್ಷತಾ ಕ್ರಮಗಳನ್ನು ಅಳವಡಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

### ಜೂ.22ರಂದು ಸಚಿವ ಎನ್.ಎಸ್.ಭೋಸರಾಜು ಅವರ ಕೊಪ್ಪಳ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ವಿಧಾನ ಪರಿಷತ್ತಿನ ಸಭಾ ನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಭೋಸರಾಜು ಅವರು ಜೂನ್ 22 ರಂದು ಕೊಪ್ಪಳ ಜಿಲ್ಲಾ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಸಚಿವರು ಅಂದು ಬೆಳಗ್ಗೆ 7 ಗಂಟೆಗೆ ರಾಯಚೂರಿನಿಂದ ರಸ್ತೆಯ ಮೂಲಕ ಹೊರಟು, 11 ಗಂಟೆಗೆ ಕೊಪ್ಪಳ ಜಿಲ್ಲೆಯ ಕುಕನೂರು ನಿರೀಕ್ಷಣಾ ಮಂದಿರಕ್ಕೆ ಆಗಮಿಸುವರು. ಅಲ್ಲಿಂದ 11.15ಕ್ಕೆ ನಿರ್ಗಮಿಸಿ, ನಂತರ 11.30ಕ್ಕೆ ಶಿರೂರ ಗ್ರಾಮದಲ್ಲಿ ಕರ್ನಾಟಕ ನೀರಾವರಿ ನಿಗಮದ ಮುಖಾಂತರ ನಿರ್ಮಿಸಲಾಗಿರುವ



ಕೆ.ಹೆಚ್.ಪಾಟೀಲ್ ರವರ ಮೂರ್ತಿ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 1.45ಕ್ಕೆ ಕುಕನೂರು ನಿರೀಕ್ಷಣಾ ಮಂದಿರಕ್ಕೆ ಆಗಮಿಸಿ, ಬಳಿಕ ಅಂದು ಮಧ್ಯಾಹ್ನ 3 ಗಂಟೆಗೆ ರಾಯಚೂರು ಜಿಲ್ಲೆಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಗದಿಂದ ದೇಹ ಮತ್ತು ಮನಸ್ಸಿನ ಆರೋಗ್ಯ ವೃದ್ಧಿ: ಡಾ.ವಿರುಪಾಕ್ಷ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಪ್ರತಿನಿತ್ಯ ಯೋಗ ಮಾಡುವುದರಿಂದ ದೇಹ ಮತ್ತು ಮನಸ್ಸಿನ ಆರೋಗ್ಯ ವೃದ್ಧಿಸುತ್ತದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಎಂ.ವಿರುಪಾಕ್ಷಿ ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜನಜಾಗೃತಿ ಮೂಡಿಸಲು ನಗರದ ಕನಕದುರ್ಗಮ್ಮ ದೇವಸ್ಥಾನದಲ್ಲಿ ಶುಕ್ರವಾರ ಏರ್ಪಡಿಸಿದ್ದ ಬೈಕ್ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿನಿತ್ಯ ಒಳ್ಳೆಯ ಜೀವನಶೈಲಿ ಅತ್ಯಗತ್ಯ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಬಿಡುವಿನ ಸಮಯದಲ್ಲಿ ಯೋಗಾಭ್ಯಾಸ ಮಾಡಬೇಕು. ಈ ವರ್ಷದ ಘೋಷವಾಕ್ಯವು 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬುದಾಗಿದೆ ಎಂದು ತಿಳಿಸಿದರು. ಜಾಥಾವು ಕನಕದುರ್ಗಮ್ಮ ದೇವಸ್ಥಾನದಿಂದ ಆರಂಭಗೊಂಡು ಎಸ್‌ಪಿ ವೃತ್ತ–ಹೆಚ್.ಆರ್.ಗವಿಯಪ್ಪ ವೃತ್ತ – ಗಡಿಗಿ ಚೆನ್ನಪ್ಪ ವೃತ್ತದಿಂದ ಮರಳಿ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಿ ಅಂತ್ಯಗೊಂಡಿತು.

ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ಯೋಗ–ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

## ಜೂ.23 ರಂದು ಮಿನಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಗರದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಜೂ.23 ರಂದು ಮಿನಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದ್ದು, ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇ–ರಿಯ ಉದ್ಯೋಗಾಧಿಕಾರಿ ಹಟ್ಟಪ್ಪ ಅವರು ತಿಳಿಸಿದ್ದಾರೆ.

ಮೇಳದಲ್ಲಿ 3 ರಿಂದ 4 ಕಂಪನಿಗಳು ಭಾಗವಹಿಸಲಿದ್ದು, ಇವರು ತಮ್ಮಲ್ಲಿರುವ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳುವರು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ.

*ವಿದ್ಯಾರ್ಹತೆ:*

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಪದವಿ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ–ವಿವರ (ಬಯೋಡೇಟಾ)ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086, 9900827768, 6360408094 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.21 ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಸಿರುಗುಪ್ಪ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗ ವ್ಯಾಪ್ತಿಯ ಬರುವ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಜೂ.21 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಸಿರುಗುಪ್ಪ ಉಪವಿಭಾಗ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೀಮಾ ನದಿಯಲ್ಲಿ ಕೊಚ್ಚಿ–ಕೊಂಡು ಹೋದ ಯುವಕ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.20–ಜಿಲ್ಲೆಯ ಅಫಜಲಪುರ ತಾಲ್ಲೂಕಿನ ದೇವಲಗಾಣಗಾಪುರ ಬಳಿಯ ಭೀಮಾನದಿಯಲ್ಲಿ ಯುವಕನೊಬ್ಬ ಕೊಚ್ಚಿಕೊಂಡು ಹೋಗಿರುವ ಘಟನೆ ನಡೆದಿದೆ.ಆಳಂದ ತಾಲ್ಲೂಕಿನ ಖಜೂರಿ ಗ್ರಾಮದ ಲಕ್ಷ್ಮೀಕಾಂತ (17) ನದಿ ನೀರಲ್ಲಿ ಕೊಚ್ಚಿಕೊಂಡು ಹೋದ ಬಾಲಕ. ಕುಟುಂಬದ ಸದಸ್ಯರೊಂದಿಗೆ ದೇವಲಗಾಣಗಾಪುರದ ದತ್ತಾತ್ರೇಯ ದೇವಸ್ಥಾನ ದರ್ಶನಕ್ಕೆ ಬಂದಿದ್ದ ಯುವಕ ನದಿ ನೀರಲ್ಲಿ ಇಳಿದಾಗ ಕೊಚ್ಚಿಕೊಂಡು ಹೋಗಿದ್ದು, ಸ್ಥಳೀಯ ಈಜುಗಾರರು ಶೋಧ ಕಾರ್ಯಾಚರಣೆ ನಡೆಸಿ ಯುವಕನ ಮೃತದೇಹವನ್ನು ಹೊರ ತೆಗೆದಿದಾರೆ. ಅಲ್ಲದೆ ನದಿ ನೀರಲ್ಲಿ ಕೊಚ್ಚಿಕೊಂಡು ಹೋಗುತ್ತಿದ್ದ ಇತರ ಮೂವರನ್ನು ಸ್ಥಳೀಯ ಈಜುಗಾರರು ರಕ್ಷಣೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

### ಬಳ್ಳಾರಿಯಲ್ಲಿ ಜಿಲ್ಲಾಮಟ್ಟದ ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶ

# ಸಮಾಜದಲ್ಲಿ ಗೌರವ ಪಡೆಯಲು ಶಿಕ್ಷಣ ಅಗತ್ಯ: ಎಸ್‌ಪಿ ಡಾ.ಶೋಭಾರಾಣಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.20–ಸಮಾಜದಲ್ಲಿ ಹೆಣ್ಣುಮಕ್ಕಳಿಗೆ ಗೌರವ ಲಭಿಸಬೇಕೆಂದರೆ ಶಿಕ್ಷಣ ಅತ್ಯಗತ್ಯವಾಗಿದ್ದು, ಅವರಲ್ಲಿ ಆತ್ಮವಿಶ್ವಾಸ ಮತ್ತು ಸಬಲೀಕರಣ ಹೆಚ್ಚಿಸಿ ಉತ್ತಮವಾದ ಶಿಕ್ಷಣ ನೀಡುವುದು ಪೋಷಕರ ಜವಾಬ್ದಾರಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಹೇಳಿದರು.




ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಕ್ಕಳ ವಿಶೇಷ ಪೊಲೀಸ್ ಘಟಕ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಬಾಲ್ಯವಿವಾಹ ನಿಷೇಧ, ಲಿಂಗ ತಾರತಮ್ಯ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ನಗರದ ಬಿಡಿಎಎ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಹದಿಹರೆಯದ ಹೆಣ್ಣು ಮಕ್ಕಳ ಸಮಾವೇಶ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹೆಣ್ಣುಮಕ್ಕಳ ಆರೋಗ್ಯಕರ ಜೀವನಶೈಲಿ, ಶಿಕ್ಷಣ ಮತ್ತು ಪೋಷಣೆ ಬಗ್ಗೆ ಪೋಷಕರು ಕಾಳಜಿ ವಹಿಸಬೇಕು. ತಮ್ಮ ಗುರಿ ತಲುಪಲು ಸಹಾಯ ಮಾಡಬೇಕು. ಶ್ರದ್ಧೆ ಮತ್ತು ನಿಷ್ಠೆಯಿಂದ ವಿದ್ಯಾಭ್ಯಾಸ ಮಾಡಿದರೆ ಕನಸು ಕಂಡ ಗುರಿಯನ್ನು ತಲುಪಬಹುದು ಎಂದು ತಿಳಿಸಿದರು.

ಇಂದಿನ ಕಾಲದಲ್ಲಿ ಶಿಕ್ಷಣ ಪಡೆಯಲು ಹಾಗೂ ವಿದ್ಯಾಭ್ಯಾಸ ಮಾಡಲು ಬಹಳಷ್ಟು ಅನುಕೂಲವಿದೆ ಅದನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸಮಾಜದಲ್ಲಿ ಲಿಂಗ ತಾರತಮ್ಯ ಹೆಚ್ಚಾಗಿ ಇದ್ದು, ಅದನ್ನು ಹೋಗಲಾಡಿಸಲು ಕೇವಲ ಶಿಕ್ಷಣದಿಂದ ಮಾತ್ರ ಸಾಧ್ಯ. ಪ್ರತಿಯೊಬ್ಬರು ಶಿಕ್ಷಣ ಪಡೆದು ಸಮಾಜದಲ್ಲಿ ಉತ್ತಮ ಪ್ರಜೆ–ಯಾಗಿ ಹೊರಹೊಮ್ಮಬೇಕು. ಓದುವ ವಯಸ್ಸಿನಲ್ಲಿ ಚೆನ್ನಾಗಿ ವಿದ್ಯಾಭ್ಯಾಸ ಮಾಡಬೇಕು. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳಿಂದ ದೂರವಿದ್ದರೆ ಸಮಾಜದ ಪಿಡುಗು ಆಗಿರುವ ಬಾಲ್ಯವಿವಾಹದ ಪ್ರಕರಣಗಳನ್ನು ಆದಷ್ಟು ಕಡಿಮೆಗೊಳಿಸಬಹುದು ಎಂದು ತಿಳಿಸಿದರು.

ಪೊಲೀಸ್ ಇಲಾಖೆಯಿಂದ ಶಾಲಾ–ಕಾಲೇಜು ಹೆಣ್ಣು ಮಕ್ಕಳು ಮತ್ತು ಮಹಿಳೆಯರಿಗಾಗಿ 'ನವದುರ್ಗಿ' ತಂಡ ರಚನೆ ಮಾಡಿದ್ದು, ಈ ತಂಡವು ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಬಗ್ಗೆ ಹೆಚ್ಚಿನ ನಿಗಾವಹಿಸುವ ಮೂಲಕ ಅವರ ಸುರಕ್ಷತೆ ಮತ್ತು ಹೆಚ್ಚಿನ ಭದ್ರತೆಗಾಗಿ ಕಾರ್ಯನಿರ್ವಹಿಸುತ್ತಿದೆ. ಹೆಣ್ಣು ಮಕ್ಕಳು ಹಾಗೂ ಮಹಿಳೆಯರು ಯಾವುದೇ ಸಮಸ್ಯೆ ಉಂಟಾದಲ್ಲಿ ತುರ್ತು ಸಹಾಯವಾಣಿ ಸಂಖ್ಯೆ 112 ಗೆ ಸಂಪರ್ಕಿಸಬಹುದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಮಾತನಾಡಿ, ವಿದ್ಯಾರ್ಥಿ ಜೀವನವು ಅತ್ಯಂತ ಅಮೂಲ್ಯವಾದದ್ದು. ಯಾವುದೇ ಸಮಯವನ್ನು ವ್ಯರ್ಥ ಮಾಡದೇ ಚೆನ್ನಾಗಿ ವಿದ್ಯಾಭ್ಯಾಸ ಮಾಡಿ ಸಮಾಜದಲ್ಲಿ ಉತ್ತಮ ಸ್ಥಾನ ಪಡೆದು ಗೌರವದಿಂದ ಬದುಕಬೇಕು. ಬಾಲ್ಯವಿವಾಹ ಮತ್ತ ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆಗೊಳಿಸಿ ಸುಂದರವಾದ ಸಮಾಜ ನಿರ್ಮಾಣ ಮಾಡಲು ನಾವೆಲ್ಲರೂ ಕೈಜೋಡಿಸಬೇಕು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಅವರು ಬಾಲ್ಯವಿವಾಹದ ಕುರಿತು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಎಎಸ್‌ಪಿ ರವಿಕುಮಾರ್, ಬಳ್ಳಾರಿ ನಗರ ಉಪವಿಭಾಗ ಡಿಎಸ್‌ಪಿ ಚಂದ್ರಕಾಂತ ನಂದಾರೆಡ್ಡಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷ ಡಾ.ಹೆಚ್.ಸಿ.ರಾಘವೇಂದ್ರ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ವಕೀಲರಾದ ಶಿವಲೀಲಾ, ಸಂಚಾರಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಅಯ್ಯನಗೌಡ ಪಾಟೀಲ್, ಸೈಬರ್ ಕ್ರೈಂ ಪೊಲೀಸ್ ಅಧಿಕಾರಿ ಸುಭಾಶ್ ಚಂದ್ರ, ರೀಡ್ಸ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಸ್ವಾಮಿ ಸೇರಿದಂತೆ ರೀಡ್ಸ್ ಸಂಸ್ಥೆಯ ಸಿಬ್ಬಂದಿ ವರ್ಗ, ಮಕ್ಕಳ ವಿಶೇಷ ಪೊಲೀಸ್ ಘಟಕದ ಸಿಬ್ಬಂದಿಗಳು ಹಾಗೂ ವಿವಿಧ ಇಲಾಖೆಯ ಸಿಬ್ಬಂದಿಗಳು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

**ಗಮನ ಸೆಳೆದ ' ಜಾಗೃತಿ ಜಾಥಾ:**

ಬಾಲ್ಯವಿವಾಹ ನಿಷೇಧ, ಲಿಂಗ ತಾರತಮ್ಯ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ನಗರದಲ್ಲಿ ಆಕರ್ಷಕ ಜಾಥಾ ನಡೆಯಿತು. ಜಾಥಾದಲ್ಲಿ ಬಾಲ್ಯವಿವಾಹ ಮತ್ತು ಶಿಕ್ಷಣದ ಬಗ್ಗೆ ಕುರಿತ ವಿವಿಧ ಫಲಕಗಳನ್ನು ಹಿಡಿದ ವಿದ್ಯಾರ್ಥಿಗಳು ಗಮನ ಸೆಳೆದರು.

### ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಸನ್ಮಾನ

## ಬಾಲ್ಯದ ಕನಸು ಬಾಗಲಕೋಟೆಯಲ್ಲಿ ನನಸು–ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.20– ಜಿಲ್ಲಾಧಿಕಾರಿಯಾಗಬೇಕೆಂಬ ಬಾಲ್ಯದ ಕನಸನ್ನು ಬಾಗಲಕೋಟೆ ಜಿಲ್ಲಾಧಿಕಾರಿಯಾಗುವ ಮೂಲಕ ನನಸು ಮಾಡಿಕೊಂಡೆ ಎಂದು ನಿಕಟಪೂರ್ವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ತಮಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಾಸನ ಜಿಲ್ಲೆಯ ಒಂದು ಪುಟ್ಟ ಗ್ರಾಮದಲ್ಲಿ ಹುಟ್ಟಿ ಕನ್ನಡ ಮಾಧ್ಯಮದಲ್ಲಿಯೇ ಪ್ರಾಥಮಿಕ ಶಿಕ್ಷಣ ಕಲಿಯುವಾಗ 5ನೇ ತರಗತಿಯಲ್ಲಿದ್ದಾಗಲೇ ಜಿಲ್ಲಾಧಿಕಾರಿ ಆಗುವ ಕನಸ ಕಂಡಿದ್ದೆ. ಅದು ಈಡೇರಿ ಪ್ರಥಮ ಬಾರಿಗೆ ಬಾಗಲಕೋಟೆ ಜಿಲ್ಲಾಧಿಕಾರಿಯಾಗಿ ನೇಮಕಗೊಂಡು ಇಲ್ಲಿ ಎರಡು ವರ್ಷ ಕಳೆದ ಸವಿನೆನಪು ಜೀವನದುದ್ದಕ್ಕೂ ಉಳಿಯಲಿದೆ ಎಂದರು.

ಎರಡು ವರ್ಷಗಳ ಅವಧಿಯಲ್ಲಿ ಜಿಲ್ಲೆಯ ಅಧಿಕಾರಿ ವರ್ಗ ಹಾಗೂ ಜನರು ಹೆಚ್ಚಿನ ಪ್ರೀತಿ, ವಿಶ್ವಾಸ ತೋರಿದ್ದಾರೆ. ಯಾರಿಗೂ ನೋವಾಗುವ ರೀತಿಯಲ್ಲಿ ನಡೆದುಕೊಂಡಿಲ್ಲ ಎಂದ ಜಾನಕಿ, ಜಿಪಂ ಸಿಇಓ ಕುರೇರ ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ನನ್ನೊಂದಿಗೆ ಕೈಜೋಡಿಸಿ ಉತ್ತಮ ಆಡಳಿತ ನೀಡುವುದಕ್ಕೆ ಸಹಕರಿಸಿದ್ದಾರೆ ಎಂದು ಹೇಳಿ, ಬಾಗಲಕೋಟೆ ಜಿಲ್ಲೆ ಇನ್ನಷ್ಟು ಪ್ರಗತಿಯತ್ತ ಸಾಗಲಿ ಎಂದು ಹಾರೈಸಿದರು.

ನೂತನ ಜಿಲ್ಲಾಧಿಕಾರಿಂ ಸಂಗಪ್ಪ ಎಂ. ಮಾತನಾಡಿ, ಹುಟ್ಟಿ ಬೆಳೆದ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯಾಗಿರುವುದು ನನ್ನ ಭಾಗ್ಯ. ಹಿಂದಿನ ಜಿಲ್ಲಾಧಿಕಾರಿಗಳ ಜನಪರ ಆಡಳಿತವನ್ನು ಮುಂದುವರೆಸಿಕೊಂಡು ಹೋಗುವುದರ ಜೊತೆಗೆ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಹಿಂದಿನ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಸರಕಾರಿ ನೌಕರರಿಗೆ ವರ್ಗಾವಣೆ ಅನಿವಾರ್ಯ. ಆದರೆ ಆ ಅವಧಿಯಲ್ಲಿ ಮಾಡಿದ ಕಾರ್ಯ ಜನಮಾನಸದಲ್ಲಿ ಉಳಿಯುತ್ತದೆ. ಜಾನಕಿ ಅವರು ಜಿಲ್ಲೆಯ ಅಭಿವೃದ್ಧಿ ವಿಷಯದಲ್ಲಿ ಎಲ್ಲರೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸುತ್ತಿದ್ದರು. ಕ್ಲಿಷ್ಠ ಸಂದರ್ಭಗಳಲ್ಲೂ ಅವರು ತಾಳ್ಮೆಯಿಂದ ಸಮಸ್ಯೆಯನ್ನು ನಿಭಾಯಿಸುವಲ್ಲಿ ನಮಗೆಲ್ಲ ಸಲಹೆ ನೀಡುತ್ತಿದ್ದರು ಎಂದು ಸ್ಮರಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಅನಿಸಿಕೆ ಹೇಳಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಗಲಕೋಟೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಮೀನುಗಾರರಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.20–2025–26ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಜಿಲ್ಲಾ ವಲಯ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಮೀನುಗಾರರಿಗೆ ಉಚಿತವಾಗಿ ಮೀನುಗಾರಿಕಾ ಸಲಕರಣೆ ಕಿಟ್ಟುಗಳನ್ನು ವಿತರಿಸಲಾಗುವುದು.

ಮೀನುಗಾರಿಕೆಯಲ್ಲಿ ಅನುಭವ ಹೊಂದಿರುವ ಅರ್ಹ ಸಾಮಾನ್ಯವರ್ಗ, ಮಹಿಳೆಯರಿಗೆ, ಅಲ್ಪಸಂಖ್ಯಾತರಿಗೆ ಮತ್ತು ಅಂಗವಿಕಲರಿಗೆ ಮೀನು ಮಾರಾಟಕ್ಕೆ ದ್ವಿಚಕ್ರ ವಾಹನ ಖರೀದಿಗೆ ಸಹಾಯ, ರಾಜ್ಯ ವಲಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಮೀನುಗಾರಿಕೆ ಸಲಕರಣೆ ಕಿಟ್ (ಹರಿಗೋಲು,ಹುಟ್ಟು, ಬಲೆ ಜೀವರಕ್ಷಕ ಸಾಧನಗಳನ್ನು) ಉಚಿತವಾಗಿ ವಿತರಿಸುವುದು, ಕೆರೆ ಅಂಚಿನಲ್ಲಿ ಮೀನುಮರಿ ಪಾಲನೆಗೆ ಸಹಾಯ, ಮೀನುಮರಿ ಖರೀದಿಗೆ ಸಹಾಯಧನ ಯೋಜನೆಗಳನ್ನು ಪಾರದರ್ಶಕವಾಗಿ ಹಾಗೂ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಬಾಗಲಕೋಟೆ ಜಿಲ್ಲೆಯ ಅರ್ಹ ಮೀನುಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಗಳ ಸೌಲಭ್ಯ ಪಡೆಯಲು ಮೀನುಗಾರಿಕೆ ಸಹಾಯಕನಿರ್ದೇಶಕರು,ಬಾದಾಮಿ, ಜಮಖಂಡಿ ಕಛೇರಿಗಳಿಂದ ಮಾಹಿತಿ ಹಾಗೂ ಅರ್ಜಿಗಳನ್ನು ಪಡೆದು, ನಿಯಮಾನುಸಾರ ಅವಶ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಜುಲೈ.18 ರೊಳಗೆ ಮೀನುಗಾರಿಕೆ ಸಹಾಯಕನಿರ್ದೇಶಕರು,ಬಾದಾಮಿ, ಜಮಖಂಡಿ ಕಛೇರಿಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಬಾದಾಮಿ, ಜಮಖಂಡಿ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬೇಕೆಂದು ಮೀನುಗಾರಿಕೆ ಇಲಾಖೆ ಉಪನಿರ್ದೇಶಕರಾದ ಅಂಜನಾದೇವಿ. ಟಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ಕಬ್ಬಿನ ಬಾಕಿ ಬಿಲ್ ಪಾವತಿಗೆ ರೈತರ ಆಗ್ರಹ

## ರೈತರೊಂದಿಗೆ ಮಾತುಕತೆ ನಡೆಸಿದ ಜಿಲ್ಲಾಧಿಕಾರಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.20–ರೈತರಿಗೆ ಕಬ್ಬಿನ ಬಿಲ್ ಬಾಕಿ ಕೂಡಲೇ ಪಾವತಿಸಬೇಕು,ನಕಲಿರಸಗೊಬ್ಬರಗಳ ವಿರುದ್ಧ ಕ್ರಮ ತೆಗೆದುಕೊಂಡು ಸಂಬಂಧಪಟ್ಟವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ, ಭಾರತೀಯ ಕಿಸಾನ ಸಂಘ ಜಿಲ್ಲಾ ಘಟಕದ ನೇತೃತ್ವದಲ್ಲಿ ಗುರುವಾರ ರೈತರು ಜಿಲ್ಲಾಡಳಿತ ಭವನ ಎದುರು ಪ್ರತಿಭಟನೆ ನಡೆಸಿದರು.

ಮೆರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ಆಗಮಿಸಿದ ರೈತರನ್ನು ಪೊಲೀಸರು ತಡೆದಾಗ ತೀವ್ರ ಆಕ್ರೋಶ ವ್ಯಕ್ತಪಡಿಸಿದ ರೈತರು ಬ್ಯಾರಿಕೇಡ ತಳ್ಳಿ ನುಗ್ಗಲು ಯತ್ನಿಸಿದರು. ಈ ವೇಳೆ ಪೊಲೀಸರು, ರೈತರ ಮಧ್ಯೆ ಮಾತಿನ ಚಕಮಕಿ ನಡೆಯಿತು. ಕೊನೆಗೆ ರೈತರನ್ನು ಜಿಲ್ಲಾಡಳಿತ ಭವನದ ಒಳಗೆ ಬಿಡಲಾಯಿತು.

ಬಳಿಕ ಜಿ.ಪಂ ಸಭಾಭವನದಲ್ಲಿ ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ರೈತ ಸಂಘದ ಮುಖಂಡ ಈರಪ್ಪ ಹಂಚಿನಾಳ ಮಾತನಾಡಿ, ದೇಶಕ್ಕೆ ಅನ್ನ ಹಾಕುವ ರೈತರಿಗೆ ಒಳಗೆ ಅನುಮತಿ ನೀಡದಿರುವುದು ಸರಿಯಲ್ಲ. ನಮ್ಮ ಪಾಲಿನ ಹಕ್ಕು ಕೇಳಲು ಬಂದಿದ್ದೇವೆ. ರೈತರು ಕಬ್ಬು ಕಳುಹಿಸಿ 6 ತಿಂಗಳಾದರೂ ಬಿಲ್ ಹಾಕಿಲ್ಲ. ಸಾಲ ನೀಡಿದ ಬ್ಯಾಂಕಗಳು ರೈತರ ಮನೆ ಮುಂದೆ ನಿಂತು ಒತ್ತಡ ಹಾಕುತ್ತಿವೆ. ಮಕ್ಕಳ ಶಾಲೆ ಶುಲ್ಕ ತುಂಬಲು ಸಹ ಹಣವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯತಿ ಮಾಜಿ ಉಪಾಧ್ಯಕ್ಷ ಮುತ್ತಪ್ಪ ಕೋಮಾರ ಮಾತನಾಡಿ, ಜಿಲ್ಲೆಯಲ್ಲಿ 14 ಸಕ್ಕರೆ ಕಾರ್ಖಾನೆಗಳ ಪೈಕಿ 13 ಕಾರ್ಖಾನೆಗಳು ಕಬ್ಬು ನುರಿಸಿವೆ. ಕೆಲವು ಕಾರ್ಖಾನೆಗಳು ಬಿಲ್ ನೀಡಲು ವಿಳಂಬ ಮಾಡಿವೆ. ಅಲ್ಲದೇ ನ್ಯಾಯಾಲಯಕ್ಕೆ ಹೋಗಿ ಬಿಲ್ ಪಾವತಿ ಮಾಡದಿರಲು ತಡೆ ತಂದಿದ್ದಾರೆ. ಕಬ್ಬು ಆಯುಕ್ತರನ್ನು ಬಾಗಲಕೋಟೆಗೆ ಆಹ್ವಾನಿಸಿ ಸಭೆ ನಡೆಸಲು ಮನವಿ ಮಾಡಲಾಗಿತ್ತು. ಇದುವರೆಗೂ ಅದು ಆಗಿಲ್ಲ ಎಂದರು. ಕೆಲಸ ಆಗಿಲ್ಲ.

ಜಿಲ್ಲಾಧಿಕಾರಿ ಸಂಗಮೇಶ ಎಂ. ಮಾತನಾಡಿ, ತಮ್ಮ ಬೇಡಿಕೆಗಳ ಬಗ್ಗೆ ನಿರ್ಲಕ್ಷ್ಯ ಮಾಡಿಲ್ಲ. ಸಮಸ್ಯೆ ಆಲಿಸಲು ಜಿಲ್ಲಾಡಳಿತ ಮುಕ್ತವಾಗಿದೆ. 20 ದಿನಗಳ ಕಾಲವಕಾಶ ನೀಡಿ, ಆಯುಕ್ತರೊಂದಿಗೆ ಮಾತನಾಡಿ ಸಭೆ ನಿಗದಿ ಮಾಡಲಾಗುವುದು. ನ್ಯಾಯಾಲಯದ ವಿಚಾರ ಆಗಿರುವದರಿಂದ ತಕ್ಷಣಕ್ಕೆ ಯಾವುದೇ ನಿರ್ಧಾರ, ಭರವಸೆ ನೀಡುವುದು ಕಷ್ಟಕರ. ಈಗ ಅಧಿಕಾರ ವಹಿಸಿಕೊಂಡಿದ್ದು, ಸಮಯ ಕೊಡಿ ಎಂದು ಹೇಳಿದರು.

ಆಹಾರ ಇಲಾಖೆ ಅಧಿಕಾರಿ ಶ್ರೀಶೈಲ ಕಂಕನವಾಡಿ ಮಾತನಾಡಿ, ಜಿಲ್ಲೆಯಲ್ಲಿ 13 ಸಕ್ಕರೆ ಕಾರ್ಖಾನೆಗಳು 1.5 ಲಕ್ಷ ಕೋಟಿ ಮೆಟ್ರಿಕ್ ಟನ್ ಕಬ್ಬು ನುರಿಸಿವೆ. ಹಂತ ಹಂತವಾಗಿ ಬಿಲ್ ಪಾವತಿಯಾಗಿ ಸದ್ಯ 98 ಕೋಟಿ ರೂ. ಮಾತ್ರ ಬಾಕಿ ಉಳಿದಿದೆ. ಅದರಲ್ಲೂ ನಾಲ್ಕು ಸಕ್ಕರೆ ಕಾರ್ಖಾನೆಗಳು ಮಾತ್ರ ಕಬ್ಬಿನ ಬಿಲ್ ಬಾಕಿ ಉಳಿಸಿಕೊಂಡಿವೆ ಎಂದು ಸಭೆಗೆ ಮಾಹಿತಿ ನೀಡಿದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಸಿಇಓ ಶಶಿಧರ ಕುರೇರ, ಡಿವೈಎಸ್‌ಪಿ ಗಜಾನನ ಹೊಸಳ್ಳಿ, ರೈತ ಮುಖಂಡರಾದ ಪರಶುರಾಮ ಮಂಟೂರ, ಗೋವಿಂದಪ್ಪ ಮೆಟಗುಡ್ಡ, ಬಸಪ್ಪ ಸಂಗಣ್ಣವರ, ಹುಸೇನ ಮೂಲಾದಾರ, ಗೋವಿಂದಪ್ಪ ಬೆಳಕಟ್ಟಿ, ಯಲ್ಲಪ್ಪ ಹೆಗಡೆ ಇತರರು ಇದ್ದರು.

## ಮಕ್ಕಳಿಗೆ ಅಗತ್ಯದ ಸೌಲತ್ತುಗಳನ್ನು ಒದಗಿಸಲು ಶ್ರಮಿಸುವೆ :ಶರಣಗೌಡ ಪಾಟೀಲ್ ಬಯ್ಯಾಪುರ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು: ಕೆಕೆಆರ್ ಡಿಬಿ ಅನುದಾನದಲ್ಲಿ ನಿರ್ಮಿಸಿದ ಶಾಲಾ ಕೊಠಡಿಯನ್ನು ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ ಕಲಿಕೆಗೆ ಶುಕ್ರವಾರ ಸಮರ್ಪಣೆ ಮಾಡಿದರು. ಈ ವೇಳೆ ಮಾತನಾಡಿದ ಅವರು, ಲಿಂಗಸೂಗೂರು ಕ್ಷೇತ್ರದಲ್ಲಿ ಶೈಕ್ಷಣಿಕ ಪ್ರಗತಿಗೆ ಅಗತ್ಯ ಸೌಲತ್ತುಗಳನ್ನು ಒದಗಿಸಲಾಗುತ್ತಿದೆ. ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಅನೇಕ ಕಡೆ ಮಕ್ಕಳಿಗೆ ಅಗತ್ಯದ ಸೌಲತ್ತುಗಳನ್ನು ಒದಗಿಸಲು ಶ್ರಮಿಸುವೆ ಎಂದು ಹೇಳಿದರು. ಲಿಂಗಸೂಗೂರು ತಾಲೂಕಿನಲ್ಲಿ ಮಕ್ಕಳಿಗೆ ಸರಿಯಾದ ಶಿಕ್ಷಣ ದೊರೆಯುವ ಜೊತೆ–ಗೆ ಗ್ರಾಮಗಳಲ್ಲಿ ಬೆಳಕು, ರಸ್ತೆ ಸೇರಿದಂತೆ ಸೌಕರ್ಯಗಳನ್ನು ಒದಗಿಸಲು ಸರ್ಕಾರದೊಂದಿಗೆ ನಿರಂತರ ಪ್ರಯತ್ನ ಮಾಡುವೆ ಎಂದರು.

ಈ ವೇಳೆ ನಗರ ಯೋಜನ ಪ್ರಾಧಿಕಾರದ ಅಧ್ಯಕ್ಷ ಭೂಪಣಗೌಡ ಕರಡಕಲ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಮುಖಂಡರಾದ ಡಿ.ಜಿ. ಗುರಿಕಾರ. ಜೀವಲೆಪ್ಪ ನಾಯ್ಕ, ಆರ್ ಡಿಸಿಸಿ ಬ್ಯಾಂಕ ನಿರ್ದೇಶಕ ಬಸವರಾಜ ಗೌಡ ಗಣೇಕಲ್, ಗ್ರಾಮ ಪಂಚಾಯತ್ ಅಧ್ಯಕ್ಷೆ ಸೋಮಮ್ಮ ನಾಯಕ್, ಶಿವರಡ್ಡಿ ಪಾಟೀಲ್ ಸೇರಿದಂತೆ ಗ್ರಾಮಸ್ಥರು ಇದ್ದರು.

## ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರದ ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ವೀರರಾಣಿ ಕಿತ್ತೂರ ಚೆನ್ನಮ್ಮಳ ಪುತ್ಥಳಿ ಸ್ಥಾಪನೆಯ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ವೀರರಾಣಿ ಕಿತ್ತೂರು ಚೆನ್ನಮ್ಮ ಪುತ್ಥಳಿ ನಿರ್ಮಾಣ ಸಮಿತಿ ವತಿಯಿಂದ ಹಮ್ಮಿಕೊಂಡಿರುವ ಚೆನ್ನಮ್ಮಾಜಿ ಭಾವಚಿತ್ರದ ಭವ್ಯ ಮೆರವಣಿಗೆ ಶುಕ್ರವಾರ ವಿಜೃಂಭಣೆಯಿಂದ ಜರುಗಿತು. ಸಂಜೆ 5–00 ಘಂಟೆ ಪಟ್ಟಣದ ಚೆನ್ನಮ್ಮ ವೃತ್ತ ದಲ್ಲಿರುವ ಚೆನ್ನಮ್ಮಾಜಿಯ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಹೂಮಾಲೆ ಅರ್ಪಿಸಿ ಆರಂಭವಾದ ಮೆರವಣಿಗೆ ಕಾರ್ಯಕ್ರಮಕ್ಕೆ ನಾವದಗಿ ಬ್ರಹನ್ಮಠದ ಷ.ಬ್ರ. ರಾಜಗುರು ರಾಜೇಂದ್ರ ಒಡೆ–ಯರ್ ಶಿವಾಚಾರ್ಯರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಕಿತ್ತೂರಿನ ವೀರರಾಣಿ ಚೆನ್ನಮ್ಮ ಶೌರ್ಯ ಮತ್ತು ಸ್ವಾಭಿಮಾನದ ಪ್ರತೀಕವಾಗಿದ್ದಾಳೆ ಕಿತ್ತೂರು ನೋಡನ್ನು ಉಳಿಸಿಕೊಳ್ಳಲು ಬ್ರಿಟಿಷರ ವಿರುದ್ಧ ಹೋರಾಡಿದ ಪ್ರಥಮ ಮಹಿಳೆ. ಅವಳ ಬದುಕಿನ ಆದರ್ಶಗಳು ನಮಗೆಲ್ಲರಿಗೂ ಮಾದರಿ ಆಗಬೇಕಾಗಿದೆ, ಅವಳ ಪುತ್ಥಳಿ ಪ್ರತಿಷ್ಠಾನದ ದ್ವಿತೀಯ ವಾರ್ಷಿಕೋತ್ಸವ ಆಚರಿಸುತ್ತಿರುವುದು ಸಂತೋಷದ ಸಂಗತಿಯಾಗಿದೆ ಎಂದರು. ಮೆರವಣಿಗೆ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಜ್ಯೋತಿಷ್ಯ ರತ್ನ ಪರಮ ಪೂಜ್ಯ ರಾಮಲಿಂಗಯ್ಯ ಮಹಾಸ್ವಾಮಿಗಳು ವಹಿಸಿದ್ದರು. ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪೂಜ್ಯ ಪ್ರಭುಲಿಂಗ ಶರಣರು ನೇತೃತ್ವ ವಹಿಸಿದ್ದರು. ಕಿತ್ತೂರು ಚೆನ್ನಮ್ಮ ಸರ್ಕಲ್ ದಿಂದ ಸಕಲವಾದ್ಯ ಮೇಳ ಹಾಗೂ ಜಯ ಘೋಷಗಳೊಂದಿಗೆ ಆರಂಭವಾದ ಮೆರವಣಿಗೆಯು ಶ್ರೀ ಬಸವೇಶ್ವರ ವೃತ್ತ, ಮಹಾರಾಣಾ ಪ್ರತಾಪ್ ಸಿಂಹ ವೃತ್ತ, ಶಿವಾಜಿ ವೃತ್ತ, ಕತ್ರಿ ಬಜಾರ್ ಮಾರ್ಗವಾಗಿ ರಾಜವಾಡೆಗೆ ತಲುಪಿ ನಂತರ ಅಲ್ಲಿ ಧರ್ಮಸಭೆ ಜರುಗಿತು. ಮೆರವಣಿಗೆಯಲ್ಲಿ ವೀರರಾಣಿ ಕಿತ್ತೂರ ಚೆನ್ನಮ್ಮ ಪುತ್ಥಳಿ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷರಾದ ಚಂದ್ರಶೇಖರ ಪಾಟೀಲ, ಅಧ್ಯಕ್ಷೆ ನೀಲಮ್ಮ ಎಸ್. ಪಾಟೀಲ, ಉಪಾಧ್ಯಕ್ಷ ಕಲ್ಲಪ್ಪ ಪಾಟೀಲ, ಪ್ರಧಾನ ಕಾರ್ಯದರ್ಶಿ ಎಂ.ಬಿ.ಕೋಟಿ, ಕಾರ್ಯದರ್ಶಿ ಬಿ.ಕೆ.ಪಾಟೀಲ, ವಚನ ಸಾಹಿತ್ಯ ಸಮಿತಿಯ ಅಧ್ಯಕ್ಷ ಮಹಾಂತೇಶ ಮುರಾಳ, ಅಶೋಕ ಚಿನಗುಡಿ, ವಿಶ್ವನಾಥ ಪಾಟೀಲ, ಸಮಾಜದ ಗಣ್ಯರು ಹಿರಿಯರು ಹಾಗೂ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಇದ್ದರು.

## ಜೂನ್ 21ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 20 – ಇಲ್ಲಿನ ಜೆಸ್ಕಾಂ ಇಲಾಖೆಯ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1 ಕಚೇರಿಯಲ್ಲಿ ಜೂನ್ 21ರ ಬೆಳಗ್ಗೆ 11 ರಿಂದ 1 ಗಂಟೆವರೆಗೆ ಗ್ರಾಹಕರ ಸಂವಾದ ಸಭೆ ಏರ್ಪಡಿಸಲಾಗಿದೆ. ವಿದ್ಯುತ್ ಗ್ರಾಹಕರು ಹಾಜಾರಾಗಿ ತಮ್ಮ ವಿದ್ಯುತ್ ದೂರುಗಳ ಬಗ್ಗೆ ಸಭೆಯಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಇಲಾಖೆಯ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳ ಗೋಳು ಕೇಳುವರಿಲ್ಲ ಭೀಮರಾಯ ಪೂಜಾರಿ ಅಧಿಕಾರಿಗಳಿಗೆ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ಶಹಪುರ: ತಾಲ್ಲೂಕಿನ ಹೊಸಕೆರ ಗ್ರಾಮಕ್ಕೆ ಸಮರ್ಪಕವಾಗಿ ಬಸ್ ಸೇವೆ ಒದಗಿಸುವಂತೆ ಹಾಗೂ ಕಡ್ಡಾಯವಾಗಿ ಎಲ್ಲಾ ಬಸ್ ಗಳನ್ನು ನಿಲ್ಲಿಸುವಂತೆ ಒತ್ತಾಯಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ ಎಸ್ ಎಫ್ ಐ ನೇತೃತ್ವದಲ್ಲಿ ವಿದ್ಯಾರ್ಥಿಗಳು ಡೀಪೋ ಮ್ಯಾನೇಜರ್ ಗೆ ಪತ್ರಿಕಾ ಮತ್ತು ಮಾಧ್ಯಮದ ಮುಖಂತರ ಮನವಿ ಮಾಡಿದ್ರು ಒಂದು ವೇಳೆ ನಿರ್ಲಕ್ಷ ತೋರಿದ್ರೆ ಉಗ್ರವಾದ ಪ್ರತಿಭಟನೆ ಮಾಡಬೇಕಾಗುತ್ತೆ ಎಂದು ಯಾಚ್ಚರಿಕೆ ನೀಡಿದರು.

ಇಂಥ ಆಧುನಿಕ ಜಗತ್ತಿನಲ್ಲಿ ಮಕ್ಕಳಿಗೆ ಹಳ್ಳಿಗಳಿಂದ ಪಟ್ಟಣಕ್ಕೆ ಶಾಲೆ ಕಲಿಸುವುದು ಅಪರೂಪವಾಗಿದೆ ಇಲ್ಲಿನ ಸ್ಥಳೀಯ ಶಾಸಕರು ಇತ್ತ ಗಮನಹರಿಸಿ ಶಾಲಾ ವಿದ್ಯಾರ್ಥಿಗಳಿಗೆ ಅನುಮಾಡಿ ಕೊಟ್ಟು ಕೂಡಲೇ ಬಸ್ ಒದಗಿಸುವಂತೆ ಎಸ್ ಎಫ್ ಐ ಇಮಾಮ್ ಸಾಬ್ ನದಾಫ್ ಹಾಗೂ ಅವರ ಬಳಗ ಆಗ್ರಹಿಸಿದರು. ಹಾಗೂ ಹೊಸ್ಕೆರ ಮಾರ್ಗವಾಗಿ ಹೋಗುವ ಎಲ್ಲಾ ಬಸ್ ಗಳನ್ನು ನಿಲ್ಲಿಸಿ ಬೇಕು ಎಂದು ವಿದ್ಯಾರ್ಥಿಗಳು ಅಗ್ರಹಿದರು

ಈ ಸಂದರ್ಭದಲ್ಲಿ ಎಸ್ ಎಫ್ ಐ ಜಿಲ್ಲಾ ಸಂಚಾಲಕರು ಇಮಾಮ ಸಾಬ್ ನದಾಫ್ ಹಾಗೂ ಗ್ರಾಮ ಘಟಕದ ಅಧ್ಯಕ್ಷರದ ಶರಣುಗೌಡ ಕಾರ್ಯದರ್ಶಿ ಗೀತಾ ಮತ್ತು ಪದಾಧಿಕಾರಿಗಲಾದ ಗಂಗಾ, ಬಸವರಾಜ್, ವಿದ್ಯಾಶ್ರೀ ಮತ್ತು ಅನೇಕ ವಿದ್ಯಾರ್ಥಿಗಳು ಹಾಜರಿದ್ದರು.

## ರಾಯಚೂರು ಜಿಲ್ಲೆಯಲ್ಲಿ 11 ಆಶಾ ಕಿರಣ ದೃಷ್ಠಿ ಕೇಂದ್ರ ಸ್ಥಾಪನೆ –ಸಿಇಓ ಪಾಂಡ್ವೆ ರಾಹುಲ್ ತುಕಾರಾಮ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 20 (ಕರ್ನಾಟಕವಾರ್ತೆ): ರಾಯಚೂರು ಜಿಲ್ಲೆಯಲ್ಲಿ 11 ಆಶಾ ಕಿರಣ ದಷ್ಠಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಅಂದತ್ವ ಸಮಸ್ಯೆಯಿಂದ ಬಳಲುತ್ತಿರುವವುರು ಇದರ ಸದುಪಯೋಗಪಡೆದುಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಮ್ ಪಾಂಡ್ವೆ ರವರು ತಿಳಿಸಿದ್ದಾರೆ.

ಮಾನ್ಯ ಮುಖ್ಯಮಂತ್ರಿಗಳು ಹಾಗೂ ಆರೋಗ್ಯ ಸಚಿವರ ಆಶಾ ಕಿರಣ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಆಶಾ ಕಿರಣ ಕೇಂದ್ರಗಳನ್ನು ಸ್ಥಾಪಿಸಲಾಗಿರುವ ಪೈಕಿ ರಾಯಚೂರು ಜಿಲ್ಲೆಗೆ 11 ಆಶಾ ಕಿರಣ ದೃಷ್ಠಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 1, ರಿಮ್ಸ್ ಭೋಧಕ ಆಸ್ಪತ್ರೆ, 4, ತಾಲೂಕ ಸಾರ್ವಜನಿಕ ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದಗಳಲ್ಲಿ 6 ಕಡೆ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಕೇಂದ್ರಗಳಲ್ಲಿ ಜಿಲ್ಲೆಯಲ್ಲಿರುವ ಖಾಯಂ ನೇತ್ರಾಧಿಕಾರಿಗಳನ್ನು ಶಾಶತ್ವ ನಿಯೋಜನೆ ಮಾಡಿ, ಕೇಂದ್ರಗಳಿಗೆ ಸ್ಥಳೀಯ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಂದ ಪ್ರಾಥಮಿಕ ಆರೋಗ್ಯ ಸುರಕ್ಷ ಅಧಿಕಾರಿಗಳು ಮತ್ತು ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರು ಮನೆ ಮನೆ ಭೇಟಿ ನೀಡಿ ದೃಷ್ಠಿ ದೋಷ ಹೊಂದಿದವರನ್ನು ತಪಾಸಣೆಗೆ ಕಳುಹಿಸುವ ವ್ಯವಸ್ಥೆ ಮಾಡಿದ್ದಾರೆ.

ತಪಾಸಣೆ ಸಮಯದಲ್ಲಿ ದೃಷ್ಠಿ ದೋಷ ಕಂಡುಬಂದ ವಯೋ ವೃದ್ದರಿಗೆ 634 ಕನ್ನಡಕಗಳನ್ನು ವಿತರಣೆ ಮಾಡಲಾಗಿರುತ್ತದೆ, ಕಣ್ಣಿನ ಪೊರೆ ಕಂಡುಬಂದವರಿಗೆ ಉಚಿತ ಶಸ್ತ್ರ ಚಿಕಿತ್ಸೆ ಮಾಡಲಾಗುತ್ತದೆ. ರಾಷ್ಟ್ರೀಯ ಅಂದತ್ವ ನಿಯಂತ್ರಣಾ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಅಂದತ್ವ ಪ್ರಗತಿಯ ಪರಿಶೀಲನೆಯಲ್ಲಿ ಜಿಲ್ಲೆಯ ಒಟ್ಟು 6920 ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯ ಗುರಿ ಇರುತ್ತದೆ. ಅದರನ್ವಯ ಸರ್ಕಾರಿ ಆಸ್ಪತ್ರೆ ಮತ್ತು ಖಾಸಗಿ ಸಂಸ್ಥೆಗಳು ಹಾಗೂ ಒಡಬಂಡಿಕೆ ಹೊಂದಿರುವ ಎನ್.ಜಿ.ಓ ಕಣ್ಣಿನ ಆಸ್ಪತ್ರೆಗಳು ಮತ್ತು ನಗರದ ಖಾಸಗಿ ಆಸ್ಪತ್ರೆಗಳು ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ.

ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ಹೊಂದಿದ ವಿವರ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ರವರು ಮಾತನಾಡಿ, ರಿಮ್ಸ್ ಆಸ್ಪತ್ರೆ ರಾಯಚೂರಿನಲ್ಲಿ ಒಟ್ಟು 1567, ತಾಲೂಕ ಆಸ್ಪತ್ರೆ ಮಾನ್ವಿ 688 ಮತ್ತು ಸಿಂಧನೂರುನಲ್ಲಿ 433, 2024–25 ಸಾಲಿನಲ್ಲಿ ಒಡಂಬಡಿಕೆಯಾದ ಎನ್ ಜಿಓ ಸಂಸ್ಥೆಗಳಾದ ಶಂಕರ್ ಐ ಆಸ್ಪತ್ರೆ ಶಿವಮೊಗ್ಗ ಇವರು ಸಿಂಧನೂರು ಮತ್ತು ಲಿಂಗಸೂಗುರುನಲ್ಲಿ ಒಟ್ಟು 1082 , ಜನಹಿತ ಐ ಕೇರ್ ದೇವದುರ್ಗ ಮತ್ತು ಮಾನ್ವಿಯಲ್ಲಿ ಒಟ್ಟು 1521, ಶ್ರೀ ವಿವೇಕನಂದ ಸೇವಾ ಆಶ್ರಮ ಬೆಂಗಳೂರು ಇವರು 1411, ನಗರದ ಖಾಸಗಿ ಆಸ್ಪತ್ರೆಗಳು, ನವೋದಯ ಮೆಡಿಕಲ್ ಕಾಲೇಜ್, ಎಂ.ಕೆ.ಬಿ.ಭಂಡಾರಿ, ದೃಷ್ಠಿ ಐ ಕೇರ್ ಆಸ್ಪತ್ರೆ ಎಂ.ಎಂ.ಜ್ಯೋಷಿ ಇವರು 264 ಕಣ್ಣಿನ ಪೊರೆಗಳ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 6966 ಉಚಿತ ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆ ಮಾಡಿಸಲಾಗಿದೆ.

ಆರೋಗ್ಯ ಕೇಂದ್ರದ ತಪಾಸಣೆ ವೇಳೆ 9 ಮಕ್ಕಳಲ್ಲಿ ಕಣ್ಣಿನ ಪೊರೆ ಕಂಡುಬಂದಿದ್ದು ಅದರಲ್ಲಿ ಒಟ್ಟು 8 ಮಕ್ಕಳಿಗೆ ಶಂಕರ ಐ ಆಸ್ಪತ್ರೆ ಶಿವಮೊಗ್ಗ ಇವರು ಶಿವಮೊಗ್ಗ ಅವರ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ಮಾಡಿಸಿ ಕಳುಹಿಸಿದ್ದಾರೆ.

ರಾಯಚೂರು ಜಿಲ್ಲೆಯಲ್ಲಿ ಆಶಾ ಕಿರಣ ಕಾರ್ಯಕ್ರಮದ ಅಡಿಯಲ್ಲಿ ಶಾಲಾ ಮಕ್ಕಳ ದೃಷ್ಠಿ ದೋಷ ತಪಾಸಣೆಗಾಗಿ ಒಟ್ಟು 13,500 ಗುರಿ ಇದೆ. ಅದರನ್ವಯ ಜಿಲ್ಲೆಯಲ್ಲಿ ಒಟ್ಟು ಸರಕಾರಿ ಶಾಲಾ ಮಕ್ಕಳು 2,61,889 ಮತ್ತು ಅರೇ ಸರಕಾರಿ 23,644 ಇದ್ದು, ಶಾಲಾ ಮಕ್ಕಳಿಗೆ ಆರೋಗ್ಯ ಕೇಂದ್ರದಲ್ಲಿರುವ 12 ನೇತ್ರಾಧಿಕಾರಿಗಳ ಮುಖಾಂತರ ಮತ್ತು ಆರ್.ಬಿ.ಎಸ್.ಕೆ ಯೋಜನೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 12 ನೇತ್ರಾಧಿಕಾರಿಗಳ ಮುಖಾಂತರ ಶಾಲಾ ಮಕ್ಕಳಿಗೆ ನೇತ್ರಾ ಪರೀ–ಕ್ಷೆ ಮಾಡಿದಾಗ ಅದರಲ್ಲಿ ಒಟ್ಟು 6981 ದೃಷ್ಠಿ ದೋಷ ಹೊಂದಿರುವ ಮಕ್ಕಳು ಕಂಡುಬಂದಿರುತ್ತಾರೆ. ದೃಷ್ಠಿ ದೋಷ ಕಂಡುಬಂದ ಮಕ್ಕಳಿಗೆ ಆಶಾ ಕಿರಣ ಅಪ್ಲಿಕೇಷನ್ ಮೂಲಕ 4276 ಕನ್ನಡಕ ವಿತರಣೆ ಮಾಡಲಾಗಿರುತ್ತದೆ.

ಇನ್ನುಳಿದ ಕನ್ನಡಕಗಳು 2025–26ನೇ ಸಾಲಿನಲ್ಲಿ ಶಾಲೆ ಪ್ರಾರಂಭವಾದ ಮಕ್ಕಳಿಗೆ ವಿತರಣೆ ಮಾಡಲಾಗುತ್ತದೆ.

2024–25ನೇ ಸಾಲಿನಲ್ಲಿ ಆಶಾ ಕಿರಣ ಯೋಜನೆಯನ್ನು ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಿದ್ದು. ಅದರಂತೆ ಎಲ್ಲಾ ಆಶಾ ಕಾರ್ಯಕರ್ತರು ಮನೆ ಮನೆ ಭೇಟಿ ನೀಡಿ, ದೃಷ್ಟಿ ತಪಾಸಣೆ ಕೈಗೊಂಡಿರುತ್ತಾರೆ, ಇದರಲ್ಲಿ ದೃಷ್ಟಿ ದೋಷ ಕಂಡುಬಂದಿರುವ ಪಲಾನುಭವಿಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಲ್ಲಿ ನೇತ್ರಾಧಿಕಾರಿಗಳಿಂದ ಪುನಃ ತಪಾಸಣೆ ಮಾಡಿ 71 ಸಾವಿರ ದೃಷ್ಟಿ ದೋಷ ಉಳ್ಳವರನ್ನು ಪತ್ತೆ ಹಚ್ಚಲಾಗಿದೆ. ಇದರಲ್ಲಿ ಆರು ಸಾವಿರ ಶಾಲಾ ಮಕ್ಕಳು ಮತ್ತು ವಯೋವೃದ್ಧರು ಇರುತ್ತಾರೆ.

ಇವರೆಲ್ಲರಿಗೆ ಕನ್ನಡಕಗಳು ನೇತ್ರಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರ ಮೂಲಕ ಇದುವರೆಗೆ 40,000 ಜನರಿಗೆ ಹಂಚಲಾಗಿರುತ್ತದೆ, ಇನ್ನುಳಿದವರಿಗೆ ಕೂಡ ಹಂಚಿಕೆಯು ಪ್ರಗತಿಯಲ್ಲಿರುತ್ತದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿರುತ್ತಾರೆ.

# ಸ್ವಪಕ್ಷದ ಶಾಸಕರಿಂದಲೇ ಭ್ರಷ್ಟಾಚಾರ ಆರೋಪ

## ಸಚಿವ ಝಮೀರ್ ಅಹ್ಮದ್ ರಾಜೀನಾಮೆ ನೀಡಲಿ : ಬಾಲರಾಜ್ ಗುತ್ತೇದಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.20: 'ಕಾಂಗ್ರೆಸ್ ಸರ್ಕಾರದ ಆಡಳಿತ ವ್ಯವಸ್ಥೆ ಭ್ರಷ್ಟಾಚಾರ, ಲಂಚಗುಳಿತನದಿಂದ ಗಬ್ಬುನಾರುತ್ತಿದೆ' ಎನ್ನುವುದನ್ನು ಕಾಂಗ್ರೆಸ್ ಸಚಿವರು, ಶಾಸಕರೇ ಸಾಕ್ಷಿಸಮೇತ ಬಹಿರಂಗಪಡಿಸಿದ್ದಾರೆ. ಸ್ವತಃ ಕಂದಾಯ ಸಚಿವ ಕೃಷ್ಣ ಬೈ–ರೇಗೌಡರು ಕಂದಾಯ ಇಲಾಖೆಯಲ್ಲಿನ ಲಂಚಾವತಾರದ ಸ್ಥಿತಿ ಕಂಡು ಹತಾಶೆಗೊಂಡಿದ್ದಾರೆ. ಕಚೇರಿಗಳಲ್ಲಿ ಲಂಚದ ದರ ಪಟ್ಟಿಗಳನ್ನು ಲಗತ್ತಿಸಿಬಿಡಿ .."ಎಂದು ತಮ್ಮ ಅಸಹಾಯಕ ಪರಿಸ್ಥಿತಿಯ ವಸ್ತುಸ್ಥಿತಿ ಚಿತ್ರಣವನ್ನು ತೆರೆದಿಟ್ಟು ಅಧಿಕಾರಿ, ಸಿಬ್ಬಂದಿಗಳ ಮೇಲೆ ಹರಿಹಾಯ್ದಿದ್ದಾರೆ. ಮತ್ತೊಂದೆಡೆ ಮುಖ್ಯಮಂತ್ರಿಗಳ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷರೂ ಆದ ಆಳಂದ ಶಾಸಕ ಬಿ.ಆರ್ ಪಾಟೀಲ್‌ಅವರು ಲಂಚ ನೀಡಿದವರಿಗಷ್ಟೇ ವಸತಿ ನಿಗಮಗಳಿಂದ ಮನೆ ವಿತರಣೆಯಾಗುತ್ತಿರುವುದರ ವಿವರ ನೀಡಿದ್ದಾರೆ, ವಸತಿ ಸಚಿವರ ಆಪ್ತ ಕಾರ್ಯದರ್ಶಿಯೊಂದಿಗೆ ನಡೆಸಿರುವ ಸಂಭಾಷಣೆಯ ಆಡಿಯೋ ತುಣುಕುಗಳು ಮಾಧ್ಯಮಗಳನ್ನು ಸೇರಿದೆ. ರಾಜ್ಯ ಸರ್ಕಾರದ ಆಡಳಿತದಲ್ಲಿ ಮಂತ್ರಿ, ಶಾಸಕರುಗಳ ಪರಿಸ್ಥಿತಿಯೇ ಈ ಪರಿಯಾದರೆ, ಇನ್ನು ಜನಸಾಮಾನ್ಯರ ಸ್ಥಿತಿ ಕಲ್ಪನಾತೀತವಾಗಿದೆ ಎಂದು ಕಲಬುರಗಿ ಜಿಲ್ಲಾ ಜೆಡಿಎಸ್ ಪಕ್ಷದ ಅಧ್ಯಕ್ಷ ಬಾಲರಾಜ್ ಗುತ್ತೇದಾರ ಕಾಂಗ್ರೆಸ್ ಸರ್ಕಾರದ ವಿರುದ್ದ ಕಿಡಿಕಾರಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಕಾಂಗ್ರೆಸ್ ಸರಕಾರದಲ್ಲಿ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಆಗಿದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಕಾಂಗ್ರೆಸ್ ಶಾಸಕ ಬಸವರಾಜ ರಾಯರೆಡ್ಡಿ



ಅವರು ನೀಡಿದ್ದ ಹೇಳಿಕೆಗೆ ಪುಷ್ಟಿ ನೀಡುವಂತೆ ಕಾಂಗ್ರೆಸ್ ಶಾಸಕ ಬಿ.ಆರ್.ಪಾಟೀಲ್‌ಅವರು ವಸತಿ ಸಚಿವ ಝಮೀರ್ ಅಹ್ಮದ್ ಅವರ ಮೇಲೆ ಗಂಭೀರ ಆರೋಪ ಮಾಡಿದ್ದಾರೆ ಎಂದು ತಿಳಿಸಿದ್ದಾರೆ. ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 950 ಮನೆಗಳನ್ನು ಲಂಚ ಪಡೆದು ಹಂಚಿಕೆ ಮಾಡಲಾಗಿದೆ ಎಂದು ಆರೋಪ ಮಾಡಿರುವ ಶಾಸಕ ಬಿ.ಆರ್.ಪಾಟೀಲ್ ಅವರು ತಮ್ಮಲ್ಲಿರುವ ಭ್ರಷ್ಟಾಚಾರದ ಮಾಹಿತಿಯನ್ನು ಬಹಿರಂಗ ಪಡಿಸಿದರೆ ಸರಕಾರವೇ ಅಲ್ಲಾಡುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಸ್ವಪಕ್ಷದ ಶಾಸಕರೇ ಭ್ರಷ್ಟಾಚಾರದ ಆರೋಪ ಮಾಡುತ್ತಿರುವಾಗ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ತಮ್ಮ ಸ್ಥಾನದಲ್ಲಿ ಮುಂದುವರೆಯುವ ಯಾವ ನೈತಿಕತೆ ಉಳಿದಿದೆ? ಎಂದು ಅವರು ಪ್ರಶ್ನಿಸಿದ್ದಾರೆ. ಸಿಎಂ ಸಿದ್ದರಾಮಯ್ಯನವರೇ, ಈ ಕೂಡಲೇ ಸಚಿವ ಝಮೀರ್ ಅಹ್ಮದ್ ಖಾನ್ ಅವರ ರಾಜೀನಾಮೆ ಪಡೆದು ಶಾಸಕ ಬಿ.ಆರ್.ಪಾಟೀಲ್ ಅವರ ಮೊಬೈಲ್ ಕರೆ ಆಡಿಯೋ ಆಧಾರದ ಮೇಲೆ ಹಾಲಿ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೆ ಆದೇಶ ನೀಡಿ ಎಂದು ಅವರು ಒತ್ತಾಯಿಸಿದ್ದಾರೆ. ಖಾತೆ, ಕಂದಾಯ, ಪಹಣಿಯಿಂದಿಡಿದು ಪ್ರತಿಯೊಂದು ಕೆಲಸಕ್ಕೂ ಇಂತಿಷ್ಟು ಲಂಚ ಕೊಟ್ಟೇ ಜನರು ಕೆಲಸ ಮಾಡಿಸಿಕೊಳ್ಳಬೇಕಾದ ಪರಿಸ್ಥಿತಿ ಇದೆ. ಈ ಪರಿಸ್ಥಿತಿ ಯಾವುದೇ ಇಲಾಖೆ ಹೊರತಾಗಿಲ್ಲ, ಮುಖ್ಯಮಂತ್ರಿಗಳ ಕಾರ್ಯಾಲಯ, ಸಚಿವಾಲಯಗಳಿಂದಲೇ ಲಂಚಗುಳಿತನ, ಪರ್ಸೆಂಟೇಜ್ ವ್ಯವಹಾರ ಎಲ್ಲೆ ಮೀರಿದೆ ಎಂದು ಕಾಂಗ್ರೆಸ್ಸಿಗರು ಹೇಳತೊಡಗಿದ್ದಾರೆ. ಒಂದು ಕಡೆ ಬೆಲೆ ಏರಿಕೆಯ ಸಂಕಟ, ಮತ್ತೊಂದು ಕಡೆ ಲಂಚ, ವಸೂಲಿ, ಲೂಟಿಕೋರತನದ ಹಾವಳಿಯಿಂದ ಜನ ಹಾಗೂ ಕರ್ನಾಟಕ ತತ್ತರಿಸುತ್ತಿದೆ, ಸಾಮಾನ್ಯರು ಹಾಗೂ ಬಡಜನರ ಗೋಳು ಹೇಳತೀರದಾಗಿದೆ. ಪಂಚ ಭಾಗ್ಯಗಳನ್ನು ಮುಂದಿಟ್ಟುಕೊಂಡು ತಮ್ಮ ಹುಳುಕುಗಳನ್ನೆಲ್ಲ ಮುಚ್ಚಿಕೊಳ್ಳಲು ಸಿದ್ದರಾಮಯ್ಯ ನವರ ಸರ್ಕಾರ ವ್ಯರ್ಥ ಕಸರತ್ತು ನಡೆಸುತ್ತಿದೆ. ಕಾನೂನು, ಸುವ್ಯವಸ್ಥೆ, ಆರ್ಥಿಕ ಸ್ಥಿತಿ, ಅಭಿವೃದ್ಧಿ ಸಂಪೂರ್ಣ ನೆಲಕಚ್ಚಿದೆ, ಇಂತಹ ಜನದ್ರೋಹಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದ ಬಗ್ಗೆ ಜನ ಹಾದಿ–ಬೀದಿಗಳಲ್ಲಿ ಶಪಿಸುತ್ತಿದ್ದಾರೆ. ಸದ್ಯದಲ್ಲೇ ಜೆಡಿಎಸ್ ಪಕ್ಷ ಸರ್ಕಾರಿ ಕಚೇರಿಗಳಲ್ಲಿ ಜನಸಾಮಾನ್ಯರಿಗೆ ಉಂಟಾಗುತ್ತಿರುವ ತೊಂದರೆ, ಲಂಚಪೀಡನೆಯ ವಿರುದ್ಧ ಹೋರಾಟ ಕೈಗೊತ್ತಿಕೊಳ್ಳಲಿದೆ ಎಂದರು.

# ರಕ್ತದಾನ ಮಾಡುವುದರಿಂದ ಮೂರು ಜನರ ಜೀವ ಕಾಪಾಡಬಹುದು:ಡಾ.ಇಂದ್ರಜಿತ ಶಾ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.20 : ರಕ್ತದಾನವೇ ಶ್ರೇಷ್ಠದಾನವಾಗಿದ್ದು, ಒಬ್ಬರು ರಕ್ತದಾನ ಮಾಡುವುದರಿಂದ ಮೂರು ಜನರ ಜೀವವನ್ನು ಕಾಪಾಡಬಹುದಾಗಿದೆ ಎಂದು ಎಸ್.ವಿ.ಇ.ಟಿ ವೀರಭದ್ರೇಶ್ವರ ಹೋಮಿಯೊಪತಿಕ ಮೆಡಿಕಲ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲ ಡಾ. ಇಂದ್ರಜಿತ ಶಾ ಹೇಳಿದರು.

ಅವರು ಶುಕ್ರವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಆಸ್ಪತ್ರೆ ಬೀದರ, ಶ್ರೀ ವಈರಭದ್ರೇಶ್ವರ ಹೋಮಿಯೋಪತಿಕ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಹುಮನಾಬಾಧ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ವೀರಭದ್ರೇಶ್ವರ ಹೋಮಿಯೊಪತಿಕ ಮೆಡಿಕಲ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ರಕ್ತದಾನಿಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜನರಲ್ಲಿ ರಕ್ತದಾನ ಮಾಡುವುದರಿಂದ ಆರೋಗ್ಯಕ್ಕೆ ತೊಂದರೆಯಾಗುತ್ತದೆಂದು ತಪ್ಪು ತಿಳುವಳಿಕೆ ಇದೆ. ಆದರೆ ರಕ್ತದಾನ ಮಾಡುವುದರಿಂದ ಆರೋಗ್ಯವನ್ನು ಉತ್ತಮ ರೀತಿಯಲ್ಲಿ ಕಾಪಾಡಬಹುದಾಗಿದೆಂದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅನೀಲಕುಮಾರ ಚಿಂತಾಮಣಿ ಮಾತನಾಡಿ, ಯುವಜನತೆಯು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಜೊತೆಗೆ ಎಲ್ಲರಿಗೂ ಅರಿವು ನೀಡಿ, ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಪ್ರೋತ್ಸಾಹಿಸಬೇಕೆಂದು ಹೇಳಿದರು. ಹುಮನಾಬಾದ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಮುಜತಾಬ




ಹುಸ್ಯೆನರವರು ರಕ್ತದಾನ ಮಾಡುವಾಗ ಅನುಸರಿಸಬೇಕಾದ ಮಾರ್ಗಸೂಚಿಯ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಸ್ವಯಂ ಪ್ರೇರಿತವಾಗಿ ಅತೀ ಹೆಚ್ಚು ಬಾರಿ ರಕ್ತದಾನ ಮಾಡಿದ ರಕ್ತದಾನಿಗಳಾದ ಫಾದರ ವಿಕ್ಟೋರಿಯಾರವರು ಎ+ ಗ್ರೂಪನವರಾಗಿದ್ದು (28 ಬಾರಿ), ಆಕಾಶ ತಂದೆ ಸಿದ್ರಾಮೇಶ್ವರರವರು ಎಬಿ+ಗ್ರೂಪನವರಾಗಿದ್ದು (18 ಬಾರಿ), ಸಾತ್ವಿಕಾ, ಒ+ಗ್ರೂಪನವರಾಗಿದ್ದು (02 ಬಾರಿ), ವೀರಭದ್ರೇಶ್ವರ ಹೋಮಿಯೊಪತಿಕ ಮೆಡಿಕಲ ಕಾಲೇಜಿನ ವಿದ್ಯಾರ್ಥಿಗಳಾದ ಆರಿಫ– ಎ+ಗ್ರೂಪನವರಾಗಿದ್ದು (04 ಬಾರಿ) ಮತ್ತು ಇಬ್ರಾಹಿಂ – ಬಿ+ಗ್ರೂಪನವರಾಗಿದ್ದು (04 ಬಾರಿ) ರಕ್ತದಾನ ಮಾಡಿರುವುದಕ್ಕಾಗಿ ಹಾಗೂ ಸ್ವಯಂಪ್ರೇರಿತವಾಗಿ ಮುಂದಾಳ್ವವನ್ನು ವಹಿಸಿ ರಕ್ತದಾನ ಶಿಬಿರಗಳನ್ನು ಆಯೋಜಿಸಿರುವ ಲಕ್ಷ್ಮಿಕಾಂತ ಹಿಂದೊಡ್ಡಿ, ಶಾಂತಕುಮಾರ ಆಕಾಶ ತಂದೆ ಸಿದ್ರಾಮೇಶ್ವರ ಆಯೋಜಕರಿಗೆ ಅಭಿನಂದನಾ ಪತ್ರವನ್ನು ನೀಡಿ, ಸನ್ಮಾನ ಮಾಡಲಾಯಿತ್ತು. ಶಿಬಿರದಲ್ಲಿ 50 ರಕ್ತದಾನಿಗಳು ರಕ್ತದಾನವನ್ನು ಮಾಡಿದರು.

ಕಾರ್ಯಕ್ರಮದಲ್ಲಿ ಎಸ್.ವಿ.ಇ.ಟಿ ಶ್ರೀ. ವೀರಭದ್ರೇಶ್ವರ ಹೋಮಿಯೊಪತಿಕ ಮೆಡಿಕಲ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ. ಇಂದ್ರಜಿತ ಶಾರವರು ಅಧ್ಯಕ್ಷತೆಯನ್ನು ವಹಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳಾದ

ಡಾ.ಅನೀಲಕುಮಾರ ಚಿಂತಾಮಣಿರವರು, ಹುಮನಾಬಾದ ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗಳಾದ ಡಾ. ನಾಗನಾಥ ಹುಲಸೂರೆ, ಹುಮನಾಬಾದ ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ. ಮುಜತಾಬ ಹುಸ್ಯೆನರವರು ಪಾಲ್ಗೊಂಡಿದರು. ಕಾರ್ಯಕ್ರಮದಲ್ಲಿ ಪ್ರತಿಜ್ಞಾ ವಿಧಿಯನ್ನು ಐಸಿಟಿಸಿ ಜಿಎಚ್ ಹುಮನಾಬಾದನ ಆಪ್ತ ಸಮಾಲೋಚಕರಾದ ಶ್ರೀಮತಿ. ಗೀತಾ ರೆಡ್ಡಿರವರು ಬೋಧಿಸಿದರು.

ಈ ಸಂದರ್ಭದಲ್ಲಿ

ಮುಖ್ಯ ವೈದ್ಯಾಧಿಕಾರಿಗಳಾದ ಡಾ. ನಾಗನಾಥ

ಹುಲಸೂರೆ, ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರಾದ ಸೂರ್ಯಕಾಂತ, ಬ್ಲಡಬ್ಯಾಂಕ ಕೇಂದ್ರದ ಸಿಬ್ಬಂದಿಯವರು, ವೀರಭದ್ರೇಶ್ವರ ಹೋಮಿಯೊಪತಿಕ ಮೆಡಿಕಲ ಕಾಲೇಜು ಮತ್ತು ಆಸ್ಪತ್ರೆಯ ಉಪನ್ಯಾಸಕರು, ವಿದ್ಯಾರ್ಥಿ/ವಿದ್ಯಾರ್ಥಿನಿಯರು, ಸಿಬ್ಬಂದಿಯವರು

ಸೇರಿದಂತೆ ಇತರರು ಉಪಸ್ಥಿತರಿದ್ದರು. ನಿರೂಪಣೆಯನ್ನು

ಡಾ.ಶ್ವೇತ ಮತ್ತು ವಂದರ್ನಾಪಣೆಯನ್ನು ಡಾ. ಭಾಗ್ಯಶ್ರೀ ನೇರವೇರಿಸಿದರು.

# ಇಂದು ಕಾರ್ಮಿಕರ ದಿನಾಚರಣೆ

## ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಹಡಪದ ಮನವಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಜೂ.20:ತಾಲೂಕ ಕನ್ನಡ ಸಾಹಿತ್ಯ ಪರಿಷತ್ತುವತಿಯಿಂದ ಕಾರ್ಮಿಕರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಕಸಾಪ ನಗರ ಘಟಕ ಅಧ್ಯಕ್ಷ ರಾಜಕುಮಾರ್ ಆರ್. ಹಡಪದ ತಿಳಿಸಿದ್ದಾರೆ. ಶನಿವಾರ ಜೂನ್ 21ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಪುರಸಭೆ ಆವರಣದಲ್ಲಿ ಪೌರ ಕಾರ್ಮಿಕರಿಗೆ, ಆರೋಗ್ಯ ಇಲಾಖೆ, ಕಂದಾಯ ಇಲಾಖೆಯ "ಡಿ" ದರ್ಜೆಯ ನೌಕರರಿಗೆ ಸನ್ಮಾನ ಕಾರ್ಯಕ್ರಮವನ್ನು ತಾಲುಕಾಧ್ಯಕ್ಷ ಅನೀಲಕುಮಾರ್ ಸಿಂಧೆ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ. ಕಾರ್ಯಕ್ರಮಕ್ಕೆ ಶಾಸಕ ಡಾ. ಸಿದ್ದು ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ್ ಪಾಟೀಲ್, ಭೀಮರಾವ ಪಾಟೀಲ್, ದಿಲೀಪಕುಮಾರ್ ಬಗ್ದಲಕ್ಕರ್, ನಸೀರ್ ಖಾನಸಾಬ್, ಸುರೇಶ್ ಚನ್ನಶೆಟ್ಟಿ, ಸೋಮಶೇಖರ ಬಿರಾದರ್



ಚಿದ್ರಿ, ಮಂಜುನಾಥ್ ಪಂಚಾಳ, ಹುಸಾಮುದ್ದೀನ್ ಬಾಬಾ, ಲಕ್ಷ್ಮೀ ಬಿರಾದರ್, ವೆಂಕಟೇಶ್ ಗುಡಾಳ್, ಡಾ. ಜಯಕುಮಾರ್ ಸಿಂಧೆ, ಡಾ. ವಿಜಯ ಹಿರಸಕ್ಕರ್, ಡಾ. ರವಿ ಸ್ವಾಮಿ ನಿರ್ಣಾ, ದೇವಪ್ಪ ಚಾಂಬೋಳೆ, ಗೌತಮ್ ಚಿಂತಲಗೇರಾ, ಮಾಣಿಕ ನೇಳಗಿ, ರಾಜಕುಮಾರ್ ಬೇಲೂರೆ, ರಾಜಶೇಖರ ಉಪ್ಪಿನ, ಅಶೋಕಕುಮಾರ್ ಮಹಿಂದ್ರಕ್ಕರ್, ರಾಜಪ್ಪ ಜಮಾದರ್, ಪ್ರೇಮಿಳಾರೆಡ್ಡಿ ಆಗಮಿಸಲಿದ್ದಾರೆ. ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಅಜೀವ ಸದಸ್ಯರು, ಕನ್ನಡ ಪರ ಸಂಘಟನೆಯ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕನ್ನಡ ಅಭಿಮಾನಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ರಾಜಕುಮಾರ ಆರ್.

ಹಡಪದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕನ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.20: ಪಟಣದ ಪಾನಿಪುರಿ ಅಂಗಡಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಅಂದಾಜು 12ವಯಸ್ಸಿನ ಬಾಲ ಕಾರ್ಮಿಕನನ್ನು ಶುಕ್ರವಾರ ಸಹಾಯ ವಾಣಿ ಸಂಖ್ಯೆ 112ರ ಪೊಲೀಸ್ ಸಿಬ್ಬಂದಿ ರಕ್ಷಣೆ ಮಾಡಿದ್ದಾರೆ.

ಕಲವಾಡಿ ರಸ್ತೆಯ ಬಿಕೆಐಟಿ ಕಾಲೇಜು ಸಮೀಪದ ಸಾಕ್ಷಿ ಚಾಟ್ ಭಂಡಾರ ಪಾನಿಪುರಿ ಅಂಗಡಿಯಲ್ಲಿ ಬಾಲ ಕಾರ್ಮಿಕನೊಬ್ಬ ಕೆಲಸ ಮಾಡುತ್ತಿರುವುದನ್ನು ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಗಮನಿಸಿ ಮಕ್ಕಳ ಸಹಾಯ ವಾಣಿ ಸಂಖ್ಯೆ 1098ಕ್ಕೆ ಕರೆ ಮಾಡಿ ಮಾಹಿತಿ ನೀಡಿದರು.

ಮಾಹಿತಿ ಅನ್ವಯ ಸಹಾಯವಾಣಿ 112ರ ಪೊಲೀಸ್ ಸಿಬ್ಬಂದಿ ತಕ್ಷಣ ಪಾನಿಪುರಿ ಅಂಗಡಿಗೆ ಭೇಟಿ ನೀಡಿ ಬಾಲಕಾರ್ಮಿಕನನ್ನು ಮನವೋಲಿಸಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸಿದರು. ಈ ಸಂದರ್ಭದಲ್ಲಿ ವಕೀಲ ನೀಲಕಂತ ಬಿರಾದಾರ್, ಪೊಲೀಸ್ ಸಿಬ್ಬಂದಿ ಹಾಜರಿದ್ದರು

ತಾಲೂಕಿನಲ್ಲಿ ಬಾಲ ಕಾರ್ಮಿಕರನ್ನು ರಕ್ಷಿಸಲು ತಾಲೂಕು ಮಟ್ಟದಲ್ಲಿ ಟಾಸ್ಕ್‌ಫೋರ್ಸ್ ಸಮಿತಿ ರಚಿಸಲಾಗಿದೆ. ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ತಿಂಗಳಲ್ಲಿ ಎರಡು ಸಲ ಕಡ್ಡಾಯವಾಗಿ ಸಭೆ ನಡೆಸಬೇಕು ಎಂಬ ನಿಯಮವೂ ಇದೆ. ಆದರೆ, ಸಮಿತಿ ಸಭೆಗಳು ಪರಿಣಾಮಕಾರಿ ನಡೆಯುತ್ತಿಲ್ಲ ಎನ್ನುವುದಕ್ಕೆ ಈ ಬಾಲ ಕಾರ್ಮಿಕ ಕೆಲಸ ಮಾಡುತ್ತಿರುವುದೇ ನಿದರ್ಶನವಾಗಿದೆ. ಪಟ್ಟಣದ ವಿವಿಧ ಹೋಟೆಲ್, ಬೇಕರಿ, ಗ್ಯಾರೇಜ್ ಸೇರಿ ಸಣ್ಣಪುಟ್ಟ ಅಂಗಡಿಗಳಲ್ಲಿ ಮಕ್ಕಳು ಕೆಲಸ ಮಾಡುತ್ತಿರುವ ದೃಶ್ಯ ಕಂಡು ಬರುತ್ತಿವೆ. ಜತೆಗೆ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ರೈಲ್ವೆ ಗೇಟ್ ಬಳಿ ಮಕ್ಕಳು ಬೀಕ್ಷಾಟನೆಯಲ್ಲಿ ತೊಡಗಿದ್ದರೂ ಮಕ್ಕಳ ರಕ್ಷಣೆಗೆ ಅಧಿಕಾರಿಗಳು ಮುಂದಾಗದಿರುವುದು ಸೋಜಿಗದ ಸಂಗತಿ.

ರಾಜ್ಯದಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸರಕಾರ ವಿವಿಧ ಕಟ್ಟುನಿಟ್ಟಿನ ಕ್ರಮ ಜರುಗಿಸುತ್ತಿದೆ. ಆದರೂ ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ಜೀವಂತವಾಗಿರುವುದು ಕಳವಳಕಾರಿ ಸಂಗತಿ. ಇನ್ನಾದರೂ ಬಾಲ ಕಾರ್ಮಿಕ ಅಧಿಕಾರಿಗಳು ಎಚ್ಚೆತ್ತುಕೊಂಡು ಜಿಲ್ಲೆಯಾದ್ಯಂತ ವಿವಿಧ ಹೋಟೆಲ್, ಅಂಗಡಿಗಳಲ್ಲಿ ಕೆಲಸ ಮಾಡುತ್ತಿರುವ ಬಾಲ ಕಾರ್ಮಿಕರನ್ನು ರಕ್ಷಿಸಿ ಶಿಕ್ಷಣ ಕೊಡಿಸುವ ಕೆಲಸ ಮಾಡಬೇಕು.

– ಶಶಿಧರ ಕೋಸಂಬೆ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು

# ಯೋಗ ಜಾಥಾ (ಯೋಗ ನಡಿಗೆ) ಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.20:11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಆಯುಷ್ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಯೋಗ ಜಾಥಾ (ಯೋಗ ನಡಿಗೆ) ಕ್ಕೆ ಕಲಬುರಗಿ ನಗರದ ಜಗತ್ ವೃತ್ತದಲ್ಲಿ ಕಲಬುರಗಿ ದಕ್ಷಿಣ ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ಶುಕ್ರವಾರ ಚಾಲನೆ ನೀಡಿದರು. ನಂತರ ಅವರು ಮಾತನಾಡಿ, ಆರೋಗ್ಯಕರ ಜೀವನಕ್ಕಾಗಿ ಪ್ರತಿಯೊಬ್ಬರೂ ಯೋಗಾಸನ ಮಾಡಬೇಕು. ಇದ–ರಿಂದ ನಾವು ರೋಗಮುಕ್ತರಾಗಿ ಬದುಕಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ ಅವರು ಯೋಗದ ಮಹತ್ವವನ್ನು ಹೇಳಿದರು. ಕಲಬುರಗಿ ಪ್ರಭಾರ ಜಿಲ್ಲಾ ಆಯುಷ್ ಅಧಿಕಾರಿ ಡಾ. ಕೆ.ಬಿ. ಬಬಲಾದಿ ಅವರು ಮಾತನಾಡಿ, ಜೂನ್ 21 ರಂದು ಶನಿವಾರ ಜರುಗುವ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಎಲ್ಲಾ ಯೋಗ ಸಂಘ–ಸಂಸ್ಥೆಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲೆಯ ಯೋಗ ಸಂಸ್ಥೆಗಳಾದ ಪತಂಜಲಿ ಯೋಗ ಸಮಿತಿ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ, ಭೂಮಿ ಯೋಗ ಫೌಂಡೇಶನ್, ಓಂ ಯೋಗ ಕೇಂದ್ರ, ವಿವೇಕ ಜಾಗೃತಿ ಯೋಗ



ವಿದ್ಯಾಪೀಠ ಹರಿ ಓಂ ಯೋಗ ಕೇಂದ್ರ, ಸೃಷ್ಟಿ ಯೋಗ ಕೇಂದ್ರ, ಜೈ ಶ್ರೀರಾಮ ಯೋಗ ತಂಡ ಹಾಗೂ ಮಾನವೀಯ ಕಲ್ಯಾಣ ಟ್ರಸ್ಟ್‌ನ ಮುಖ್ಯಸ್ಥರು,

ಶಿಬಿರಾರ್ಥಿಗಳು ಹಾಗೂ ನಗರದ ಆಯುಷ್ ಕಾಲೇಜಿನ ಪ್ರಾಂಶುಪಾಲರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಕಲಬುರಗಿ ನಗರದ ಜಗತ್ ವೃತ್ತದಿಂದ ಆರಂಭಗೊಂಡ ಈ ಜಾಥಾವು (ಯೋಗ ನಡಿಗೆ) ಸರ್ದಾರ ವಲ್ಲಭ್‌ಭಾಯಿ ಪಟೇಲ್ ವೃತ್ತ ಮಾರ್ಗವಾಗಿ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಬಂದು ಕೊನೆಗೊಂಡಿತು.

# ಮೊಬೈಲ್ ಆ್ಯಪ್‌ಗಳಲ್ಲಿ ಸಂಪೂರ್ಣ ಮಾಹಿತಿಯೊಂದಿಗೆ ಗಣತಿ ಕಾರ್ಯವನ್ನು ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ

ಕಲಬುರಗಿ:ಜೂ,20:ಏಳನೇಯ ಸಣ್ಣ ನೀರಾವರಿ ಮತ್ತು ಎರಡನೇಯ ನೀರಿನಾಸರೆಗಳ ಗಣತಿಗಳ ಕಾರ್ಯವನ್ನು ಸಂಪೂರ್ಣ ಮಾಹಿತಿಯೊಂದಿಗೆ ಡಿಜಿಟಲ್ ಮೋಡ್ ಮೊಬೈಲ್ ಆ್ಯಪ್‌ಗಳಲ್ಲಿ ಕೈಗೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯ ತರುನ್ನುಮ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರದಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಏಳನೇಯ ಸಣ್ಣನೀರಾವರಿ ಮತ್ತು ಎರಡನೇಯ ನೀರಿನಾಸರೆಗಳ ಗಣತಿಗಳು ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಗಣತಿ ಕಾರ್ಯ ಮಾಡುವ ವಿಧಾನದ ಕುರಿತು ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ತಾಲ್ಲೂಕು ಮಟ್ಟದ ಮೇಲ್ವಿಚಾರಕರು, ತಹಶೀಲ್ದಾರು ಹಾಗೂ ಸಾಂಖ್ಯಿಕ ನಿರೀಕ್ಷಕರು ನಿಯಮಿತವಾಗಿ ಕ್ಷೇತ್ರ ಮೇಲ್ವಿಚಾರಣೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗಣತಿಯ ಮೇಲ್ವಿಚಾರಣೆ ಮತ್ತು ದತ್ತಾಂಶಗಳ ಪರಿಶೀಲನೆ ಕಾರ್ಯವನ್ನು ವೆಬ್ ಪೋರ್ಟಲ್ ಮೂಲಕ ಕಾರ್ಯನಿರ್ವಹಿಸಿ ಏಳನೇಯ ಸಣ್ಣ ನೀರಾವರಿ ಮತ್ತು 2ನೇ ನೀರಿನಾಸರೆಗಳ ಗಣತಿಗಳ ಕಾರ್ಯದ ಸಂಪೂರ್ಣ ಮಾಹಿತಿಯನ್ನು



ಅಧಿಕಾರಿಗಳು ನೀಡಬೇಕು ಎಂದರು.

ಗ್ರಾಮದ ಎಲ್ಲಾ ಯೋಜನೆಗಳ ವಿವರಗಳು ಮತ್ತು ಗ್ರಾಮದ ಇತರೇ ವಿವರಗಳು ಸಂಪೂರ್ಣವಾಗಿ ಪ್ರಪತ್ರದಲ್ಲಿ ನಮೂದಾಗಿರುವುದನ್ನು ಖಚಿತ ಪಡಿಸಿಕೊಳ್ಳಬೇಕು ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಮೂಲ ಕಾರ್ಯಕರ್ತರನ್ನಾಗಿ ತರಬೇತಿ ನೀಡಿ ಆದೇಶಸಲು ಸಣ್ಣನೀರಾವರಿ ಹಾಗೂ ಜಿಲ್ಲಾ ಸಂಖ್ಯಾಸಂಗ್ರಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಅಂತರ್ಜಲ ಯೋಜನೆಗಳನ್ನು 4 ವಿಧಗಳಾಗಿ ಅಗೆದಬಾವಿ, ಆಳವಲ್ಲದ ಕೊಳವೆಬಾವಿ, ಮಧ್ಯಮ ಆಳದ ಕೊಳವೆಬಾವಿ ಮತ್ತು ಆಳದ ಕೊಳವೆಬಾವಿಗಳಾಗಿ ವರ್ಗೀಕರಿಸಲಾಗಿದೆ ಹಾಗೂ ನೀರಿನಾಸರೆಯ ವಿಧಗಳು, ಹೊಂಡಗಳು, ಸರೋವರಗಳು ಕೆರೆಗಳ, ಜಲಾಶಯಗಳು, ಜಲಸಂರಕ್ಷಣಾ ಯೋಜನೆಗಳಾಗಿವೆ ಎಂದರು ಭಾರತ ಸರ್ಕಾರದ ಜಲಸಂಪನ್ಮೂಲ, ನದಿ ವಿಕಾಸ ಮತ್ತು ಗಂಗಾ ಸಂರಕ್ಷಣ ಇಲಾಖೆಯ ಶೇ.100 ರಷ್ಟು ಕೇಂದ್ರ ಪುರಸ್ಕೃತಿ " ಸಣ್ಣ ನೀರಾವರಿ ಅಂಕಿ–ಅಂಶಗಳ ಸಮನ್ವಯೀಕರಣ " ಪ್ರತಿ ಐದು ವರ್ಷಗಳಿಗೊಮ್ಮೆ ಸಣ್ಣ ನೀರಾವರಿ ಗಣತಿಯನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಗಣತಿ ಕಾರ್ಯಕ್ಕಾಗಿ ಕೇಂದ್ರ ಜಲ ಸಂಪನ್ಮೂಲ ಇಲಾಖೆಯು ಒಂದು ವೆಬ್ ಪೋರ್ಟಲ್ ಅನ್ನು ರೂಪಿಸಿದೆ. ಈ ವೆಬ್ ಪೋರ್ಟಲ್‌ನಲ್ಲಿ ಜಿಲ್ಲಾ User ನೋಂದಾಯಿಸಿ User Id ಮತ್ತು Pass-word ಸೃಜಿಸಿ ಅದನ್ನು ಸಂಬಂಧಿಸಿ ಅಧಿಕಾರಿಗಳಿಗೆ ನೀಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾ ಸಾಂಖ್ಯಿ ಸಂಗ್ರಹಣಾಧಿಕಾರಿ, ಜಯಶ್ರೀ ಕರ್ಜಗಿ, ಕಾರ್ಯನಿರ್ವಾಹಕ ಅಭಿಯಂತರರು ನಾಗಣ್ಣ ಬಾವಿ, ತಾಲೂಕಿನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರುಗಳು, ತಹಶೀಲ್ದಾರರು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.